24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ರಾಷ್ಟ್ರ ರಾಜಧಾನಿಯ ಕನ್ನಡ ಧ್ವನಿ · ನಿರಂತರ ನಿರ್ಭೀತ ನಿಖರ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 37 | ನವದೆಹಲಿ | ಬೆಲೆ ₹10 | ಆಗಸ್ಟ್ 2 2026, ಭಾನುವಾರ

PRCI

PUBLIC RELATIONS COUNCIL OF INDIA

COMMUNICATION FOR A BETTER WORLD

An inspiring Day of Recognition, Ideas, and Public Leadership

A high-level forum of PRCI on

TRANSFORMATIVE GOVERNANCE

Followed By

PRCI NEXTGEN GOVERNANCE AWARDS

Celebrating Excellence in Public Administration and Governance

22 YEARS OF PRCI

1.10 pm — Next GEN Awards Ceremony

Inauguration by — Hon'ble Shri Justice P B Bajanthri, Former Chief Justice, High Court of Judicature at Patna

Guests of Honor — Dr. Dharam Pal IAS, Advisor to the Union Public Service Commission (UPSC)

Shri B.V. Vittal, Executive Director (HR), National Fertilizers Limited (NFL)

Shri S. Venkat Narayan, Former Editor, India Today; President, Foreign Correspondents' Club

Excellence in Citizen Centric Urban Governance

Institutional Award

Bangalore Development Authority

Under the leadership of

Shri N.A. Haris

Chairman, BDA

Screening of the documentary

BDA Guarantee (PGRS)

Award acceptance and remarks

VENUE

INDIA HABITAT CENTRE
NEW DELHI

DATE | TIME

03.08.2026

11.00 AM ONWARDS

RECOGNISING EXCELLENCE
INSPIRING CHANGE.
BUILDING A BETTER TOMORROW.

## ನಿತ್ಯ ಪಂಚಾಂಗ 2.08.2026 ಭಾನುವಾರ



**ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ, ಆಷಾಢ-ಶ್ರಾವಣ ಮಾಸ**

**ಆಷಾಢ ಬಹುಳ, ಚೌತಿ, ಪೂರ್ವಾಭಾದ್ರಾ ನಕ್ಷತ್ರ, ಸಂಕಷ್ಟ ಚತುರ್ಥಿ ವಿಶ್ವ ಸ್ನೇಹಿ ದಿನ, ನೆಲೋಗಿ ಉತ್ಸವ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 12.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ರಾಜ್ಯ ಸುಭಿಕ್ಷವಾಗಿರಲಿ, ಸೇವೆಗೆ ತಾಳ್ಮೆ, ಶಕ್ತಿ ದೊರಕಲಿ: ಚಾಮುಂಡೇಶ್ವರಿ ತಾಯಿ ಬಳಿ ಸಿಎಂ ಪ್ರಾರ್ಥನೆ

**ಮೈಸೂರು, ಆ.1:** ರಾಜ್ಯ ಸದಾ ಸುಭಿಕ್ಷವಾಗಿರಲಿ. ಉತ್ತಮ ಮಳೆ ಬಂದು ರೈತರ ಬದುಕು, ವರ್ತಕರ ವ್ಯಾಪಾರ, ಮಕ್ಕಳ ವಿದ್ಯಾಭ್ಯಾಸ ಪ್ರಗತಿಯಾಗಲಿ. ಹಿರಿಯ ನಾಯಕರು ಗಳಿಗೆ ಸಮಾಜ ಸೇವೆ ಮಾಡುವ ಶಕ್ತಿ, ತಾಳ್ಮೆ ದೊರಕಲಿ ಎಂದು ತಾಯಿ ಚಾಮುಂಡೇಶ್ವರಿ ಬಳಿ ಪ್ರಾರ್ಥನೆ ಮಾಡಿದ್ದೇನೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ದೇವರ ದರ್ಶನದ ಬಳಿಕ ಮಾಧ್ಯಮಗಳಿಗೆ ಶನಿವಾರ ಪ್ರತಿಕ್ರಿಯೆ ನೀಡಿದರು.

ನಾನು ಇದೇ ಸ್ಥಳದಲ್ಲಿ ಈ ಹಿಂದೆ ಒಂದು ಮಾತು ಹೇಳಿದ್ದೇ. ಪ್ರಯತ್ನ ವಿಫಲ ಆದರೂ ಪ್ರಾರ್ಥನೆ ವಿಫಲ ಆಗೋದಿಲ್ಲ" ಎಂದು. ಇದರ ಬಗ್ಗೆ ಅನೇಕರು ಚರ್ಚೆ ಮಾಡಿದರು. ಸಂತೋಷ ಪಟ್ಟರು. ನಕ್ಕರು, ಟೀಕೆ ಮಾಡಿದರು. ಆದರೆ ನನಗೆ ನಂಬಿಕೆ, ಚಾಮುಂಡೇಶ್ವರಿ ತಾಯಿ ಆಶೀರ್ವಾದ ಇತ್ತು. ಮೈಸೂರಿಗೆ ಮೊದಲನೇ ಬಾರಿಗೆ ಮುಖ್ಯಮಂತ್ರಿಯಾಗಿ ಬಂದಿದ್ದೇನೆ. ದುಃಖವನ್ನು ದೂರ ಮಾಡುವ



ಚಾಮುಂಡಿ ತಾಯಿ ದುರ್ಗಾ ದೇವಿಯನ್ನ ದರ್ಶನ ಮಾಡಿದ್ದೇನೆ" ಎಂದರು.

**ಎಲ್ಲಾ ಧರ್ಮಗಳನ್ನು ಸಮಾನತೆಯಿಂದ ನೋಡಬೇಕು**

ನಾನು ನಂಬಿರುವ ಅಜ್ಜಯ್ಯ. ಈ ರಾಜ್ಯ ಯಾವ ರೀತಿ ಸುಭಿಕ್ಷವಾಗಿರಬೇಕು ಎಂದು ಯಾವಾಗಲೂ ಮಾರ್ಗದರ್ಶನ ಮಾಡುತ್ತಾ ಬಂದಿದ್ದಾರೆ. ಧರ್ಮ ಕಾಪಾಡಬೇಕಾದ್ದು ನಮ್ಮೆಲ್ಲರ ಕರ್ತವ್ಯ. ಯಾವುದೇ ಧರ್ಮ ಇರಲಿ. ಅವರವರ ನಂಬಿಕೆ ಆಚಾರ, ವಿಚಾರ. ಸರ್ಕಾರವು ಎಲ್ಲಾ ಧರ್ಮಗಳನ್ನು ಸಮಾನತೆಯಿಂದ ನೋಡಬೇಕಾದ್ದು ಜವಾಬ್ದಾರಿ. ಆ ನಿಟ್ಟಿನಲ್ಲಿ ನಾವು ಕೆಲಸ ಮಾಡುತ್ತಿದ್ದೇವೆ. ಕುವೆಂಪು ಅವರ ಮಾತಿನಂತೆ ಈ ರಾಜ್ಯ ಶಾಂತಿಯ ತೋಟ. ಇದನ್ನು ಕಾಪಾಡುವುದು ನಮ್ಮ ಮೊದಲನೆಯ ಕರ್ತವ್ಯ. ಈ ರಾಜ್ಯದಲ್ಲಿ ಒಂದು ಉತ್ತಮವಾದ ಒಂದು ಆಡಳಿತ ನಡೆಸಬೇಕು. ಸಾಧನೆ ಬಿಟ್ಟುಹೋಗಬೇಕು. ಎಂಬುದು ನನ್ನ ಧ್ಯೆಯ. ಎಲ್ಲರನ್ನೂ ಸಮಾನವಾಗಿ ಕರೆದುಕೊಂಡು ಹೋಗಬೇಕಿರುವುದು ನನ್ನ ಧರ್ಮ. ಧರ್ಮವನ್ನು ಎಲ್ಲ ಜನರ ಹಿತಕ್ಕೋಸ್ಕರ ಕಾಪಾಡಬೇಕು ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

# ತಾನು ಮಾಡಿದರೆ ರಾಜತಂತ್ರ, ಬೇರೆಯವರು ಮಾಡಿದರೆ ಅಪರಾಧ- ಹೊಸ ರಾಜಕೀಯ ಗಾದೆಗೆ ಮೋದಿ ಉದಾಹರಣೆ



ಬೆಂಗಳೂರು, ಆ.1: ತಾನು ಮಾಡಿದರೆ ರಾಜತಂತ್ರ, ಬೇರೆಯವರು ಮಾಡಿದರೆ ಅಪರಾಧ ಎಂಬ ಹೊಸ ರಾಜಕೀಯ ಗಾದೆಗೆ ನರೇಂದ್ರ ಮೋದಿಯವರೇ ಜೀವಂತ ಉದಾಹರಣೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ ಹರಿಪ್ರಸಾದ್ ಅವರು, ಪ್ರಧಾನಿ ಮೋದಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಶುಕ್ರವಾರ ರಾತ್ರಿ, ಪ್ರಧಾನಿ ಮೋದಿ ಅವರು ವಿಡಿಯೋವೊಂದನ್ನು ಬಿಡುಗಡೆ ಮಾಡಿದ್ದರು. ಅದರಲ್ಲಿ; ತಮ್ಮ ಮತ್ತು ತಮ್ಮ ತಾಯಿಯ ವಿರುದ್ಧ ಅವಹೇಳನ ಮಾಡಿದ ವಿದ್ಯಾರ್ಥಿ–ಯುವಜನರನ್ನು ಕ್ಷಮಿಸಿರುವುದಾಗಿ ಹೇಳಿಕೊಂಡಿದ್ದರು. ಮೋದಿ ಅವರ ಈ ಹೇಳಿಕೆಯನ್ನು ಹರಿಪ್ರಸಾದ್ ಟೀಕಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಂಚಿಕೊಂಡಿರುವ ಹರಿಪ್ರಸಾದ್, ದಶಕಗಳ ಕಾಲ ರಾಜಕೀಯ ವಿರೋಧಿಗಳ ವಿರುದ್ಧ ವೈಯಕ್ತಿಕ ನಿಂದನೆಗಳು, ಮಹಿಳೆಯರ ಅವಹೇಳನ ಹಾಗೂ ಕುಟುಂಬಗಳನ್ನು ಗುರಿಯಾಗಿಸಿಕೊಂಡ ರಾಜಕೀಯಕ್ಕೆ ಮೌನ ಸಮ್ಮತಿ ನೀಡಿದವರು, ಇಂದು ಮಾತೃಗೌರವದ ಬಗ್ಗೆ ಮಾತನಾಡುತ್ತಿರುವುದು ವಿಪರ್ಯಾಸ. ಇದು ಬೆಂಕಿ ಹಚ್ಚಿದವನೇ ಬಕೆಟ್ ಹಿಡಿದು ಅಗ್ನಿಶಾಮಕನಂತೆ ಪೋಸ್ ಕೊಡುವಂತಾಗಿದೆ ಎಂದು ವ್ಯಂಗ್ಯವಾಡಿದ್ದಾರೆ.

ಇಂದಿರಾ ಗಾಂಧಿ ಮತ್ತು ರಾಜೀವ್ ಗಾಂಧಿ ಹತ್ಯೆಯಂತಹ ವೈಯಕ್ತಿಕ ದುರಂತಗಳನ್ನು ಅನುಭವಿಸಿದ್ದರೂ, ರಾಹುಲ್ ಗಾಂಧಿ ಮತ್ತು ಪ್ರಿಯಾಂಕಾ ಗಾಂಧಿ ಅವರು ಪ್ರತೀಕಾರದ ಬದಲು ಕ್ಷಮೆ ಮತ್ತು ಮಾನವೀಯತೆಯನ್ನು ಆಯ್ಕೆ ಮಾಡಿಕೊಂಡಿದ್ದಾರೆ. ಅದು ಕ್ಯಾಮೆರಾ ಮುಂದೆ ಪ್ರದರ್ಶಿಸಿದ ಭಾವನಾತ್ಮಕತೆ ಅಲ್ಲ, ಬದುಕಿನ ಅನುಭವದಿಂದ ಬಂದ ಸಂಸ್ಕಾರ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ. ಸೋನಿಯಾ ಗಾಂಧಿ ಅವರನ್ನು ಜರ್ಸಿ ಹಸು ಎಂದು ನಿಂದಿಸಿದ ಸಂದರ್ಭ, ಸಂಸದೆ ರೇಣುಕಾ ಚೌಧರಿಯವರನ್ನು ಶೂರ್ಪನಖಿಗೆ ಹೋಲಿಸಿದ ಘಟನೆ, ಸುನಂದಾ ಪುಷ್ಕರ್ ಕುರಿತು ಅವಹೇಳನಕಾರಿ ಹೇಳಿಕೆಗಳು ನಡೆದಾಗ ಮಹಿಳೆಯರ ಗೌರವದ ಬಗ್ಗೆ ಪ್ರಧಾನಿ ಮೌನವಾಗಿದ್ದೇಕೆ ಎಂದು ಹರಿಪ್ರಸಾದ್ ಪ್ರಶ್ನಿಸಿದ್ದಾರೆ.

2014ರ ಬಳಿಕ ಸಾಮಾಜಿಕ ಜಾಲತಾಣಗಳಲ್ಲಿ ವಿರೋಧ ಪಕ್ಷದ ಮಹಿಳಾ ನಾಯಕರ ವಿರುದ್ಧ ನಡೆದ ಅವಹೇಳನಕಾರಿ ಅಭಿಯಾನಗಳ ಬಗ್ಗೆ ಪ್ರಧಾನಿ ಎಂದಾದರೂ ಖಂಡನೆ ವ್ಯಕ್ತಪಡಿಸಿದ್ದಾರೆಯೇ. ಮಹಿಳೆಯರನ್ನು ನಿಂದಿಸಬೇಡಿ ಎಂದು ತಮ್ಮ ಬೆಂಬಲಿಗರಿಗೆ ಒಂದು ಬಾರಿಯಾದರೂ ಮನವಿ ಮಾಡಿದ್ದಾರೆಯೇ ಎಂದು ಕೇಳಿದ್ದಾರೆ. ನೋಟು ಅಮಾನ್ಯೀಕರಣದ ಸಂದರ್ಭದಲ್ಲಿ ತಮ್ಮ ತಾಯಿಯ ಚಿತ್ರವನ್ನು ರಾಜಕೀಯ ಪ್ರಚಾರಕ್ಕೆ ಬಳಸಿಕೊಂಡಿದ್ದ ಪ್ರಧಾನಿ, ಈಗ ವಿದ್ಯಾರ್ಥಿಗಳ ಪ್ರತಿಭಟನೆ, ಬಂಧನ, ಪ್ರಕರಣಗಳು ಹಾಗೂ ಶಿಕ್ಷಣ ವ್ಯವಸ್ಥೆಯ ವೈಫಲ್ಯದಿಂದ ಗಮನ ಬೇರೆಡೆ ಸೆಳೆಯಲು ಮತ್ತೆ ತಾಯಿಯ ಹೆಸರನ್ನೇ ಭಾವನಾತ್ಮಕ ರಾಜಕೀಯದ ಸಾಧನವನ್ನಾಗಿ ಬಳಸುತ್ತಿದ್ದಾರೆ. ತಾಯಿಯ ಮೇಲಿನ ಪ್ರೀತಿ ಪವಿತ್ರವಾದದ್ದು; ಆದರೆ ರಾಜಕೀಯ ಲಾಭಕ್ಕಾಗಿ ಆ ಭಾವನೆಯನ್ನು ಬಳಸುವುದು ಸರಿಯಲ್ಲ ಎಂದು ಹರಿಪ್ರಸಾದ್ ಹೇಳಿದ್ದಾರೆ.

# ಉತ್ತರ ಕರ್ನಾಟಕದ ಅಭಿವೃದ್ಧಿಯ ಶಿಲ್ಪಿ ಪದ್ಮಶ್ರೀ ಡಾ. ಪ್ರಭಾಕರ ಕೋರೆ: ಶೆಟ್ಟರ್ ಶ್ಲಾಘನೆ

## ಕೆಎಲ್‌ಇ ಸಂಸ್ಥೆಯಿಂದ ಬೆಳಗಾವಿಗೆ ಜಾಗತಿಕ ಖ್ಯಾತಿ; ಅಂಕಲಿಯಲ್ಲಿ 79ನೇ ಜನ್ಮದಿನದ ಅಂಗವಾಗಿ ಭವ್ಯ ಸನ್ಮಾನ

**ಬೆಳಗಾವಿ, ಆ.1:** ಶಿಕ್ಷಣ, ಆರೋಗ್ಯ, ಸಹಕಾರ ಮತ್ತು ಕೈಗಾರಿಕಾ ಕ್ಷೇತ್ರಗಳಲ್ಲಿ ಕಳೆದ ನಾಲ್ಕು ದಶಕಗಳಿಂದ ಪದ್ಮಶ್ರೀ ಡಾ. ಪ್ರಭಾಕರ ಕೋರೆ ಅವರು ಮಾಡಿರುವ ಸೇವೆ ಉತ್ತರ ಕರ್ನಾಟಕದ ಅಭಿವೃದ್ಧಿಗೆ ಭದ್ರ ಅಡಿಪಾಯವಾಗಿದೆ. ಕೆಎಲ್‌ಇ ಸಂಸ್ಥೆಯಿಂದ ಬೆಳಗಾವಿಗೆ ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ವಿಶೇಷ ಗುರುತನ್ನು ತಂದುಕೊಟ್ಟಿದ್ದಾರೆ. ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ಅವರ ಅನುಭವವನ್ನು ಇನ್ನಷ್ಟು ದೊಡ್ಡ ಮಟ್ಟದಲ್ಲಿ ಸಮಾಜದ ಹಿತಕ್ಕಾಗಿ ಬಳಸಿಕೊಳ್ಳಬೇಕು," ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಜಗದೀಶ ಶೆಟ್ಟರ್ ಹೇಳಿದರು.

ಹುಟ್ಟೂರು ಅಂಕಲಿಯ ಕೆಎಲ್‌ಇ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಮಾಜಿ ರಾಜ್ಯಸಭಾ ಸದಸ್ಯರು, ಕೆಎಲ್‌ಇ ಸಂಸ್ಥೆಯ ಗೌರವ ಕಾರ್ಯಾಧ್ಯಕ್ಷರು ಹಾಗೂ ಪದ್ಮಶ್ರೀ ಡಾ. ಪ್ರಭಾಕರ ಕೋರೆ 79ನೇ ಜನ್ಮದಿನದ ಅಂಗವಾಗಿ ಆಯೋಜಿಸಿದ್ದ ಭವ್ಯ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು. ವಿಧಾನ ಪರಿಷತ್ ಸದಸ್ಯ ಹಾಗೂ ರಾಜ್ಯ ಸರ್ಕಾರದ ದೆಹಲಿ ವಿಶೇಷ ಪ್ರತಿನಿಧಿ ಪ್ರಕಾಶ ಹುಕ್ಕೇರಿ ಅಧ್ಯಕ್ಷತೆ ವಹಿಸಿದ್ದರು.

ಕೆಎಲ್‌ಇ ಸಂಸ್ಥೆಯ ಮೂಲಕ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ ರೂಪುಗೊಂಡಿದೆ. ಬೆಳಗಾವಿನಲ್ಲಿ ರಾಜ್ಯ ವಿಧಾನಮಂಡಲದ ಅಧಿವೇಶನಗಳು ನಡೆಯಲು ಹಾಗೂ ಸುವರ್ಣಸೌಧ ನಿರ್ಮಾಣಕ್ಕೆ ಡಾ. ಕೋರೆ ಅವರ ಕೊಡುಗೆ ಮಹತ್ವದ್ದಾಗಿದೆ. ಶಿಕ್ಷಣದ ಜೊತೆಗೆ ಆರೋಗ್ಯ, ಸಹಕಾರ ಹಾಗೂ ಕೈಗಾರಿಕಾ ಕ್ಷೇತ್ರಗಳಲ್ಲಿ ಅವರು ನಿರ್ಮಿಸಿರುವ ಸಂಸ್ಥೆಗಳು ಇಂದು ಲಕ್ಷಾಂತರ ಕುಟುಂಬಗಳಿಗೆ ಆಶ್ರಯವಾಗಿವೆ. ಮೂರು ಸಕ್ಕರೆ ಕಾರ್ಖಾನೆಗಳ ಮೂಲಕ ಸಾವಿರಾರು ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸಿ ಗ್ರಾಮೀಣ ಆರ್ಥಿಕತೆಗೆ ಬಲ ತುಂಬಿದ್ದಾರೆ. ಪದ್ಮಶ್ರೀ ಪ್ರಶಸ್ತಿ ಅವರ ಸಮಾಜಮುಖಿ ಕಾರ್ಯಕ್ಕೆ ಸಂದ ರಾಷ್ಟ್ರೀಯ ಗೌರವವಾಗಿದೆ ಎಂದು ಹೇಳಿದರು.

ಶ್ರೀಶೈಲ ಮಠದ ಪೀಠಾಧಿಪತಿ ಡಾ. ಚನ್ನಸಿದ್ದರಾಮ ಪಂಡಿತರಾಧ್ಯ ಶಿವಾಚಾರ್ಯ ಸ್ವಾಮೀಜಿ ಸಸಿಗೆ ನೀರುಣಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಮಾಜಿ ಶಾಸಕ ಅನಿಲ್ ಬೆನಕೆ ಮಾತನಾಡಿ, ಕೆಎಲ್‌ಇ ಆಸ್ಪತ್ರೆಯಿಂದ ಸಾವಿರಾರು ರೋಗಿಗಳಿಗೆ ಜೀವದಾನ ದೊರೆತಿದೆ. ಕೊರೊನಾ ಮಹಾಮಾರಿ ಸಂದರ್ಭದಲ್ಲೂ ಸಾಮಾನ್ಯ ಜನರಿಗೆ ಆರೋಗ್ಯ ಸೇವೆ ಒದಗಿಸುವಲ್ಲಿ ಡಾ. ಕೋರೆ ಅವರ ಸೇವೆ ಅಮೋಘವಾಗಿದೆ ಎಂದು ಹೇಳಿದರು.

ಶಾಸಕಿ ಶಶಿಕಲಾ ಜೊಲ್ಲೆ ಮಾತನಾಡಿ, ಕೆಲವೇ ಸಂಸ್ಥೆಗಳಿಂದ ಆರಂಭವಾದ ಕೆಎಲ್‌ಇ ಇಂದು 300ಕ್ಕೂ ಹೆಚ್ಚು ಶಾಖೆಗಳನ್ನು ಹೊಂದಿರುವುದು ಡಾ. ಕೋರೆ ಅವರ ದೂರದೃಷ್ಟಿಯ ಫಲವಾಗಿದೆ. ಪ್ರತಿವರ್ಷ ಲಕ್ಷಾಂತರ ವಿದ್ಯಾರ್ಥಿಗಳು ಇಲ್ಲಿ ವಿದ್ಯಾಭ್ಯಾಸ ಮಾಡಿ ದೇಶ–ವಿದೇಶಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಹೇಳಿದರು.

ಶಾಸಕ ಗಣೇಶ ಹುಕ್ಕೇರಿ ಮಾತನಾಡಿ, ರಾಜಕೀಯ ಭಿನ್ನಾಭಿಪ್ರಾಯಗಳಿದ್ದರೂ ಅಭಿವೃದ್ಧಿಯ ವಿಷಯದಲ್ಲಿ ಎಲ್ಲರೂ ಒಂದಾಗಿದ್ದೇವೆ. ಡಾ. ಕೋರೆ ಅವರ ಮಾರ್ಗದರ್ಶನದಿಂದ ಈ ಭಾಗದ ಅನೇಕ ಅಭಿವೃದ್ಧಿ ಕಾರ್ಯಗಳಿಗೆ ವೇಗ ಸಿಕ್ಕಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಮಾಜಿ ಸಂಸದ ಅಣ್ಣಾಸಾಹೇಬ ಜೊಲ್ಲೆ, ಮಾಜಿ ಸಚಿವ ವೀರಕುಮಾರ ಪಾಟೀಲ, ಶಾಸಕ ದುರ್ಯೋಧನ ಐಹೊಳೆ, ಮಾಜಿ ಶಾಸಕ ಮಹಾಂತೇಶ ದೊಡ್ಡಗೌಡರ ಸೇರಿದಂತೆ ಹಲವರು ಡಾ. ಕೋರೆ ಅವರ ಸೇವೆಯನ್ನು ಕೊಂಡಾಡಿದರು. ಸ್ವಾಗತ ಭಾಷಣದಲ್ಲಿ ಪ್ರೀತಿ ದೊಡ್ಡವಾಡ ಅವರು ಡಾ. ಕೋರೆ ಅವರ ಜೀವನ ಸೇವೆ, ಶಿಸ್ತು ಮತ್ತು ಸಮರ್ಪಣೆಯ ಪ್ರತೀಕವಾಗಿದೆ ಎಂದು ಹೇಳಿದರು. ಅಮಿತ್ ಕೋರೆ ಪ್ರಾಸ್ತಾವಿಕ ಮಾತನಾಡಿದರು. ಮಹೇಶ್ ಗುರುಣ್ಣವರ ಕಾರ್ಯಕ್ರಮ ನಿರೂಪಿಸಿದರು.

**- ತಾ.ಭಾ. ಪ್ರತಿನಿಧಿ । ಚಿಕ್ಕೋಡಿ**




ಅಂಕಲಿಯಲ್ಲಿ 79ನೇ ಜನ್ಮದಿನದ ಅಂಗವಾಗಿ ಪದ್ಮಶ್ರೀ ಡಾ. ಪ್ರಭಾಕರ ಕೋರೆ ಅವರನ್ನು ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್, ಪ್ರಕಾಶ ಹುಕ್ಕೇರಿ, ಶಾಸಕ ಗಣೇಶ ಹುಕ್ಕೇರಿ ಹಾಗೂ ಇತರ ಗಣ್ಯರು ಸನ್ಮಾನಿಸಿದರು.

### ಎಲ್ಲರ ಸಹಕಾರದಿಂದಲೇ ಪದ್ಮಶ್ರೀ ಗೌರವ ಡಾ. ಪ್ರಭಾಕರ ಕೋರೆ

ಸನ್ಮಾನ ಸ್ವೀಕರಿಸಿ ಮಾತನಾಡಿದ ಪದ್ಮಶ್ರೀ ಡಾ. ಪ್ರಭಾಕರ ಕೋರೆ, ಕಳೆದ ಎರಡು ತಿಂಗಳಿಂದ ರೈತರು ಮಳೆಯ ನಿರೀಕ್ಷೆಯಲ್ಲಿದ್ದರು. ಇಂದು ಕಾರ್ಯಕ್ರಮದ ವೇಳೆ ಸುರಿದ ಮಳೆ ದೇವರ ಆಶೀರ್ವಾದವಾಗಿದೆ. ಈ ಭಾಗದ ಜನತೆ, ಸಹೋದ್ಯೋಗಿಗಳು ಹಾಗೂ ಕಾರ್ಯಕರ್ತರ ಸಹಕಾರದಿಂದಲೇ ನನಗೆ ಪದ್ಮಶ್ರೀ ಪ್ರಶಸ್ತಿ ಲಭಿಸಿದೆ. ಮುಂದೆಯೂ ಇದೇ ರೀತಿಯ ಸಹಕಾರ ದೊರೆಯಲಿ ಎಂದು ಆಶಿಸಿದರು.

### ರಕ್ತದಾನ, ಗೋಸೇವೆ ಮೂಲಕ ಜನ್ಮದಿನ ಆಚರಣೆ

ಜನ್ಮದಿನದ ಅಂಗವಾಗಿ ಕೆಎಲ್‌ಇ ಡಾ. ಪ್ರಭಾಕರ ಕೋರೆ ವೈದ್ಯಕೀಯ ಹಾಗೂ ಸಂಶೋಧನಾ ಕೇಂದ್ರದ ವತಿಯಿಂದ ಅಂಕಲಿಯಲ್ಲಿ ಬೃಹತ್ ರಕ್ತದಾನ ಶಿಬಿರ ಆಯೋಜಿಸಲಾಗಿತ್ತು. ಚಿಕ್ಕೋಡಿ, ಅಥಣಿ ಹಾಗೂ ರಾಯಬಾಗ ತಾಲೂಕುಗಳ 400ಕ್ಕೂ ಹೆಚ್ಚು ರಕ್ತದಾನಿಗಳು ಭಾಗವಹಿಸಿದರು. ಗೋಶಾಲೆಗೆ ಮೇವು ದಾನ ಮಾಡಲಾಯಿತು. ಬೆಳಿಗ್ಗೆ ಡಾ. ಕೋರೆ ವಿವಿಧ ದೇವಾಲಯಗಳಿಗೆ ಭೇಟಿ ನೀಡಿ ದರ್ಶನ ಪಡೆದರು. ಅವರ ನಿವಾಸದಲ್ಲಿ ದಿನವಿಡೀ ವಿವಿಧ ಕ್ಷೇತ್ರಗಳ ಗಣ್ಯರು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಶುಭಾಶಯ ಸಲ್ಲಿಸಿದರು.

# ಗ್ರಾ.ಪಂ. ಅಭಿವೃದ್ಧಿ ಇಲಾಖೆಯಲ್ಲಿ ಶೀಘ್ರ 1400 ಹುದ್ದೆಗಳ ಭರ್ತಿ: ಸಚಿವ ಖಂಡ್ರೆ

**ಬೆಂಗಳೂರು, ಆ.1:** ಸರ್ಕಾರಿ ಅಧಿಕಾರಿಗಳ ಹುದ್ದೆ, ಅಧಿಕಾರ, ದರ್ಪ ಚಲಾವಣೆಗೆ ಅಲ್ಲ, ಬದಲಾಗಿ ಅದು ಜನಸೇವೆ ಮಾಡಲು ಸಿಕ್ಕ ಅವಕಾಶ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ.

ಕಲ್ಯಾಣ ಕರ್ನಾಟಕ ವೃಂದದ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗೆ ಹೊಸದಾಗಿ ನೇಮಕಗೊಂಡಿರುವ 66 ಅಭ್ಯರ್ಥಿಗಳಿಗೆ ನೇಮಕಾತಿ ಪತ್ರ ವಿತರಿಸಿ, ಪ್ರಾಮಾಣಿಕತೆ, ದಕ್ಷತೆ ಮತ್ತು ನಿಷ್ಠೆಯ ಪ್ರಮಾಣ ವಚನ ಭೋಧಿಸಿ ಮಾತನಾಡಿ ಅವರು, ರಾಜ್ಯದಲ್ಲಿರುವ ಎಲ್ಲ 5927 ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಅಧಿಕಾರಿಗಳು ಸ್ವಾರ್ಥ ಮರೆತು, ಇಚ್ಛಾಶಕ್ತಿಯಿಂದ ಕೆಲಸ ಮಾಡಿದರೆ ಪ್ರತಿ ಗ್ರಾಮವೂ ಆದರ್ಶಗ್ರಾಮವಾಗುತ್ತದೆ ಎಂದರು.

ಗ್ರಾಮೀಣ ಪ್ರದೇಶದಲ್ಲಿ ನಗರ, ಪಟ್ಟಣಗಳಲ್ಲಿರುವಂತೆ ಮೂಲಭೂತ ಸೌಕರ್ಯ ನೀಡಿದರೆ ವಲಸೆ ತಡೆಯಲು ಸಾಧ್ಯವಾಗುತ್ತದೆ. ಗ್ರಾಮಗಳ ಅಭಿವೃದ್ಧಿಯೂ ಆಗುತ್ತದೆ, ನಗರಗಳ ಮೇಲಿನ ಒತ್ತಡವೂ ತಗ್ಗುತ್ತದೆ ಎಂದು ಈಶ್ವರ ಖಂಡ್ರೆ ಹೇಳಿದರು. ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕುಡಿಯುವ ನೀರು ಪೂರೈಕೆ, ಗ್ರಾಮೀಣ ರಸ್ತೆ ಅಭಿವೃದ್ಧಿ, ಸ್ವಚ್ಛತೆ, ಗ್ರಾಮೀಣ ವಸತಿ, ಇ–ಸ್ವತ್ತು ಮೊದಲಾದ ಕಾರ್ಯಗಳನ್ನು ನಿಷ್ಠೆಯಿಂದ,



ವಿಳಂಬವಿಲ್ಲದೆ ಮಾಡಬೇಕು. ಗ್ರಾಮೀಣ ಜನರು ಪಂಚಾಯತಿ ಕಚೇರಿಗೆ ಅಲೆಯದ ರೀತಿಯಲ್ಲಿ ನಿಷ್ಠೆಯಿಂದ ಕೆಲಸ ಮಾಡಬೇಕು ಎಂದರು.

ಮಹಾತ್ಮಾ ಗಾಂಧೀಜಿ ಗ್ರಾಮ ಸ್ವರಾಜ್ಯದ ಕನಸನ್ನು ನನಸು ಮಾಡುವ ಮಹತ್ವದ ಜವಾಬ್ದಾರಿ ಪಂಚಾಯತಿ ಅಧಿಕಾರಿಗಳ ಮೇಲಿದೆ.

ಶತಮಾನಗಳ ಶಾಪದಿಂದ ಮತ್ತು ದಬ್ಬಾಳಿಕೆಯಿಂದ ತೀವ್ರ ಹಿಂದುಳಿದಿರುವ ಕಲ್ಯಾಣ ಕರ್ನಾಟಕದ ಜನರ ನೋವು ನಿಮಗೆ ಅರಿವಿದ್ದು, ನೀವು ಈ ಭಾಗದ ಗ್ರಾಮಗಳ ಅಭಿವೃದ್ಧಿಗಾಗಿ ಶ್ರಮಿಸಬೇಕು ಎಂದು ಕಿವಿಮಾತು ಹೇಳಿದರು.

ಉಳಿಕೆ ವೃಂದದಲ್ಲಿ 150 ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಆಯ್ಕೆಯಾಗಿದ್ದು, 3 ತಿಂಗಳ ಒಳಗಾಗಿ ವೈದ್ಯಕೀಯ ಪರೀಕ್ಷೆ, ಮೂಲ ಪ್ರಮಾಣ ಪತ್ರಗಳ ಪರಿಶೀಲನೆ ಪ್ರಕ್ರಿಯೆ ಮುಗಿಸಿ ನೇಮಕಾತಿ ಪತ್ರ ನೀಡಲಾಗುವುದು ಎಂದೂ ಈಶ್ವರ ಖಂಡ್ರೆ ತಿಳಿಸಿದರು.

ಹೊಸದಾಗಿ ನೇಮಕಗೊಂಡಿರುವ ಎಲ್ಲ ಪಿಡಿಓಗಳಿಗೆ ತರಬೇತಿ ನೀಡಿ, ಸ್ಥಳ ನಿಯೋಜನೆ ಮಾಡಲಾಗುವುದು ಎಂದ ಅವರು, 80 ಪಿಡಿಓಗಳ ವರ್ಗಾವಣೆಯನ್ನು ಕೌನ್ಸೆಲಿಂಗ್ ಮೂಲಕ ಪಾರದರ್ಶಕವಾಗಿ ಮಾಡಲಾಗಿದೆ ಎಂದು ತಿಳಿಸಿದರು.

ಸಮಾರಂಭದಲ್ಲಿ ಇಲಾಖೆಯ ಕಾರ್ಯದರ್ಶಿ ಡಿ. ರಂದೀಪ್, ಆಯುಕ್ತೆ ಡಾ.ಅರುಂಧತಿ ಚಂದ್ರಶೇಖರ್ ಮತ್ತಿತರರು ಪಾಲ್ಗೊಂಡಿದ್ದರು.

# ಮೈಸೂರು ವಿಭಾಗದ ಚೆಸ್ಕಾಂ ವ್ಯಾಪ್ತಿಯಲ್ಲಿ 53.1% ಗೃಹಜ್ಯೋತಿ ಪರಿಷ್ಕರಣೆ ಕಾರ್ಯ ಪೂರ್ಣ: ದಿನೇಶ್ ಗೂಳಿಗೌಡ

**ಮೈಸೂರು ಜಿಲ್ಲೆಯಲ್ಲಿ 48.58%, ಮಂಡ್ಯ ಜಿಲ್ಲೆಯಲ್ಲಿ 59.68%, ಕೊಡಗು ಜಿಲ್ಲೆಯಲ್ಲಿ 56.70%, ಚಾಮರಾಜನಗರ ಜಿಲ್ಲೆಯಲ್ಲಿ 55.23%, ಹಾಸನ ಜಿಲ್ಲೆಯಲ್ಲಿ 52.90% ಪರಿಷ್ಕರಣೆ**

**ಗ್ಯಾರಂಟಿ ಯೋಜನೆಗಳಿಗಾಗಿ ಮದ್ದೂರು ತಾಲೂಕಿಗೆ 830.15 ಕೋಟಿ ರೂ.ವೆಚ್ಚ**

**ಮಂಡ್ಯ ಜಿಲ್ಲೆಯಲ್ಲಿ ಮರಣ ಹೊಂದಿದ ಗೃಹಲಕ್ಷ್ಮಿ ಯೋಜನೆ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮೆಯಾಗಿದ್ದ 61 ಲಕ್ಷ ರೂ. ಹಣ ಸರ್ಕಾರಕ್ಕೆ ವಾಪಸ್**

**ಮಂಡ್ಯ ಜಿಲ್ಲೆ ಮದ್ದೂರು ತಾಲೂಕು ಮಟ್ಟದ ಗ್ಯಾರಂಟಿ ಪ್ರಗತಿ ಪರಿಶೀಲನೆ**

ಮದ್ದೂರು, ಅ.1: ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಬೇಕು. ಯೋಜನೆ ದುರುಪಯೋಗ ಆಗದಂತೆ ತಡೆಯುವ ಉದ್ದೇಶದಿಂದ ಗೃಹಲಕ್ಷ್ಮಿ ಯೋಜನೆ ಹಾಗೂ ಗೃಹಜ್ಯೋತಿ ಯೋಜನೆ ಪರಿಷ್ಕರಣೆ ಮಾಡಲಾಗುತ್ತಿದೆ. ಪಂಚಗ್ಯಾರಂಟಿ ಯೋಜನೆಗಳಿಗಾಗಿ ಮದ್ದೂರು ತಾಲೂಕಿಗೆ ರಾಜ್ಯ ಸರ್ಕಾರ ಒಟ್ಟು 830.15 ಕೋಟಿ ರೂ. ಹಣವನ್ನು ವೆಚ್ಚ ಮಾಡಿದೆ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ಅವರು ಹೇಳಿದರು.

ಪಟ್ಟಣದ ತಾಪಂ ಸಭಾಂಗಣದಲ್ಲಿ ನಡೆದ ಮಂಡ್ಯ ಜಿಲ್ಲೆಯ ಮದ್ದೂರು ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮರಣ ಹೊಂದಿದವರ ಖಾತೆಗೂ ಗೃಹಲಕ್ಷ್ಮಿ ಹಣ ಸಂದಾಯವಾಗುತ್ತಿದೆ. ರಾಜ್ಯದಲ್ಲಿ 1.24 ಕೋಟಿ ಫಲಾನುಭವಿಗಳು ಇದ್ದು ಇವರಲ್ಲಿ 1,95,224 ಮಂದಿ ಫಲಾನುಭವಿಗಳು ಮೃತಪಟ್ಟಿದ್ದಾರೆ. ಮದ್ದೂರು ತಾಲೂಕಿನಲ್ಲಿ 2197 ಫಲಾನುಭವಿಗಳು ಮೃತಪಟ್ಟಿದ್ದಾರೆ. ಆದರೆ ಮೃತರ ಖಾತೆಗೆ ಹಣ ಜಮೆಯಾಗುವ ಮೂಲಕ ಯೋಜನೆ ದುರುಪಯೋಗ ಆಗುತ್ತಿದೆ. ಇದನ್ನು ತಡೆಯುವ ಉದ್ದೇಶದಿಂದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಯೋಜನೆ ಪರಿಷ್ಕರಣೆಗೆ ಸೂಚಿಸಿದ್ದಾರೆ.

ಆದರೆ ಅರ್ಹ ಫಲಾನುಭವಿಗಳನ್ನು ಯೋಜನೆಯಿಂದ ಕೈಬಿಡದಂತೆ ಸೂಚಿಸಿದ್ದಾರೆ ಎಂದರು.

ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳು ಮರಣ ಹೊಂದಿದ್ದಲ್ಲಿ ಅವರ ಹೆಸರನ್ನು ಎಷ್ಟು ದಿನದಲ್ಲಿ ಕೈಬಿಡಲಾಗುತ್ತಿದೆ? ಎಷ್ಟು ಮಹಿಳೆಯರಿಗೆ ಇದುವರೆಗೂ ಎಷ್ಟು ಹಣ ಡಿಬಿಟಿ ಆಗಿದೆ? ಖಾತೆಗೆ ಜಮೆಯಾಗಿರುವ ಹಣದಲ್ಲಿ ಎಷ್ಟು ವಾಪಸ್ಸು ಪಡೆದಿದ್ದೀರಿ ಎಂದು ಅಧಿಕಾರಿಗಳನ್ನು ಪ್ರಶ್ನಿಸಿದರು. ಇದಕ್ಕೆ ಉತ್ತರಿಸಿದ ಅಧಿಕಾರಿಗಳು, ಮಂಡ್ಯ ಜಿಲ್ಲೆಯಲ್ಲಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮೆ ಆಗಿದ್ದ 61 ಲಕ್ಷ ರೂ. ಹಣವನ್ನು ವಾಪಸ್ ಪಡೆದುಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ಒಂದು ಕುಟುಂಬ ಒಂದು ಸಂಪರ್ಕ ಎಂಬ ಉದ್ದೇಶದಿಂದ ಗೃಹಜ್ಯೋತಿ ಯೋಜನೆ ಆರಂಭಿಸಲಾಯಿತು. ರಾಜ್ಯದಲ್ಲಿ 1.67 ಕೋಟಿ ಮನೆಗಳಿಗೆ ಉಚಿತ ವಿದ್ಯುತ್ ನೀಡಲಾಗುತ್ತಿದೆ.



ಆದರೆ ಕೆಲವೆಡೆ ವಾಣಿಜ್ಯ ಉದ್ದೇಶಕ್ಕೆ ವಿದ್ಯುತ್ ಬಳಕೆ ಮಾಡಿಕೊಳ್ಳುತ್ತಿರುವ ಕುರಿತು ದೂರುಗಳು ಬಂದ ಹಿನ್ನೆಲೆಯಲ್ಲಿ ಯೋಜನೆ ಪರಿಷ್ಕರಣೆ ಮಾಡಲಾಗುತ್ತಿದೆ ಎಂದರು.

ರಾಜ್ಯದಲ್ಲಿ 62% ಪರಿಷ್ಕರಣೆ ಆಗಿದ್ದರೆ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ (ಚೆಸ್ಕಾಂ) ವ್ಯಾಪ್ತಿಯಲ್ಲಿ 53.1% ಗೃಹಜ್ಯೋತಿ ಪರಿಷ್ಕರಣೆ ಕಾರ್ಯ ನಡೆದಿದೆ. ಒಟ್ಟು 25,30,960 ಫಲಾನುಭವಿಗಳು ಇದ್ದು 10,67,615 ಮನೆಗಳ ಪರಿಷ್ಕರಣೆ ಮುಕ್ತಾಯವಾಗಿದೆ. ಮೈಸೂರು ಜಿಲ್ಲೆಯಲ್ಲಿ 48.58%, ಮಂಡ್ಯ ಜಿಲ್ಲೆಯಲ್ಲಿ 59.68%, ಕೊಡಗು ಜಿಲ್ಲೆಯಲ್ಲಿ 56.70%, ಚಾಮರಾಜನಗರ ಜಿಲ್ಲೆಯಲ್ಲಿ 55.23% ಹಾಗೂ ಹಾಸನ ಜಿಲ್ಲೆಯಲ್ಲಿ 52.90% ಪರಿಷ್ಕರಣೆ ಆಗಿದೆ ಎಂದು ಹೇಳಿದರು.

ನ್ಯಾಯಬೆಲೆ ಅಂಗಡಿಗಳು ನಿಗದಿತ ಸಮಯಕ್ಕೆ ತೆರೆಯಬೇಕು. ಕಾಳ ಸಂತೆಯಲ್ಲಿ ಅಕ್ಕಿ ಮಾರಾಟ ಮಾಡುವವರ ವಿರುದ್ಧ ಕ್ರಮಕೈಗೊಳ್ಳಬೇಕು. ಸರ್ಕಾರದ ನಿಯಮದಂತೆ ನ್ಯಾಯಬೆಲೆ ಅಂಗಡಿಗಳು ತೆರೆಯಬೇಕು ಎಂದು ಸೂಚನೆ ನೀಡಿದರು.

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳು ಮಹಿಳಾ ಸಬಲೀಕರಣ, ಆಹಾರ ಭದ್ರತೆ, ಉಚಿತ ವಿದ್ಯುತ್, ಉಚಿತ ಸಾರ್ವಜನಿಕ ಸಾರಿಗೆ ಹಾಗೂ ನಿರುದ್ಯೋಗಿ ಯುವಕರಿಗೆ ಆರ್ಥಿಕ ನೆರವು ಒದಗಿಸುವ ಮೂಲಕ ಸಮಾಜದ ವಿವಿಧ ವರ್ಗಗಳ ಜೀವನಮಟ್ಟ ಸುಧಾರಣೆಗೆ ಮಹತ್ವದ ಕೊಡುಗೆ ನೀಡುತ್ತಿವೆ ಎಂದರು.

ಸಭೆಯಲ್ಲಿ ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ರಾಮಲಿಂಗಯ್ಯ, ಮದ್ದೂರು ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಬಸವರಾಜು, ಉಪಾಧ್ಯಕ್ಷ ರಾಜಣ್ಣ, ಗ್ಯಾರಂಟಿ ಸಮಿತಿ ಸದಸ್ಯರು ಹಾಗೂ ತಾಲೂಕು ಪಂಚಾಯತ್ ಯೋಜನಾಧಿಕಾರಿ ಸುರೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಪಂಚಗ್ಯಾರಂಟಿ ಯೋಜನೆಗಳ ವಿವರ

**ಗೃಹಲಕ್ಷ್ಮಿ**

ಗೃಹಲಕ್ಷ್ಮಿ ಯೋಜನೆಯಡಿ 76,182 ಫಲಾನುಭವಿಗಳು ನೋಂದಣಿಯಾಗಿದ್ದು, ಶೇ.96ರಷ್ಟು ಮನೆಯ ಯಜಮಾನಿಯರಿಗೆ ಗೃಹಲಕ್ಷ್ಮಿ ಹಣ ನೇರವಾಗಿ ಬ್ಯಾಂಕ್ ಖಾತೆಗೆ ಜಮೆಯಾಗಿದೆ. ಇದುವರೆಗೂ 472.13 ಕೋಟಿ ರೂ. ಹಣ ಸಂದಾಯವಾಗಿದೆ. ಇದುವರೆಗೂ 31 ಕಂತುಗಳಲ್ಲಿ ಪ್ರತಿ ಮನೆಯ ಯಜಮಾನಿ ಖಾತೆಗೆ ತಲಾ 2000 ರೂ.ಗಳಂತೆ ಒಟ್ಟು 62,000 ರೂ. ಹಣವನ್ನು ಸಂದಾಯ ಮಾಡಲಾಗಿದೆ. ಈ ಯೋಜನೆಯಡಿ ನೋಂದಣಿ ಆದವರ ಪೈಕಿ 2197 ಫಲಾನುಭವಿಗಳು ಮೃತಪಟ್ಟಿದ್ದಾರೆ.

**ಗೃಹಜ್ಯೋತಿ:** ಗೃಹಜ್ಯೋತಿ ಯೋಜನೆಯಡಿ 83,911 ಕುಂಟುಬಗಳು ನೋಂದಣಿಯಾಗಿವೆ. ಇವುಗಳಲ್ಲಿ 80,199 ಮನೆಗಳಿಗೆ 200 ಯುನಿಟ್ ಗಳವರೆಗೆ ಉಚಿತ ವಿದ್ಯುತ್ ನೀಡಲಾಗುತ್ತಿದ್ದು, ಇದಕ್ಕೆ ತಗುಲಿರುವ 102.36 ಕೋಟಿ ರೂ. ಹಣವನ್ನು ರಾಜ್ಯ ಸರ್ಕಾರ ವಿದ್ಯುತ್ ನಿಗಮ ಕಂಪನಿಗೆ ಸಂದಾಯ ಮಾಡಿದೆ.

**ಶಕ್ತಿ:** ಶಕ್ತಿ ಯೋಜನೆಯಡಿ ಇದುವರೆಗೂ 4,04,17,476 ಮಹಿಳೆಯರು ಉಚಿತವಾಗಿ ಬಸ್‌ನಲ್ಲಿ ಪ್ರಯಾಣಿಸಿದ್ದಾರೆ. ಇದುವರೆಗೂ 122.74 ಕೋಟಿ ರೂ. ಮೊತ್ತದ ಟಿಕೆಟ್ ಹಣವನ್ನು ಸಾರಿಗೆ ನಿಗಮಕ್ಕೆ ಸರ್ಕಾರ ಪಾವತಿಸಿದೆ. ಪ್ರತಿದಿನ ಸರಾಸರಿ 35,000 ಮಹಿಳೆಯರು ಉಚಿತವಾಗಿ ಪ್ರಯಾಣ ಮಾಡುತ್ತಿದ್ದಾರೆ.

**ಅನ್ನಭಾಗ್ಯ:** ಅನ್ನಭಾಗ್ಯ ಯೋಜನೆಯಡಿ 240063 ಫಲಾನುಭವಿಗಳಿಗೆ ನೇರ ನಗದು ಮೂಲಕ 71.90 ಕೋಟಿ ರೂ. ಹಣವನ್ನು ಸಂದಾಯ ಮಾಡಲಾಗಿದೆ. 76,466 ಕಾರ್ಡ್ ಗಳಿಗೆ 139 ನ್ಯಾಯಬೆಲೆ ಅಂಗಡಿ ಮೂಲಕ 11,657 ಕ್ವಿಂಟಲ್ ಪಡಿತರ ಧಾನ್ಯವನ್ನು ಉಚಿತವಾಗಿ ವಿತರಣೆ ಮಾಡಲಾಗುತ್ತಿದೆ. ಇದರ ಒಟ್ಟು ಮೌಲ್ಯ 56.50 ಕೋಟಿ ರೂ.ಗಳಷ್ಟಾಗಿದೆ. ಅನ್ನಭಾಗ್ಯ ಯೋಜನೆಗಾಗಿ ಒಟ್ಟು 128.40 ಕೋಟಿ ರೂ. ಹಣವನ್ನು ಸರ್ಕಾರ ವೆಚ್ಚ ಮಾಡಿದೆ.

**ಯುವನಿಧಿ**

ಯುವನಿಧಿ ಯೋಜನೆಯಡಿ 1452 ಪದವೀಧರ ಮತ್ತು 23 ಡಿಪ್ಲೊಮಾ ಪದವೀಧರರು ಸೇರಿದಂತೆ ಒಟ್ಟು 1475 ನಿರುದ್ಯೋಗ ಯುವಕರು ಯುವನಿಧಿ ಯೋಜನೆಯಡಿ ನೋಂದಣಿಯಾಗಿದ್ದು 4.52 ಕೋಟಿ ರೂ.ಹಣ ಫಲಾನುಭವಿಗಳ ಖಾತೆಗೆ ಡಿಬಿಟಿ ಮುಖಾಂತರ ಜಮೆಯಾಗಿದೆ.

**38 ಗ್ರಾಪಂಗಳಲ್ಲಿ ಗ್ಯಾರಂಟಿ ಸಮಿತಿ ಸದಸ್ಯರ ನೇಮಕ ಶೀಘ್ರ**

ಗ್ಯಾರಂಟಿ ಯೋಜನೆಗಳು ಅರ್ಹರಿಗೆ ಸರಿಯಾಗಿ ತಲುಪುತ್ತವೆಯೇ ಎಂಬುದನ್ನು ಮೇಲ್ವಿಚಾರಣೆ ಮಾಡಲು ಮತ್ತು ಪರಿಶೀಲಿಸಲು ಗ್ರಾಮ ಪಂಚಾಯತ್ ಮಟ್ಟದಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿಗಳನ್ನು ರಚಿಸಲಾಗುತ್ತದೆ. ರಾಜ್ಯ ಮಟ್ಟದಿಂದ ಸ್ಥಳೀಯ ಮಟ್ಟದವರೆಗೆ ವಿಸ್ತರಿಸಿರುವ ವ್ಯವಸ್ಥೆ ಇದಾಗಿದೆ. ತಾಲೂಕಿನ ಒಟ್ಟು 38 ಗ್ರಾಮಪಂಚಾಯಿತಿಗಳಲ್ಲಿ ಶೀಘ್ರದಲ್ಲೇ ಗ್ಯಾರಂಟಿ ಸಮಿತಿ ಸದಸ್ಯರನ್ನು ನೇಮಕ ಮಾಡಲಾಗುತ್ತದೆ. ಸಮಿತಿ ಒಟ್ಟು ಆರು ಜನರನ್ನು ಒಳಗೊಂಡಿರಲಿದೆ. ಇದರಲ್ಲಿ ಇಬ್ಬರು ಮಹಿಳೆಯರು, ಒಬ್ಬರು ಹಿಂದುಳಿದ ವರ್ಗ, ಒಬ್ಬರು ಎಸ್ ಸಿ ಅಥವಾ ಎಸ್ ಟಿ ಸಮುದಾಯಕ್ಕೆ ಸೇರಿದವರು ಒಬ್ಬರು ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದವರಾಗಿರುತ್ತಾರೆ ಎಂದು ದಿನೇಶ್ ಗೂಳಿಗೌಡ ಅವರು ಹೇಳಿದರು.

**ಮದ್ದೂರು ತಾಲೂಕಿನ ಅಭಿವೃದ್ಧಿಗೆ 2000 ಕೋಟಿ**

ಮದ್ದೂರು ಕ್ಷೇತ್ರದ ಶಾಸಕ ಉದಯ್ ಅವರು ಸಾಕಷ್ಟು ಅಭಿವೃದ್ಧಿ ಕಾರ್ಯಕ್ರಮಗಳನ್ನು ಮಾಡುತ್ತಿದ್ದಾರೆ. ಕ್ಷೇತ್ರದ ಅಭಿವೃದ್ಧಿಗೆ 2000 ಕೋಟಿ ರೂ. ಅನುದಾನವನ್ನು ತಂದಿದ್ದಾರೆ. ಗ್ಯಾರಂಟಿ ಯೋಜನೆಗಳ ಜೊತೆಗೆ ಕ್ಷೇತ್ರದ ಅಭಿವೃದ್ಧಿಗೆ ಸಹ ಒತ್ತು ನೀಡುವ ಮೂಲಕ ಕಾಂಗ್ರೆಸ್ ಸರ್ಕಾರ ಮದ್ದೂರು ತಾಲೂಕಿಗೆ 2800 ಕೋಟಿ ರೂ. ಗೂ ಅಧಿಕ ಹಣ ಬಿಡುಗಡೆ ಮಾಡಿರುವುದು ಇತಿಹಾಸದಲ್ಲಿ ಇದೇ ಮೊದಲು ಎಂದು ಪ್ರಶಂಸೆ ವ್ಯಕ್ತಪಡಿಸಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಆಗಸ್ಟ್ 2 2026, ಭಾನುವಾರ

# ದೇಶದ ಯುವಪೀಳಿಗೆಗೆ ವಿವೇಕಾನಂದ ಪ್ರೇರಣೆ: ಪ್ರಧಾನಿ ನರೇಂದ್ರ ಮೋದಿ ಬಣ್ಣನೆ




## ಮೈಸೂರು ರಾಮಕೃಷ್ಣ ಆಶ್ರಮದಲ್ಲಿ ವಿವೇಕ ಸ್ಮಾರಕ ಲೋಕಾರ್ಪಣೆ, ಸಾಂಸ್ಕೃತಿಕ ನಗರದ ಸ್ವಚ್ಛತೆಗೆ ಶ್ಲಾಘನೆ

**ಮೈಸೂರು, ಆ.1: ಮೈಸೂರು ಭಾರತದ ಸಾಂಸ್ಕೃತಿಕ ಕೇಂದ್ರವಾಗಿದೆ ಸ್ವಾಮಿ ವಿವೇಕಾನಂದರು ದೇಶದ ಯುವಕರಿಗೆ ಪ್ರೇರಣೆ. ದೇಶದ ಯುವಕರ ಸಾಮರ್ಥ್ಯದಿಂದ ಆರ್ಥಿಕತೆ ಬೆಳೆಯುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.**

ನಗರದ ರಾಮಕೃಷ್ಣ ಆಶ್ರಮದಲ್ಲಿ ಶನಿವಾರ ವಿವೇಕ ಸ್ಮಾರಕ ಉದ್ಘಾಟಿಸಿದ ಅವರು, ನಂತರ ವಿವೇಕ ಸ್ಮಾರಕದ ಬಳಿ ಧ್ಯಾನ ಮಾಡಿ, ಮ್ಯೂಸಿಯಂ ವೀಕ್ಷಣೆ, ವಿವೇಕಾನಂದರ ಬೋಧನೆಗಳನ್ನು ಓದಿದರು. ಇದಾದ ಬಳಿಕ ವೇದಿಕೆ ಕಾರ್ಯಕ್ರಮದಲ್ಲಿ ಪ್ರಧಾನಿ ಮೋದಿ ಅವರಿಗೆ ಶಿಲ್ಪಿ ಅರುಣ್ ಯೋಗಿರಾಜ್ ಕೆತ್ತಿದ ವಿವೇಕಾನಂದರ ಮೂರ್ತಿಯನ್ನು ನೀಡಿ ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಪ್ರಧಾನಿ ಮೋದಿ ಕನ್ನಡದಲ್ಲೇ ಮಾತು ಆರಂಭಿಸಿ ಮೊದಲಿಗೆ ಚಾಮುಂಡೇಶ್ವರಿ ತಾಯಿಗೆ ನಮಸ್ಕರಿಸುತ್ತೇನೆ. ಮೈಸೂರು ಭಾರತದ ಸಾಂಸ್ಕೃತಿಕ ಕೇಂದ್ರವಾಗಿದೆ. ವಿವೇಕ ಸ್ಮಾರಕ ಉದ್ಘಾಟಿಸಿದ್ದು ನನ್ನ ಸೌಭಾಗ್ಯ. ಮೈಸೂರು ತನ್ನ ಪರಂಪರೆಯನ್ನು ಕಾಯ್ದುಕೊಂಡು ಬಂದಿದೆ. ಮೈಸೂರು ಭಾರತದದ ಅತಿ ಸ್ವಚ್ಛ ನಗರ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಎರಡು ದಿನದ ಹಿಂದೆ ಗುರು ಪೂರ್ಣಿಮೆ ಆಚರಿಸಿದ್ದೇವೆ.


ಮೈಸೂರಿನಲ್ಲಿ ವಿವೇಕ ಸ್ಮಾರಕವನ್ನು ಲೋಕಾರ್ಪಣೆ ಮಾಡಿದ ಪ್ರಧಾನಿ ಮೋದಿ. ಸಿಎಂ ಡಿ.ಕೆ.ಶಿವಕುಮಾರ್ ಇದ್ದರು

ಮೈಸೂರಿನ ರಾಮಕೃಷ್ಣ ಆಶ್ರಮಕ್ಕೆ ಭೇಟಿ ನೀಡಿದ್ದು ನನ್ನ ಸೌಭಾಗ್ಯ. ಮೈಸೂರಿನ ರಾಮಕೃಷ್ಣ ಆಶ್ರಮದ ಸೇವೆ ಆಪಾರ. ವಿವೇಕಾನಂದರ ಜೀವನದಲ್ಲಿ ಮೈಸೂರಿನ ಪಾಲು ತುಂಬಾ ಇದೆ ಎಂದು ಬಣ್ಣಿಸಿದರು. ಸ್ವಾಮಿ ವಿವೇಕಾನಂದರು ದೇಶದ ಯುವಕರಿಗೆ ಪ್ರೇರಣೆ. ಭಾರತದ ಅರ್ಥವ್ಯವಸ್ಥೆ ಅತ್ಯಂತ ವೇಗವಾಗಿ ಬೆಳೆಯುತ್ತಿದೆ ಭಾರತದ ಯುವಕರ ಸಾಮರ್ಥ್ಯದಿಂದ ಅರ್ಥ ವ್ಯವಸ್ಥೆ ಬೆಳೆಯುತ್ತಿದೆ. ಪ್ರತಿ ಕ್ಷೇತ್ರದಲ್ಲೂ ಭಾರತೀಯ ಯುವಕರು ತಮ್ಮ ತಾಕತ್ತು ತೋರಿಸುತ್ತಿದ್ದಾರೆ. ಇದೆಲ್ಲಾ ಹೊಸ ಆರಂಭದ ಸಂಕೇತವಾಗಿದೆ. ಮೊಬೈಲ್ ಉತ್ಪಾದನೆ ಸೇರಿ ಎಲ್ಲಾ ಕ್ಷೇತ್ರಗಳಲ್ಲಿ ಅಭಿವೃದ್ಧಿ ಹೊಂದಲಾಗುತ್ತಿದೆ. ನಮ್ಮ ಯುವಕರಿಗೆ ಸರಿಯಾದ ಮಾರ್ಗದರ್ಶನ ಸಿಗಬೇಕು ಯವಕರಿಂದ ದೇಶದ ಅಭಿವೃದ್ಧಿಯಾಗುತ್ತಿದೆ. ಭಾರತದ ಯುವಕರ ಸಾಮರ್ಥ್ಯದಿಂದ ದೇಶದ ಆರ್ಥಿಕತೆ ಬೆಳೆಯುತ್ತಿದೆ. ಬಾಹ್ಯಾಕಾಶ ಕ್ಷೇತ್ರದಲ್ಲೂ ಯುವಕರು ಇತಿಹಾಸ ಸೃಷ್ಟಿಸುತ್ತಿದ್ದಾರೆ. 4 ಸಾವಿರಕ್ಕೂ ಹೆಚ್ಚು ಐಟಿಐಗಳನ್ನು ಸ್ಥಾಪಿಸಲಾಗಿದೆ. ಕಳೆದ 12 ವರ್ಷದಲ್ಲಿ 650 ವಿವಿಗಳನ್ನು ಸ್ಥಾಪಿಸಲಾಗಿದೆ. 9 ಐಐಎಂ, 7 ಐಐಟಿ ಸ್ಥಾಪಿಸಲಾಗಿದೆ ಎಂದರು ಪ್ರಧಾನಿ ಮೋದಿ ನುಡಿದರು.

## ರಾಜ್ಯಪಾಲ, ಸಿಎಂ, ಸಚಿವರಿಂದ ಪ್ರಧಾನಿಗೆ ಸ್ವಾಗತ



ಮೈಸೂರು, ಆ.1: ವಿಶೇಷ ಹೆಲಿಕಾಪ್ಟರ್ ಮೂಲಕ ಆಗಮಿಸಿದ ಪ್ರಧಾನಿಗೆ ಮೈಸೂರಿನಲ್ಲಿ ಅದ್ದೂರಿ ಸ್ವಾಗತ ಕೋರಲಾಯಿತು. ಮಂಡಕಹಳ್ಳಿ ಹೆಲಿಪ್ಯಾಡ್‌ನಿಂದ ವಿಶೇಷ ಹೆಲಿಕಾಪ್ಟರ್ ಮೂಲಕ ಓವಲ್ ಮೈದಾನಕ್ಕೆ ಬಂದಿಳಿದ ಪ್ರಧಾನಿ ಮೋದಿ ಅವರನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವ ಯತೀಂದ್ರ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೂಗುಚ್ಛ ನೀಡಿ ಸ್ವಾಗತಿಸಿದರು. ರಸ್ತೆ ಬದಿಯಲ್ಲಿ ನಿಂತಿದ್ದ ಅಭಿಮಾನಿಗಳು ಪ್ರಧಾನಿ ಪರ ಘೋಷಣೆಗಳನ್ನು ಕೂಗಿ ಆತ್ಮೀಯವಾಗಿ ಬರಮಾಡಿಕೊಂಡರು. ಬಳಿಕ ಪ್ರಧಾನಿ ಮೋದಿ ಅವರು ಮೈಸೂರಿನ ದೇವರಾಜ ಮೊಹಲ್ಲಾದ ನಾರಾಯಣಶಾಸ್ತ್ರಿ ರಸ್ತೆಯಲ್ಲಿರುವ ರಾಮಕೃಷ್ಣ ಆಶ್ರಮಕ್ಕೆ ತೆರಳಿ, ಅಲ್ಲಿ ನಿರ್ಮಾಣಗೊಂಡಿರುವ ವಿವೇಕ ಸ್ಮಾರಕವನ್ನು ಉದ್ಘಾಟಿಸಿದರು. ಆಶ್ರಮ ಆವರಣದಲ್ಲಿರುವ ಸ್ವಾಮಿ ವಿವೇಕಾನಂದರ ಪ್ರತಿಮೆಗೆ ನಮಿಸಿ ಪೂಜೆ ಸಲ್ಲಿಸಿದರು. ಸ್ಮಾರಕ ಆವರಣದಲ್ಲಿ ಬಿಲ್ವಪತ್ರೆ ಸಸಿ ನೆಟ್ಟು ಪರಿಸರ ಸಂರಕ್ಷಣೆಯ ಸಂದೇಶ ನೀಡಿದರು. ಈ ವೇಳೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸಾಥ್ ನೀಡಿದರು. ಆಶ್ರಮದೊಳಗೆ ಕೆಲಕಾಲ ಧ್ಯಾನ ಮಾಡಿದ ಪ್ರಧಾನಿ ಮೋದಿ, ಬಳಿಕ ಅಲ್ಲಿನ ಸ್ವಾಮೀಜಿಗಳು ಮತ್ತು ಆಶ್ರಮದ ಪ್ರತಿನಿಧಿಗಳೊಂದಿಗೆ ಮಾತುಕತೆ ನಡೆಸಿದರು.

## ಸರ್ಕಾರಕ್ಕೆ ವಿವೇಕಾನಂದರ ಆಲೋಚನೆಗಳೇ ಸ್ಫೂರ್ತಿ

ಮೈಸೂರು, ಆ.1: ವಿವೇಕಾನಂದರ ತ್ಯಾಗ ಎಲ್ಲರಿಗೂ ಸ್ಫೂರ್ತಿಯಾಗಬೇಕಿದೆ. ಅವರ ಶಕ್ತಿಯನ್ನು ಅಳವಡಿಸಿಕೊಳ್ಳಬೇಕಿದೆ ಎಂದರು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

ಮೈಸೂರಿನ ರಾಮಕೃಷ್ಣ ವಿದ್ಯಾಶಾಲೆಯಲ್ಲಿ ವಿವೇಕ ಸ್ಮಾರಕ ಉದ್ಘಾಟನೆ ಕಾರ್ಯಕ್ರಮದಲ್ಲಿ ಮಾತನಾಡಿ, ಈ ಕಾರ್ಯಕ್ರಮ ಯುವ ಕ್ರಾಂತಿಯ ಐತಿಹಾಸಿಕ ಘಳಿಗೆಯಾಗಿದೆ. ನೀವು ಸೋತಾಗ ಧೈರ್ಯವಾಗಿರಿ, ನೀವು ಗೆದ್ದಾಗ ಹೃದಯ ವೈಶಾಲ್ಯ ಹೊಂದಿರಬೇಕು ಎಂದು ವಿವೇಕಾನಂದ ಅವರು ಸಂದೇಶ ನೀಡಿದ್ದಾರೆ" ಎಂದು ತಿಳಿಸಿದರು.

ನಮ್ಮ ಸರ್ಕಾರ ಕೂಡ ವಿವೇಕಾನಂದರ ಆಲೋಚನೆ ಹೊಂದಿದೆ. ಯುವ ಯುಗ, ನವ ಯುಗ ನಮ್ಮ ಸರ್ಕಾರದ ಘೋಷಣೆ. ನಾವು ಟೀಮ್ ಕರ್ನಾಟಕವಾಗಿ ಕೆಲಸ ಮಾಡಬೇಕು. ಪಂಚಾಯಿತಿ ಹಾಗೂ ವಾರ್ಡ್ ಮಟ್ಟದಲ್ಲಿ ಯುವಕರು ಒಂದಾಗಬೇಕು, ಅವರ ಕಲೆ, ಕ್ರೀಡೆ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಲು ಯುವಕರ ವಿವೇಕಾನಂದರು 1893ರಲ್ಲಿ ಮೈಸೂರಿನಿಂದ ಹೆಜ್ಜೆ ಹಾಕಿ, ಮಹಾರಾಜರ ಪ್ರೋತ್ಸಾಹದಿಂದ ವಿದೇಶಕ್ಕೆ ಹೋಗಿ ನನ್ನ ಸಹೋದರ, ಸಹೋದರಿಯರೇ ಎಂದು ಭಾಷಣ ಮಾಡಿ ವಿಶ್ವದ ಗಮನ ಸೆಳೆದಿದ್ದರು. ಅವರಿಗೆ ಸಹಕಾರ ಕೊಟ್ಟ ಮಹಾರಾಜರಿಗೆ ನಮನಗಳು ಎಂದರು.

ಇಡೀ ವಿಶ್ವ ಕರ್ನಾಟಕದತ್ತ ತಿರುಗಿ ನೋಡುತ್ತಿದೆ. ಇಡೀ ಭಾರತವನ್ನು ಕರ್ನಾಟಕ ಹಾಗೂ ಬೆಂಗಳೂರು ಮೂಲಕ ನೋಡಲಾಗುತ್ತಿದೆ. ಅಟಲ್ ಬಿಹಾರಿ ವಾಜಪೇಯಿ ಅವರು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಶಂಕುಸ್ಥಾಪನೆಗಾಗಿ ಬೆಂಗಳೂರಿಗೆ ಬಂದಾಗ, ಇಷ್ಟು ದಿನ ವಿಶ್ವದ ನಾಯಕರು ಮೊದಲು ದೆಹಲಿಗೆ ಬಂದು ನಂತರ ಬೇರೆ ನಗರಗಳಿಗೆ ಹೋಗುತ್ತಿದ್ದರು. ಆದರೆ ಈಗ ಕಾಲ ಬದಲಾಗಿದೆ, ವಿಶ್ವದ ನಾಯಕರು ಮೊದಲು ಬೆಂಗಳೂರಿಗೆ ದೆಹಲಿಗೆ ಬಂದು ನಂತರ ದೇಶದ ಬೇರೆ ನಗರಗಳಿಗೆ ಹೋಗುತ್ತಾರೆ ಎಂದು ಹೇಳಿದ್ದರು ಎಂದು ಸ್ಮರಿಸಿದರು.

### ರಾಜ್ಯದ ಅಭಿವೃದ್ಧಿಗೆ ಸಹಕರಿಸುವಂತೆ ಪ್ರಧಾನಿ ಮೋದಿಗೆ ಮುಖ್ಯಮಂತ್ರಿ ಮನವಿ




ಕರ್ನಾಟಕದ ಸರ್ವಾಂಗೀಣ ಅಭಿವೃದ್ಧಿಗೆ ಸಹಕರಿಸಿ. ಕರ್ನಾಟಕಕ್ಕೆ ಅಗತ್ಯ ಸಹಕಾರ ನೀಡಿ ಎಂದು ಪ್ರಧಾನಿ ನರೇಂದ್ರ ಮೋದಿ ಅವರ ಬಳಿ ಸಿಎಂ ಡಿ.ಕೆ. ಶಿವಕುಮಾರ್ ಮನವಿ ಮಾಡಿದರು. ಮೈಸೂರಿನ ಇತಿಹಾಸ ವಿಶ್ವದ ಇತಿಹಾಸ. ಇಡೀ ಸರ್ಕಾರ ಆಶ್ರಮದ ಶ್ರೀಗಳ ಪರವಾಗಿ ನಿಲ್ಲುತ್ತದೆ. ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದು ನನ್ನ ಭಾಗ್ಯ. ಎಂದರು. ಇದೇ ವೇಳೆ ವೇದಿಕೆಯಲ್ಲಿದ್ದ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಕರ್ನಾಟಕಕ್ಕೆ ಅಗತ್ಯ ಸಹಕಾರ ನೀಡುವಂತೆ ಮನವಿ ಮಾಡಿದರು. ಹಳ್ಳಿಗಳಲ್ಲಿ ನಗರಗಳಲ್ಲಿ ಯುವಶಕ್ತಿಯನ್ನು ಬಳಸಿಕೊಳ್ಳಬೇಕು. ಹಾಗಾಗಿ ಕೆಲ ಯೋಜನೆಗಳನ್ನು ಜಾರಿಗೆ ತರಲು ಚಿಂತನೆ ನಡೆಸಲಾಗಿದೆ. ಕರ್ನಾಟಕದ ಅಭಿವೃದ್ಧಿಗೆ ಸಹಕರಿಸಿ ಎಂದು ಕೋರಿದರು. ನಮ್ಮಲ್ಲಿರುವ ಹವಾಮಾನ, ಸಂಸ್ಕೃತಿ ನಮ್ಮ ಶಕ್ತಿ. ಒಕ್ಕೂಟ ವ್ಯವಸ್ಥೆಯಲ್ಲಿ ನಾವು ಕೆಲಸ ಮಾಡುತ್ತಿದ್ದು ನಮ್ಮ ರಾಜ್ಯ ನಿಮ್ಮ ಜೊತೆಗೆ ನಿಲ್ಲುತ್ತದೆ. ನಾವು ಒಟ್ಟಾಗಿ ಕೆಲಸ ಮಾಡಬೇಕು" ಎಂದು ಕರೆ ನೀಡಿದರು.

### ವಿಜ್ಞಾನ ಕ್ಷೇತ್ರಕ್ಕೆ ಮೈಸೂರು ಮಹಾರಾಜರ ಕೊಡುಗೆ ಸ್ಮರಿಸಿದ ಮುಖ್ಯಮಂತ್ರಿ

ಇದು ಸಂಕಲ್ಪ ಭೂಮಿ. ವಿವೇಕಾನಂದರು ಮೈಸೂರಿನಿಂದ ವಿದೇಶಕ್ಕೆ ಪ್ರಯಾಣ ಮಾಡುವಾಗ ಜೆಮ್‌ಷೆಡ್‌ಜೀ ಟಾಟಾ ಅವರಿಗೆ ಒಂದು ಮಾತು ಹೇಳಿದ್ದರು. ಇದು ಬಡ ರಾಷ್ಟ್ರ ಇಲ್ಲಿ ವಿಜ್ಞಾನ ಸಂಸ್ಥೆಗಳು ಆರಂಭವಾಗಬೇಕು ಎಂದು ಹೇಳಿದರು. ನಂತರ ಟಾಟಾ ಅವರು ಮಹಾರಾಜರಿಗೆ ಈ ವಿಚಾರ ತಿಳಿಸಿದರು. ನಂತರ ಮಹಾರಾಜರು ಬೆಂಗಳೂರಿನಲ್ಲಿ 300 ಎಕರೆ ಜಾಗ ನೀಡಿದರು. ಅಲ್ಲೇ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್ ಪ್ರಾರಂಭವಾಯಿತು ಇದು ಈ ದೇಶದ ವಿಜ್ಞಾನಕ್ಕೆ ಮೈಸೂರು ಮಹಾರಾಜರ ಕೊಡುಗೆ" ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

## ವಾಣಿಜ್ಯ ಸಿಲಿಂಡರ್ ಬೆಲೆ 200 ರೂ. ಇಳಿಕೆ

**ನವದೆಹಲಿ, ಆ.1:** ಬಹುದಿನಗಳ ಬಳಿಕ ವಾಣಿಜ್ಯ ಸಿಲಿಂಡರ್ ಬಳಕೆದಾರರಿಗೆ ಸಿಹಿಸುದ್ದಿ ಸಿಕ್ಕಿದೆ. ಬೆಂಗಳೂರು, ದೆಹಲಿ, ಕೋಲ್ಕತ್ತಾ ಸೇರಿ ಹಲವು ಮಹಾನಗರಗಲ್ಲಿ ವಾಣಿಜ್ಯ ಸಿಲಿಂಡರ್ ಬೆಲೆ 200 ರೂ. ಇಳಿಕೆಯಾಗಿದೆ. ಬೆಂಗಳೂರಿನಲ್ಲಿ ವಾಣಿಜ್ಯ ಸಿಲಿಂಡರ್ ಬೆಲೆ 2821 ರೂ.ಗಳಾಗಿದೆ



ಶನಿವಾರದಂದು ಕೋಲ್ಕತ್ತಾದಲ್ಲಿ 19 ಕೆಜಿ ವಾಣಿಜ್ಯ ಸಿಲಿಂಡರ್ ಬೆಲೆ 209, ದೆಹಲಿಯಲ್ಲಿ 202 ರೂ.ಗಳಷ್ಟು ಇಳಿಕೆಯಾಗಿದೆ. ಬೆಂಗಳೂರಿನಲ್ಲಿ 200 ರೂ. ಇಳಿಕೆಯಾಗಿದ್ದು, ಪರಿಷ್ಕೃತ ದರ ಶನಿವಾರದಿಂದಲೇ ಜಾರಿಯಾಗಿದೆ.

ಕೋಲ್ಕತ್ತಾದಲ್ಲಿ ಪ್ರತಿ 19 ಕೆಜಿ ವಾಣಿಜ್ಯ ಸಿಲಿಂಡರ್ ಬೆಲೆ 209 ರೂ. ಇಳಿಕೆಯಾಗಿದ್ದು ಪ್ರತಿ ಸಿಲಿಂಡರ್ ಬೆಲೆ 2,872.50 ರೂ.ಗೆ ಇಳಿಕೆಯಾಗಿದೆ. ದೆಹಲಿಯಲ್ಲಿ ಪ್ರತಿ ಸಿಲಿಂಡರ್ ಮೇಲಿನ ಬೆಲೆ 202 ರೂ. ಇಳಿಕೆಯಾಗಿದ್ದು, 2,728 ರೂ.ಗೆ ಇಳಿದಿದೆ. ದೆಹಲಿಯಲ್ಲಿ 19 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಚಿಲ್ಲರೆ ಬೆಲೆ 2,930ರೂ. ರಷ್ಟಿದ್ದು, ಹೊಸ ದರಗಳು ಜುಲೈ 1 ರಿಂದ ಜಾರಿಗೆ ಬಂದಿವೆ.

ಬೆಲೆ ಇಳಿಕೆಯು ಇದು ರೆಸ್ಟೋರೆಂಟ್‌ಗಳು, ಹೋಟೆಲ್‌ಗಳು, ಫಾಸ್ಟ್‌ಫುಡ್ ಹಾಗೂ ಕ್ಯಾಟರಿಂಗ್ ಮಾಲೀಕರಿಗೆ ಸಿಹಿಸುದ್ದಿ ಕೊಟ್ಟಂತಾಗಿದೆ. ಆದರೆ ಗೃಹಬಳಕೆ ಸಿಲಿಂಡರ್ ಯಾವುದೇ ಬದಲಾವಣೆ ಇರುವುದಿಲ್ಲ.

**ಒಂದು ತಿಂಗಳಲ್ಲಿ 2ನೇ ಬಾರಿ ಇಳಿಕೆ:** ತೈಲ ಮಾರುಕಟ್ಟೆ ಕಂಪನಿಗಳು ಕಳೆದ ತಿಂಗಳು 19 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನು 183.50 ರೂ. ನಷ್ಟು ಕಡಿಮೆ ಮಾಡಿದ್ದವು. ಇದೀಗ ಒಂದು ತಿಂಗಳಲ್ಲಿ 2ನೇ ಬಾರಿಗೆ ಬೆಲೆ ಇಳಿಕೆಯಾಗಿದೆ. ಇದರೊಂದಿಗೆ 5 ಕೆಜಿ ಫ್ರೀ ಟ್ರೇಡ್ ಎಲ್ಪಿಜಿ ಸಿಲಿಂಡರ್ನ ಬೆಲೆಯನ್ನ 13% ಕಡಿಮೆ ಮಾಡಿದ್ದು, ದೆಹಲಿಯಲ್ಲಿ ಸಿಲಿಂಡರ್ ಚಿಲ್ಲರೆ ಬೆಲೆ 808.50 ರೂ.ಗೆ ಕ್ಕೆ ಪರಿಷ್ಕರಿಸಲಾಗಿದೆ. ಕಳೆದ ಜೂನ್ನಲ್ಲಿ, 14.2 ಕೆಜಿ ಗೃಹಬಳಕೆಯ ಎಲ್ಪಿಜಿ ಸಿಲಿಂಡರ್ನ ಬೆಲೆ 29 ರೂ.ಗಳಷ್ಟು ಹೆಚ್ಚಾಗಿದ್ದು, ದೆಹಲಿಯಲ್ಲಿ ಚಿಲ್ಲರೆ ಬೆಲೆ 913 ರೂ.ಗಳಿಂದ 942

## ಜಲಾಶಯ ಭರ್ತಿಯಾದರೆ ನೀರು ಹಿಡಿದಿಡಲು ಸಾಧ್ಯವಿಲ್ಲ

■ ಹೋರಾಟದ ನಿರ್ಧಾರ ಹಿಂಪಡೆಯುವಂತೆ ಸಿಎಂ ಡಿ.ಕೆ. ಶಿವಕುಮಾರ್ ಮನವಿ

**ಮೈಸೂರು, ಆ.1:** ಕಬಿನಿ ಜಲಾಶಯ ಭರ್ತಿಯಾಗುತ್ತಿದೆ. ಅಣೆಕಟ್ಟು ತುಂಬಿದಾಗ ನೀರು ಹರಿಸಲೇಬೇಕಾಗುತ್ತದೆ. ಅದನ್ನು ಹಿಡಿದಿಡಲು ಸಾಧ್ಯವಿಲ್ಲ. ನೀರು ಬಿಡಬಾರದು ಎಂದು ಹೋರಾಟ ಮಾಡುವ ನಿರ್ಧಾರವನ್ನು ಕೈಬಿಡಬೇಕು ಎಂದು ನಮ್ರತೆಯಿಂದ ಮನವಿ ಮಾಡುತ್ತೇನೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

ಮೈಸೂರು ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳಿಗೆ ಶನಿವಾರ ಪ್ರತಿಕ್ರಿಯೆ ನೀಡಿದ ಅವರು, ಕಬಿನಿ ಜಲಾಶಯದ ನೀರಿನ ಸಂಗ್ರಹಣೆ ಬಗ್ಗೆ ಅಧಿಕಾರಿಗಳು ಪ್ರತಿ ಗಂಟೆಯೂ ಮಾಹಿತಿ ನೀಡುತ್ತಿದ್ದಾರೆ. ಒಳಹರಿವು 40 ಸಾವಿರ ಕ್ಯೂಸೆಕ್ಸ್ ಮುಟ್ಟಿದೆ. ಪ್ರಕೃತಿ ಯಾರ ಸ್ವತ್ತೂ ಅಲ್ಲ. ಪ್ರಕೃತಿಯ ಅಣತಿಯಂತೆ ನಾವು ಬದುಕುತ್ತಿದ್ದೇವೆ. ನಾವು ನೀರು ಬಿಡುಗಡೆ ಮಾಡಲ್ಲ ಎಂದು ತೀರ್ಮಾನ ಮಾಡಿದರೂ, ಜಲಾಶಯ ತುಂಬಿದಾಗ ನೀರನ್ನು ಹಿಡಿದಿಟ್ಟುಕೊಳ್ಳಲು ಆಗುವುದಿಲ್ಲ ಎಂದರು.

**ರಭಸ ಹೆಚ್ಚಿದೆ, ನೀರಿಗೆ ಎದುರಾಗಿ ಹೋಗಬೇಡಿ:** ಹೋರಾಟಗಾರರು ನೀರು ಬಿಡುವ ಕಡೆ ಹೋಗಬಾರದು. ನೀರಿನ ರಭಸಕ್ಕೆ ನೀವು ಕೊಚ್ಚಿ ಹೋಗಬಹುದು. ಯಾರೂ ನೀರಿಗೆ ಅಡ್ಡ ಮಲಗಲು ಹೋಗಬೇಡಿ ಎಂದು ಮನವಿ ಮಾಡಿದರು. ನಮ್ಮ ಸ್ನೇಹಿತರು ತಮಿಳುನಾಡಿಗೆ ನೀರು ಹರಿಸಬಾರದಾಗಿ ಹೋರಾಟ, ಬಂದ್ ಮಾಡುತ್ತೇವೆ ಎಂದು ಹೇಳುತ್ತಿದ್ದಾರೆ. ಒಂದು ಹೋರಾಟಕ್ಕೆ ಹಿನ್ನೆಲೆ ಇರಬೇಕು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಎಲ್ಲರ ಹೋರಾಟಕ್ಕೂ ಗೌರವವಿದೆ. ಆದರೆ ಈಗ ಪ್ರತಿಭಟನೆ ಬೇಡ. ಕಾನೂನು ಚೌಕಟ್ಟಿಗೆ ಏನೂ ತೊಂದರೆಯಾಗಬಾರದು, ಜನಜೀವನಕ್ಕೆ ತೊಂದರೆಯಾಗಬಾರದು. ಈ ರಾಜ್ಯದಲ್ಲಿ ಎಲ್ಲಾ ಜನರು ಬದುಕುತ್ತಿದ್ದಾರೆ. ಎಲ್ಲರನ್ನೂ ಸಂತೋಷದಿಂದ ಸ್ವೀಕಾರ ಮಾಡಿದ್ದೇವೆ. ತಮಿಳುನಾಡು ಸೇರಿ ನಾವೆಲ್ಲರೂ ಒಂದೇ ದೇಶದ ಪ್ರಜೆಗಳು ಎಂದು ತಿಳಿಸಿದರು.

ಬಂಗಾರಪ್ಪ, ಎಸ್.ಎಂ. ಕೃಷ್ಣ, ಸಿದ್ದರಾಮಯ್ಯ, ದೇವೇಗೌಡರ ಕಾಲದಲ್ಲೂ ಸಂಕಷ್ಟ ಎದುರಾದಾಗ ಅಂದಿನ ಸಂದರ್ಭಕ್ಕೆ ತಕ್ಕಂತೆ ತೀರ್ಮಾನಗಳನ್ನು ತೆಗೆದುಕೊಳ್ಳಲಾಗಿದೆ. ನಾವು ಮಾಡಿದ್ದು ಸರಿ, ಅವರು ಮಾಡಿದ್ದು ತಪ್ಪು ಎಂದು ನಾವು ಹೇಳುವುದಿಲ್ಲ. ತಮಿಳುನಾಡಿಗೆ 177 ಟಿಎಂಸಿ ನೀರನ್ನು ಹರಿಸಬೇಕು ಎಂದು ಆದೇಶವಿದೆ. ಇದಕ್ಕೆ ಸುಪ್ರೀಂಕೋರ್ಟ್ ಕೂಡ ಬಲ ನೀಡಿದೆ. ನಾವು ನ್ಯಾಯಾಲಯದ ಆದೇಶಕ್ಕೆ ಗೌರವ ನೀಡಬೇಕು. ಜೊತೆಗೆ ನಮ್ಮ ರೈತರನ್ನೂ ಕಾಪಾಡಬೇಕು. ನಮ್ಮ ರೈತರ ಹಿತವನ್ನು ಕಾಪಾಡಲು ನಮ್ಮ ಸರ್ಕಾರ ಬದ್ಧವಾಗಿದೆ. ಈ ಆದೇಶ ಎರಡೂ ರಾಜ್ಯಕ್ಕೆ ವರ ಎಂದು ಡಿ.ಕೆ. ಶಿವಕುಮಾರ್ ಅಭಿಪ್ರಾಯಪಟ್ಟರು.

### ಸಿಎಂಗೆ ಕೃಪೆ ತೋರಿದ ವರ್ಷಾಧಾರೆ

ಜಲಾನಯನ ಪ್ರದೇಶದಲ್ಲಿ ವ್ಯಾಪಕ ಮಳೆ ಸುರಿಯುತ್ತಿರುವುದರಿಂದ ಕಬಿನಿ ಜಲಾಶಯ ಬಹುತೇಕ ಭರ್ತಿಯಾಗುವ ಹಂತದಲ್ಲಿದ್ದು, ಜಲಾಶಯದಿಂದ ನದಿಗೆ ನೀರು ಬಿಡಲಾಗುತ್ತಿದೆ. ಇದರಿಂದಾಗಿ ತಮಿಳುನಾಡಿಗೆ ಕಾವೇರಿ ನೀರು ಹರಿಸುವ ಚಿಂತೆಯಲ್ಲಿದ್ದ ಸಿಎಂ ಡಿ.ಕೆ. ಶಿವಕುಮಾರ್‌ಗೆ ಮಳೆರಾಯ ಕೃಪೆ ತೋರಿದಂತಿದೆ. ಹಾಗಾಗಿ ರಾಜ್ಯದ ಇತರೆಡೆಯೂ ಮಳೆ ಮುಂದುವರಿದರೆ ಕಾವೇರಿ ಕಣಿವೆ ವ್ಯಾಪ್ತಿಯ ಜಲಾಶಯಗಳು ಭರ್ತಿಯಾಗಿ ತಮಿಳುನಾಡಿಗೆ ನೀರು ಹರಿಸುವುದು ಸೇರಿ ಜನರ ಕುಡಿಯುವ ನೀರಿನ ಸಮಸ್ಯೆಯೂ ದೂರವಾಗಲಿದೆ.

## ಎಥೆನಾಲ್ ಇಲ್ಲದಿದ್ದರೆ ಪೆಟ್ರೋಲ್ ದರ 125 ರೂ.: ಕೇಂದ್ರ ಸರ್ಕಾರ

**ನವದೆಹಲಿ, ಆ.1: ಜಾಗತಿಕ ಮಾರುಕಟ್ಟೆಯಲ್ಲಿ ಕಚ್ಚಾತೈಲದ ಬೆಲೆ ಬ್ಯಾರಲ್‌ಗೆ 135 ಡಾಲರ್‌ಗೆ ಏರಿದ್ದ ಸಂದರ್ಭದಲ್ಲಿ ಪೆಟ್ರೋಲ್‌ಗೆ ಎಥೆನಾಲ್ ಮಿಶ್ರಣ ಮಾಡದೇ ಇದ್ದಿದ್ದರೆ, ದೆಹಲಿಯಲ್ಲಿ ಪೆಟ್ರೋಲ್ ದರ ಲೀಟರ್‌ಗೆ 125 ರೂ. ಆಗಿರುತ್ತಿತ್ತು ಎಂದು ಕೇಂದ್ರ ಸರ್ಕಾರ ತಿಳಿಸಿದೆ.**

ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ, ಪ್ರತಿ ಲೀಟರ್ ಪೆಟ್ರೋಲ್‌ನಲ್ಲಿ ಶೇ.20ರಷ್ಟು ದೇಶೀಯವಾಗಿ ಉತ್ಪಾದಿಸಲಾದ ಎಥೆನಾಲ್ ಅನ್ನು ಮಿಶ್ರಣ ಮಾಡಿದ್ದರಿಂದ ಲೀಟರ್‌ಗೆ ಗ್ರಾಹಕರು ಕೇವಲ 94.77 ರೂ. ನೀಡುತ್ತಿದ್ದಾರೆ ಎಂದಿದೆ.

ಇ20 ಪೆಟ್ರೋಲ್ ಕುರಿತು ವ್ಯಕ್ತವಾಗಿರುವ ಟೀಕೆಗಳ ಬೆನ್ನಲ್ಲೇ ಕೇಂದ್ರ ಸರ್ಕಾರ ಈ ಸ್ಪಷ್ಟನೆ ನೀಡಿದೆ. ಇ20 ಪೆಟ್ರೋಲ್‌ನಲ್ಲಿ ಶೇ.20ರಷ್ಟು ಎಥೆನಾಲ್ ಮತ್ತು ಶೇ.80ರಷ್ಟು ಪೆಟ್ರೋಲ್ ಇರುತ್ತದೆ. ಈ ಇಂಧನ ಬಳಕೆಯಿಂದ ವಾಹನಗಳ ಮೈಲೇಜ್ ಕಡಿಮೆಯಾಗುತ್ತದೆ, ಆಹಾರ ಧಾನ್ಯಗಳನ್ನು ಎಥೆನಾಲ್ ಉತ್ಪಾದನೆಗೆ ಬಳಸಲಾಗುತ್ತಿದೆ ಹಾಗೂ ತೆರಿಗೆದಾರರ ಹಣದಿಂದ ಈ ಯೋಜನೆಗೆ ಸಬ್ಸಿಡಿ ನೀಡಲಾಗುತ್ತಿದೆ ಎಂಬ ಆರೋಪಗಳು ಕೇಳಿಬಂದಿದ್ದವು.

### ಇ20 ಪೆಟ್ರೋಲ್ ಬಗೆಗಿನ ಟೀಕೆಗಳ ಬೆನ್ನಲ್ಲೇ ಕಂದ್ರ ಸರ್ಕಾರ ಸ್ಪಷ್ಟನೆ

ಈ ಆರೋಪಗಳನ್ನು ತಳ್ಳಿಹಾಕಿರುವ ಕೇಂದ್ರ ಸರ್ಕಾರ, ಎಥೆನಾಲ್ ಮಿಶ್ರಣ ಕಾರ್ಯಕ್ರಮವು ಸಬ್ಸಿಡಿ ಆಧಾರಿತ ಯೋಜನೆಯಲ್ಲ, ಬದಲಾಗಿ ದೇಶದ ಇಂಧನ ಭದ್ರತಾ ವಿಮೆ ಎಂದು ಸಮರ್ಥಿಸಿಕೊಂಡಿದೆ.

ಇದು ಪ್ರತಿದಿನ ಅಗ್ಗದ ಇಂಧನ ಒದಗಿಸುವ ಯೋಜನೆಯಲ್ಲ. ಜಾಗತಿಕ ಕಚ್ಚಾತೈಲ ಬೆಲೆಗಳ ತೀವ್ರ ಏರಿಳಿತದಿಂದ ಭಾರತೀಯ ಗ್ರಾಹಕರನ್ನು ರಕ್ಷಿಸುವುದು, ದೇಶದ ಇಂಧನ ಭದ್ರತೆಯನ್ನು ಬಲಪಡಿಸುವುದು ಹಾಗೂ ಇಂಧನಕ್ಕಾಗಿ ವಿದೇಶಗಳಿಗೆ ಹೋಗುವ ಹಣವನ್ನು ದೇಶದೊಳಗೇ ಉಳಿಸಿಕೊಳ್ಳುವುದು ಇದರ ಉದ್ದೇಶ ಎಂದಿದೆ. ಅಲ್ಲದೆ, ಆಹಾರ ಭದ್ರತಾ ಯೋಜನೆಗಳಿಗಾಗಿ ಭಾರತೀಯ ಆಹಾರ ನಿಗಮ ಸಂಗ್ರಹಿಸುವ ಸಬ್ಸಿಡಿ ಅಕ್ಕಿಯನ್ನು ಎಥೆನಾಲ್ ಉತ್ಪಾದನೆಗೆ ಬಳಸಲಾಗುತ್ತಿದೆ ಎಂಬ ಆರೋಪವನ್ನೂ ಸರ್ಕಾರ ನಿರಾಕರಿಸಿದೆ.




ಆಹಾರ ಭದ್ರತೆಗೆ ಅಗತ್ಯವಿರುವ ಸಂಗ್ರಹವನ್ನು ಉಳಿಸಿಕೊಂಡ ಬಳಿಕ ಉಳಿದ ಹೆಚ್ಚುವರಿ ಧಾನ್ಯಗಳನ್ನು ಮಾತ್ರ ಎಥೆನಾಲ್ ಉತ್ಪಾದನೆಗೆ ಬಳಸಲಾಗುತ್ತದೆ. ಹಾನಿಗೊಳಗಾದ ಧಾನ್ಯ, ಒಡೆದ ಅಕ್ಕಿ ಹಾಗೂ ಮಾನವ ಬಳಕೆಗೆ ಯೋಗ್ಯವಲ್ಲದ ಸಂಗ್ರಹವನ್ನು ಮುಖ್ಯವಾಗಿ ಬಳಸಲಾಗುತ್ತಿದೆ ಎಂದು ಸಚಿವಾಲಯ ಸ್ಪಷ್ಟಪಡಿಸಿದೆ. ಜೊತೆಗೆ ಪ್ರಧಾನಮಂತ್ರಿ ಜಿ–ವ್ಯಾನ್ ಯೋಜನೆಯಡಿ ಕೃಷಿ ತ್ಯಾಜ್ಯದಿಂದ ಎರಡನೇ ತಲೆಮಾರಿನ ಎಥೆನಾಲ್ ಉತ್ಪಾದನೆಯನ್ನೂ ಉತ್ತೇಜಿಸಲಾಗುತ್ತಿದೆ ಎಂದು ತಿಳಿಸಿದೆ.

ಇದೇ ವೇಳೆ, ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರು ಗುರುವಾರ ಸಂಸತ್ತಿನಲ್ಲಿ ನೀಡಿದ ಮಾಹಿತಿಯನ್ನು ಉಲ್ಲೇಖಿಸಿರುವ ಸರ್ಕಾರ, ಇ20 ಪೆಟ್ರೋಲ್ ಬಳಕೆಯಿಂದ ವಾಹನದ ಮಾದರಿ ಹಾಗೂ ವಯಸ್ಸಿಗೆ ಅನುಗುಣವಾಗಿ ಶೇ.2ರಿಂದ ಶೇ.6ರಷ್ಟು ಮೈಲೇಜ್ ಕಡಿಮೆಯಾಗುವ ಸಾಧ್ಯತೆ ಇದೆ ಎಂದು ಒಪ್ಪಿಕೊಂಡಿದೆ.

2016ಕ್ಕೂ ಮೊದಲು ತಯಾರಾದ ಕೆಲವು ಬಿಎಸ್–3 ವಾಹನಗಳಲ್ಲಿ ರಬ್ಬರ್ ಭಾಗಗಳು ಹಾಗೂ ಗ್ಯಾಸ್ಕೆಟ್‌ಗಳನ್ನು ಬದಲಾಯಿಸುವ ಅಗತ್ಯ ಬರಬಹುದು ಎಂದು ತಿಳಿಸಿದೆ. ಅಂದರೆ ರಬ್ಬರ್ ಗ್ಯಾಸ್ಕೆಟ್‌ಗಳೂ ಕೂಡ ಎಥೆನಾಲ್‌ನಿಂದ ಹಾನಿಗೊಳಗಾಗುವ ಸಾಧ್ಯತೆಯನ್ನು ಸರ್ಕಾರ ಒಪ್ಪಿಕೊಂಡಿದೆ.

ಈವರೆಗೆ ದೇಶದಲ್ಲಿ 20 ಕೋಟಿಗೂ ಹೆಚ್ಚು ದ್ವಿಚಕ್ರ ವಾಹನಗಳು ಮತ್ತು 3 ಕೋಟಿಗೂ ಹೆಚ್ಚು ಪೆಟ್ರೋಲ್ ಕಾರುಗಳು ಎಥೆನಾಲ್ ಮಿಶ್ರಿತ ಇಂಧನವನ್ನು ಬಳಸಿದ್ದು, ಎಥೆನಾಲ್‌ನಿಂದಲೇ ಎಂಜಿನ್ ಹಾನಿಯಾಗಿದೆ ಎಂಬ ದೃಢೀಕೃತ ಸಾಕ್ಷ್ಯ ಲಭ್ಯವಾಗಿಲ್ಲ ಎಂದು ಕೇಂದ್ರ ಹೇಳಿಕೊಂಡಿದೆ.

### ಕಚ್ಚಾತೈಲ ಆಮದು ಮೇಲಿನ ಅವಲಂಬನೆ ಕಡಿಮೆ

ಎಥೆನಾಲ್ ಮಿಶ್ರಣದಿಂದ ಕಚ್ಚಾ ತೈಲ ಆಮದು ಮೇಲಿನ ಭಾರತದ ಅವಲಂಬನೆ ಕಡಿಮೆಯಾಗುತ್ತದೆ, ವಿದೇಶಿ ವಿನಿಮಯ ಉಳಿತಾಯವಾಗುತ್ತದೆ ಮತ್ತು ಇಂಧನ ಭದ್ರತೆ ಬಲಗೊಳ್ಳುತ್ತದೆ ಎಂಬುದು ಕೇಂದ್ರ ಸರ್ಕಾರದ ವಾದವಾಗಿದೆ. ಕಬ್ಬು, ಮೆಕ್ಕೆಜೋಳ ಸೇರಿದಂತೆ ಎಥೆನಾಲ್ ಉತ್ಪಾದನೆಗೆ ಬಳಸುವ ಬೆಳೆಗಳಿಗೆ ಹೆಚ್ಚುವರಿ ಬೇಡಿಕೆ ಸೃಷ್ಟಿಯಾಗುವುದರಿಂದ ರೈತರಿಗೆ ಪರ್ಯಾಯ ಮಾರುಕಟ್ಟೆಯೂ ದೊರೆಯುತ್ತದೆ ಎಂದು ಸರ್ಕಾರ ಹೇಳುತ್ತಿದೆ. ಜಾಗತಿಕ ಕಚ್ಚಾ ತೈಲದ ಬೆಲೆಯಲ್ಲಿ ಏರಿಳಿತ ಉಂಟಾದಾಗ ದೇಶೀಯವಾಗಿ ಉತ್ಪಾದನೆಯಾಗುವ ಎಥೆನಾಲ್ ಬೆಲೆ ಸ್ಥಿರವಾಗಿರುವುದರಿಂದ ಗ್ರಾಹಕರ ಮೇಲಿನ ಹೊರೆ ಕೂಡ ನಿಯಂತ್ರಣದಲ್ಲಿರುತ್ತದೆ ಎಂಬುದು ಸರ್ಕಾರದ ಪ್ರತಿಪಾದನೆ. ಆದರೆ, ಎಥೆನಾಲ್ ನೀತಿಯ ಬಗ್ಗೆ ಇರುವ ವಾಸ್ತವವೇ ಬೇರೆ. ಇ20 ಪೆಟ್ರೋಲ್‌ನಿಂದ ವಾಹನಗಳ ಮೈಲೇಜ್ ಕಡಿಮೆಯಾಗುವ ಸಾಧ್ಯತೆ ಇದೆ ಎಂದು ಕೇಂದ್ರ ಸರ್ಕಾರವೇ ಒಪ್ಪಿಕೊಂಡಿರುವ ಹಿನ್ನೆಲೆಯಲ್ಲಿ, ಪ್ರತಿ ಲೀಟರ್‌ಗೆ ಗ್ರಾಹಕರು ಉಳಿಸುತ್ತಿರುವ ಹಣದ ಲೆಕ್ಕ ಹಾಕುವಾಗ, ಕಡಿಮೆಯಾಗುವ ಮೈಲೇಜ್‌ನಿಂದ ಉಂಟಾಗುವ ಹೆಚ್ಚುವರಿ ಇಂಧನ ಬಳಕೆಯ ವೆಚ್ಚವನ್ನೂ ಪರಿಗಣಿಸಬೇಕಲ್ಲವೇ ಎಂದು ಕೆಲ ತಜ್ಞರು ಪ್ರಶ್ನಿಸುತ್ತಿದ್ದಾರೆ. ಹೀಗಾಗಿ, ಎಥೆನಾಲ್ನಿಂದ ಗ್ರಾಹಕರಿಗೆ ದೊಡ್ಡ ಉಳಿತಾಯವಾಗುತ್ತಿದೆ ಎಂಬ ಸರ್ಕಾರದ ವಾದ ಸಂಪೂರ್ಣ ವಾಸ್ತವವನ್ನು ಪ್ರತಿಬಿಂಬಿಸುವುದಿಲ್ಲ ಮತ್ತು ಇದು ಜನರನ್ನು ದಾರಿ ತಪ್ಪಿಸುವ ಪ್ರಯತ್ನ ಎಂದು ಆರೋಪಿಸಿಲಾಗುತ್ತಿದೆ. ಈ ಹಿನ್ನೆಲೆಯಲ್ಲಿ, ಎಥೆನಾಲ್ ನೀತಿಯನ್ನು ಪೆಟ್ರೋಲ್ ದರದ ಆಧಾರದ ಮೇಲೆ ಅಳೆಯದೆ, ಮೈಲೇಜ್, ವಾಹನ ನಿರ್ವಹಣಾ ವೆಚ್ಚ, ರೈತರ ಆದಾಯ, ಆಹಾರ ಭದ್ರತೆ ಹಾಗೂ ಇಂಧನ ಸ್ವಾವಲಂಬನೆ ಸೇರಿದಂತೆ ಎಲ್ಲ ಅಂಶಗಳ ಆಧಾರದ ಮೇಲೆ ಮೌಲ್ಯಮಾಪನ ಮಾಡಬೇಕು ಎಂಬ ಅಭಿಪ್ರಾಯವೂ ವ್ಯಕ್ತವಾಗುತ್ತಿದೆ.

# ಪ್ರವಾಹಪೀಡಿತ 7 ರಾಜ್ಯಗಳಿಗೆ 2,117 ಕೋಟಿ ರೂ. ಬಿಡುಗಡೆ

## ಎಸ್‌ಡಿಆರ್‌ಎಫ್‌ನ ಕೇಂದ್ರದ ಪಾಲು ನೀಡಲು ಕೇಂದ್ರ ಗೃಹ ಸಚಿವಾಲಯ ಅನುಮೋದನೆ



**ನವದೆಹಲಿ, ಆ.1:** 2026ರ ಪ್ರಸ್ತುತ ನೈರುತ್ಯ ಮಾನ್ಸೂನ್ ಸಮಯದಲ್ಲಿ ಪರಿಹಾರ, ರಕ್ಷಣೆ ಮತ್ತು ಪುನರ್ವಸತಿ ಕಾರ್ಯಗಳನ್ನು ಬೆಂಬಲಿಸಲು ಏಳು ಪ್ರವಾಹಪೀಡಿತ ರಾಜ್ಯಗಳಿಗೆ ರಾಜ್ಯ ವಿಪತ್ತು ಸ್ಪಂದನಾ ನಿಧಿಯ (ಎಸ್‌ಡಿಆರ್‌ಎಫ್) ಕೇಂದ್ರದ ಪಾಲಿನ ಭಾಗವಾಗಿ 2,117.85 ಕೋಟಿ ರೂ. ಮುಂಗಡ ಬಿಡುಗಡೆಗೆ ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅನುಮೋದನೆ ನೀಡಿದ್ದಾರೆ.

ಪ್ರವಾಹ ಸಂಬಂಧಿತ ವಿಪತ್ತುಗಳನ್ನು ಎದುರಿಸುತ್ತಿರುವ ರಾಜ್ಯಗಳಿಗೆ ಸಮಯೋಚಿತ ಆರ್ಥಿಕ ಮತ್ತು ಸಾಗಣೆ ಬೆಂಬಲವನ್ನು ನೀಡುವ ಕೇಂದ್ರದ ಬದ್ಧತೆಯನ್ನು ಈ ನಿರ್ಧಾರವು ಪ್ರತಿಬಿಂಬಿಸುತ್ತದೆ ಎಂದು ಗೃಹ ಸಚಿವಾಲಯ ತಿಳಿಸಿದೆ.

ಸಚಿವಾಲಯದ ಪ್ರಕಾರ, ಮಾನ್ಸೂನ್ ಪ್ರಾರಂಭವಾದಾಗಿನಿಂದ ಪ್ರವಾಹ ಪೀಡಿತ ರಾಜ್ಯ ಸರ್ಕಾರಗಳೊಂದಿಗೆ ಸಮನ್ವಯ ಸಾಧಿಸಿ ಭಾರತ ಸರ್ಕಾರವು ಪ್ರವಾಹ ಪರಿಸ್ಥಿತಿಯನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡುತ್ತಿದೆ. ಕೇಂದ್ರವು ಎನ್‌ಡಿಆರ್‌ಎಫ್ ತಂಡಗಳ ಮುಂಗಡ ನಿಯೋಜನೆ ಮತ್ತು ಅಗತ್ಯವಿರುವ ಕಡೆಗಳಲ್ಲಿ ರಕ್ಷಣಾ ಸಚಿವಾಲಯದಿಂದ ಲಾಜಿಸ್ಟಿಕ್ ಬೆಂಬಲದ ಮೂಲಕ ಸಹಾಯವನ್ನು ನೀಡಿದೆ.

ಹಾನಿಯ ಪ್ರಮಾಣವನ್ನು ಮೌಲ್ಯಮಾಪನ ಮಾಡಲು, ಅರುಣಾಚಲ ಪ್ರದೇಶ ಮತ್ತು ಅಸ್ಸಾಂಗೆ ಅಂತರ-ಸಚಿವಾಲಯ ಕೇಂದ್ರ ತಂಡಗಳನ್ನು (ಐಎಂಸಿಟಿ) ಈಗಾಗಲೇ ಕಳುಹಿಸಲಾಗಿದೆ. ಅಸ್ಸಾಂನಲ್ಲಿ ಪ್ರವಾಹ ಪರಿಸ್ಥಿತಿಯ ತೀವ್ರತೆಯನ್ನು ಪರಿಗಣಿಸಿ, ಈಗಾಗಲೇ ಎರಡು ಐಎಂಸಿಟಿ ತಂಡ ಭೇಟಿನೀಡಿದೆ. ನಾಗಾಲ್ಯಾಂಡ್ ಸರ್ಕಾರದ ವಿನಂತಿಯ ಮೇರೆಗೆ, ಆ ರಾಜ್ಯಕ್ಕೂ ತಂಡ ವನ್ನು ಕಳಿಸಲಾಗುವುದು ಎಂದಿದೆ.

**ಯಾವ ರಾಜ್ಯಕ್ಕೆ ಎಷ್ಟು?**

ಅನುಮೋದಿತ ಆರ್ಥಿಕ ನೆರವಿನಲ್ಲಿ ಅರುಣಾಚಲ ಪ್ರದೇಶಕ್ಕೆ 44.55 ಕೋಟಿ, ಅಸ್ಸಾಂಗೆ 379.35 ಕೋಟಿ, ಗುಜರಾತ್, ಮಹಾರಾಷ್ಟ್ರ ಮತ್ತು ಒಡಿಶಾಗೆ ತಲಾ 500 ಕೋಟಿ ಹಾಗೂ ಹಿಮಾಚಲ ಪ್ರದೇಶಕ್ಕೆ 193.95 ಕೋಟಿ ರೂ. ಸೇರಿದೆ. ಹಿಮಾಚಲ ಪ್ರದೇಶ, ಒಡಿಶಾ ಮತ್ತು ನಾಗಾಲ್ಯಾಂಡ್ ರಾಜ್ಯಗಳು 2026–27ರ ಆರ್ಥಿಕ ವರ್ಷದ ಎಸ್‌ಡಿಆರ್‌ಎಫ್ ನೆರವಿನ ಮೊದಲ ಕಂತನ್ನು ಈಗಾಗಲೇ ಸ್ವೀಕರಿಸಿದ್ದರೆ, ಅಡೆತಡೆಯಿಲ್ಲದೆ ಪರಿಹಾರ ಕಾರ್ಯಗಳು ನಡೆಯುವುದನ್ನು ಖಚಿತಪಡಿಸಿಕೊಳ್ಳಲು ಹಿಮಾಚಲ ಪ್ರದೇಶ ಮತ್ತು ಒಡಿಶಾಗೆ ಎರಡನೇ ಕಂತಿನ ಮುಂಗಡ ಬಿಡುಗಡೆಗೆ ಗೃಹ ಸಚಿವರು ಅನುಮೋದನೆ ನೀಡಿದ್ದಾರೆ. ಅರುಣಾಚಲ ಪ್ರದೇಶ, ಅಸ್ಸಾಂ, ಗುಜರಾತ್ ಮತ್ತು ಮಹಾರಾಷ್ಟ್ರ ರಾಜ್ಯಗಳಿಗೆ ಹಣದ ತುರ್ತು ಅಗತ್ಯವನ್ನು ಪರಿಗಣಿಸಿ, ಚಾಲ್ತಿಯಲ್ಲಿರುವ ಮಾರ್ಗಸೂಚಿಗಳ ಅಡಿಯಲ್ಲಿ ಅಗತ್ಯವಿರುವ ದಾಖಲಾತಿ ಅಗತ್ಯತೆಗಳನ್ನು ಸಡಿಲಗೊಳಿಸುವ ಮೂಲಕ ಎಸ್ಡಿಆರ್‌ಎಫ್‌ನ ಕೇಂದ್ರ ಪಾಲಿನ ಮೊದಲ ಕಂತನ್ನು ಮುಂಗಡವಾಗಿ ಬಿಡುಗಡೆ ಮಾಡಲು ಕೇಂದ್ರ ಅನುಮೋದಿಸಿದೆ. ಇದರಿಂದ ಪ್ರಸ್ತುತ ಪ್ರವಾಹ ಪರಿಹಾರ ಮತ್ತು ಸ್ಪಂದನಾ ಕ್ರಮಗಳನ್ನು ಬಲಗೊಳ್ಳಲಿದೆ ಹಾಗೂ ಪ್ರವಾಹಪೀಡಿತ ರಾಜ್ಯಗಳಿಗೆ ಅಗತ್ಯವಿರುವ ಎಲ್ಲ ನೆರವು ನೀಡುವ ಜತೆಗೆ ಕೇಂದ್ರವು ಪರಿಸ್ಥಿತಿಯನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡುವುದನ್ನು ಮುಂದುವರಿಸುತ್ತದೆ ಎಂದು ಗೃಹ ಸಚಿವಾಲಯ ಹೇಳಿದೆ.

# ಶಿಕ್ಷಿಸುವುದಕ್ಕಿಂತ ಸರಿಯಾದ ದಾರಿಗೆ ತರುವುದೇ ನಮ್ಮ ಧರ್ಮ: ನಿಂದಿಸಿದ ಮಕ್ಕಳಿಗೆ ಮೋದಿ ಕ್ಷಮೆ



ನವದೆಹಲಿ: ಜಂತರ್ ಮಂತರ್‌ನಲ್ಲಿ ನಡೆದ ಘಟನೆ ಮತ್ತು ತಮ್ಮ ಹಾಗೂ ತಮ್ಮ ದಿವಂಗತ ತಾಯಿಯವರ ವಿರುದ್ಧ ವ್ಯಕ್ತವಾದ ನಿಂದನಾತ್ಮಕ ಹೇಳಿಕೆಗಳ ಕುರಿತು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ತಮ್ಮ ಅಧಿಕೃತ ಇನ್ಸ್ಟಾಗ್ರಾಮ್ ಖಾತೆಯಲ್ಲಿ ಭಾವುಕ ವಿಡಿಯೋ ಸಂದೇಶವೊಂದನ್ನು ಹಂಚಿಕೊಂಡಿದ್ದಾರೆ. ಇಂದು ನಿಮ್ಮೊಂದಿಗೆ ಮನಬಿಚ್ಚಿ ಮಾತನಾಡಬೇಕು ಎನಿಸಿತು. ಜಂತರ್ ಮಂತರ್‌ನಲ್ಲಿ ಏನಾಯಿತು ಎಂಬುದನ್ನು ದೇಶ ಮತ್ತು ಜಗತ್ತು ನೋಡಿದೆ. ಕೆಲವು ಕಿಡಿಗೇಡಿ ಮಕ್ಕಳು ನಾಗರಿಕ ಸಮಾಜಕ್ಕೆ ಒಪ್ಪದಂತಹ ಅತ್ಯಂತ ಅಸಭ್ಯ ಮತ್ತು ನಿಂದನಾತ್ಮಕ ಭಾಷೆಯನ್ನು ಬಳಸಿದ್ದಾರೆ. ನನ್ನನ್ನು ವೈಯಕ್ತಿಕವಾಗಿ ನಿಂದಿಸಲಾಯಿತು, ಅಷ್ಟೇ ಅಲ್ಲದೆ ನನ್ನ ದಿವಂಗತ ತಾಯಿಯನ್ನೂ ಬಿಡದೆ ನಿಂದಿಸಲಾಯಿತು. ನಮ್ಮ ಹೆಣ್ಣುಮಕ್ಕಳು ಇಂತಹ ಭಾಷೆ ಬಳಸಿರುವುದು ಇಡೀ ಸಮಾಜಕ್ಕೆ ಸಾಂಸ್ಕೃತಿಕ ಆಘಾತ ತಂದಿದೆ ಎಂದು ಮೋದಿ ಬೇಸರ ವ್ಯಕ್ತಪಡಿಸಿದ್ದಾರೆ.

ಬಾಲ್ಯದಲ್ಲಿ ತಪ್ಪುಗಳು ನಡೆಯುವುದು ಸಹಜ, ಅದೇ ರೀತಿ ಆ ತಪ್ಪುಗಳನ್ನು ತಿದ್ದುಕೊಳ್ಳಲು ಬಾಲ್ಯದಲ್ಲೇ ಅವಕಾಶವೂ ಸಿಗುತ್ತದೆ. ಹೀಗಾಗಿ ಸಮಾಜದಲ್ಲಿ ಉಂಟಾಗಿರುವ ಆಕ್ರೋಶವನ್ನು ನಾನು ಸಂಪೂರ್ಣವಾಗಿ ಅರ್ಥಮಾಡಿಕೊಳ್ಳಬಲ್ಲೆ. ಆದರೆ, ಈಗ ನಾವು ಆ ಮಕ್ಕಳನ್ನು ಅಪ್ಪಿಕೊಂಡು ಅವರಿಗೆ ಸರಿಯಾದ ದಾರಿಯನ್ನು ತೋರಿಸಬೇಕಾದ ಸಮಯ ಬಂದಿದೆ. ಅವರು ದಾರಿ ತಪ್ಪಿದ್ದಾರೆ, ಅವರನ್ನು ಸರಿಯಾದ ಹಾದಿಗೆ ತರುವುದು ನಮ್ಮ ಕರ್ತವ್ಯ ಎಂದಿದ್ದಾರೆ. ಸಮಾಜ ಮತ್ತು ಕೋರ್ಟ್ ಪ್ರಕ್ರಿಯೆಗಳ ಕುರಿತು ಮಾತನಾಡಿದ ಪ್ರಧಾನಿ, ಅವರನ್ನು ಶಿಕ್ಷಿಸುವುದು, ಕೋರ್ಟ್ ಮೆಟ್ಟಿಲೇರಿಸುವುದು ಅಥವಾ ಸಮಾಜದಲ್ಲಿ ಕಿರುಕುಳ ನೀಡುವುದರಿಂದ ಪರಿಸ್ಥಿತಿ ಬದಲಾಗುವುದಿಲ್ಲ. ನಾನು ಅವರನ್ನು ಕ್ಷಮಿಸಲು ಬಯಸುತ್ತೇನೆ. ಸಮಾಜವೂ ಇದನ್ನು ಸ್ವೀಕರಿಸಬೇಕು. ಕೆಲವೊಮ್ಮೆ ನಮ್ಮ ನಾಲಿಗೆ ಹಲ್ಲಿನ ನಡುವೆ ಸಿಲುಕಿ ರಕ್ತ ಬರುತ್ತದೆ, ಹಾಗೆಂದು ನಾವು ಹಲ್ಲನ್ನು ಮುರಿದುಕೊಳ್ಳುವುದಿಲ್ಲವಲ್ಲ. ಏಕೆಂದರೆ ಹಲ್ಲು ಮತ್ತು ನಾಲಿಗೆ ಎರಡೂ ನಮ್ಮದೇ. ಅದೇ ರೀತಿ ಈ ಮಕ್ಕಳೂ ಸಹ ನಮ್ಮವರೇ ಎಂದು ಭಾವುಕ ನಿದರ್ಶನ ನೀಡಿದ್ದಾರೆ. ದಾರಿತಪ್ಪಿದ ಯುವಜನತೆಗೆ ನೇರ ಕರೆ ನೀಡಿದ ಪ್ರಧಾನಿ, ದಾರಿ ತಪ್ಪಿದವರನ್ನು ಸರಿ ದಾರಿಗೆ ತರುವುದು ಕಷ್ಟಕರ, ಆದರೆ ನಾವು ಆ ಕೆಲಸವನ್ನು ಮಾಡಲೇಬೇಕು. ಆದ್ದರಿಂದ ನಾನು ಈ ಮಕ್ಕಳಿಗೆ ಕರೆ ನೀಡುತ್ತಿದ್ದೇನೆ. ದೇಶದ ಹಿತಕ್ಕಾಗಿ ನಾವೆಲ್ಲರೂ ಒಟ್ಟಾಗಿ ಮುನ್ನಡೆಯೋಣ. ಹೊಸದನ್ನು ಕಲಿಯೋಣ, ಮಾಡಿದ ತಪ್ಪುಗಳಿಂದಲೂ ಪಾಠ ಕಲಿಯೋಣ. ದೇಶವು ವೇಗವಾಗಿ ಮುನ್ನಡೆಯುತ್ತಿದ್ದು, ನಿಮ್ಮ ಕನಸುಗಳನ್ನೂ ಈಡೇರಿಸಿಕೊಳ್ಳಿ. ನಾನು ನಿಮಗಾಗಿಯೇ ಜೀವಿಸುತ್ತಿದ್ದೇನೆ, ನಿಮ್ಮ ಉಜ್ವಲ ಭವಿಷ್ಯಕ್ಕಾಗಿ ನನ್ನನ್ನು ಮುಡಿಪಾಗಿಟ್ಟಿದ್ದೇನೆ ಎಂದು ಹೇಳಿ ತಮ್ಮ ಮಾತನ್ನು ಕೊನೆಗೊಳಿಸಿದ್ದಾರೆ.

# ಪರೀಕ್ಷಾ ಬಿಕ್ಕಟ್ಟಿಗೆ ಪ್ರಧಾನಿ ಕ್ಷಮೆಯಾಚಿಸಲಿ: ರಾಹುಲ್



**ನವದೆಹಲಿ, ಆ.1:** ಪರೀಕ್ಷಾ ಪ್ರಶ್ನೆಪತ್ರಿಕೆ ಸೋರಿಕೆ ವಿವಾದದ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರ ವಿರುದ್ಧ ಕಾಂಗ್ರೆಸ್ ನಾಯಕ ಮತ್ತು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಶನಿವಾರ ತಮ್ಮ ದಾಳಿಯನ್ನು ತೀವ್ರಗೊಳಿಸಿದ್ದಾರೆ, ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವು ಭಾರತದ ವಿದ್ಯಾರ್ಥಿಗಳನ್ನು ಅನುತ್ತೀರ್ಣಗೊಳಿಸಿದೆ ಎಂದು ಆರೋಪಿಸಿದ್ದಾರೆ ಮತ್ತು ಕ್ಷಮೆ ಕೇಳುವ ಬದಲು ಪ್ರಧಾನಿ ಕ್ಷಮೆಯಾಚಿಸಬೇಕು ಎಂದು ಪ್ರತಿಪಾದಿಸಿದ್ದಾರೆ. ಮಕ್ಕಳನ್ನು ಕಳೆದುಕೊಂಡ ಪೋಷಕರ ದುಃಖ ಮತ್ತು ಪದೇ ಪದೇ ಪರೀಕ್ಷಾ ಅಕ್ರಮಗಳಿಂದ ಭವಿಷ್ಯಕ್ಕೆ ಧಕ್ಕೆಯಾಗಿರುವ ವಿದ್ಯಾರ್ಥಿಗಳ ಹತಾಶೆಯನ್ನು ಕಡೆಗಣಿಸಲಾಗುವುದಿಲ್ಲ ಎಂದು ಗಾಂಧಿ ಹೇಳಿದರು. "ಪೋಷಕರು ತಮ್ಮ ಮಗುವನ್ನು ದುಃಖಿಸುವುದನ್ನು ನೋಡುವುದಕ್ಕಿಂತ ಹೆಚ್ಚು ನೋವಿನ ಸಂಗತಿ ಇನ್ನೊಂದಿಲ್ಲ" ಎಂದು ಗಾಂಧಿ ಬರೆದಿದ್ದಾರೆ. "ಕಳೆದುಹೋದ ಪ್ರತಿಯೊಂದು ಯುವ ಜೀವನದ ಹಿಂದೆ ಅವರನ್ನು ಎಂದಿಗೂ ಬಿಡದ ನೋವನ್ನು ಹೊತ್ತ ಕುಟುಂಬವಿದೆ – ಮತ್ತು ಮುರಿದ ಶಿಕ್ಷಣ ವ್ಯವಸ್ಥೆಯ ಬಗ್ಗೆ ಗಂಭೀರ ಪ್ರಶ್ನೆಗಳಿವೆ." ಪ್ರತಿಭಟನಾ ನಿರತ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಪ್ರಧಾನಿ ಇತ್ತೀಚೆಗೆ ಕ್ಷಮೆ ಮತ್ತು ಸಂಯಮಕ್ಕಾಗಿ ಮಾಡಿದ ಮನವಿಯನ್ನು ಗುರಿಯಾಗಿಸಿಕೊಂಡು ಗಾಂಧಿ, ಬಿಕ್ಕಟ್ಟಿಗೆ ಮೋದಿ ಅವರ ಪ್ರತಿಕ್ರಿಯೆಯನ್ನು ಪ್ರಶ್ನಿಸಿದ್ದಾರೆ.

"ಮತ್ತು ಪ್ರಧಾನಿಯವರು ವಿದ್ಯಾರ್ಥಿಗಳನ್ನು 'ಕ್ಷಮಿಸುವ' ಬಗ್ಗೆ ಮಾತನಾಡುವ ಧೈರ್ಯವನ್ನು ಹೊಂದಿದ್ದಾರೆ" ಎಂದು ಗಾಂಧಿ ಹೇಳಿದರು. "ಅವರು ದುಃಖಿತರಾಗಿರುವ ಒಬ್ಬ ಪೋಷಕರನ್ನೂ ಭೇಟಿ ಮಾಡಿಲ್ಲ. ಸೋರಿಕೆಯಾದ ಪ್ರಶ್ನೆ ಪತ್ರಿಕೆಯಿಂದ ಭವಿಷ್ಯ ಕದ್ದ ಒಬ್ಬ ವಿದ್ಯಾರ್ಥಿಯೊಂದಿಗೆ ಅವರು ಕುಳಿತುಕೊಂಡಿಲ್ಲ." "ಭಾರತದ ವಿದ್ಯಾರ್ಥಿಗಳಿಗೆ ಅವರ ಕ್ಷಮೆಯ ಅಗತ್ಯವಿಲ್ಲ. ಅವರು ಅವರ ಕ್ಷಮೆಯಾಚನೆಗೆ ಬದ್ಧರಾಗಿದ್ದಾರೆ" ಎಂದು ಅವರು ಹೇಳಿದರು. ಪ್ರತಿಭಟನೆಗಳ ಸಮಯದಲ್ಲಿ ವಿದ್ಯಾರ್ಥಿ ಪ್ರತಿಭಟನಾಕಾರರ ಒಂದು ಭಾಗವು ಅವರ ಮೇಲೆ ನಿಂದನೀಯ ಹೇಳಿಕೆಗಳನ್ನು ಎಸೆದ ನಂತರ ಪ್ರಧಾನಿ ನರೇಂದ್ರ ಮೋದಿ ಅವರು ಕ್ಷಮೆ, ಸಂಯಮ ಮತ್ತು ರಾಷ್ಟ್ರೀಯ ಏಕತೆಗಾಗಿ ಮನವಿ ಮಾಡಿದ ಇತ್ತೀಚಿನ ವೀಡಿಯೊ ಸಂದೇಶದ ನಂತರ ಇತ್ತೀಚಿನ ಟೀಕೆಗಳು ಬಂದಿವೆ. ಆದಾಗ್ಯೂ, ವಿದ್ಯಾರ್ಥಿಗಳ ಕುಂದುಕೊರತೆಗಳನ್ನು ಪರಿಹರಿಸುವುದು, ಪರೀಕ್ಷಾ ಅಕ್ರಮಗಳಿಗೆ ಹೊಣೆಗಾರಿಕೆಯನ್ನು ಖಚಿತಪಡಿಸಿಕೊಳ್ಳುವುದು ಮತ್ತು ಶಿಕ್ಷಣ ವ್ಯವಸ್ಥೆಯಲ್ಲಿ ನಂಬಿಕೆಯನ್ನು ಪುನಃಸ್ಥಾಪಿಸುವುದು ಸರ್ಕಾರದ ಆದ್ಯತೆಯಾಗಿರಬೇಕು ಎಂದು ಕಾಂಗ್ರೆಸ್ ಸಮರ್ಥಿಸಿಕೊಂಡಿದೆ.




ಆಂಧ್ರಪ್ರದೇಶದ ಭೋಗಾಪುರಂನಲ್ಲಿ ಶನಿವಾರ ಅಲ್ಲೂರಿ ಸೀತಾರಾಮರಾಜು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಉದ್ಘಾಟನಾ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮಮೋಹನ್ ನಾಯ್ಡು, ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್ ಚಂದ್ರಬಾಬು ನಾಯ್ಡು, ರಾಜ್ಯಪಾಲ ಎಸ್ ಅಬ್ದುಲ್ ನಜೀರ್ ಪಾಲ್ಗೊಂಡಿದ್ದರು.

# ರೀಲ್ಸ್‌ನಲ್ಲಷ್ಟೇ ಕ್ಷಮಿಸುತ್ತಿರೋ, ಇಲ್ಲ ಎಫ್‌ಐಆರ್ ವಾಪಸ್ ಪಡೀತಿರೋ: ಅಭಿಜೀತ್ ದೀಪ್ಕೆ ಪ್ರಶ್ನೆ



**ನವದೆಹಲಿ, ಆ.1:** ಪ್ರಧಾನಿ ನರೇಂದ್ರ ಮೋದಿ ಅವರು ಇನ್ಸ್ಟಾಗ್ರಾಮ್ ವಿಡಿಯೊ ಒಂದರಲ್ಲಿ ತಮ್ಮ ವಿರುದ್ಧ ನಿಂದನಾತ್ಮಕ ಪದ ಬಳಸಿದ್ದ ಕಾಕ್ರೋಚ್ ಜನತಾ ಪಕ್ಷ ಪ್ರತಿಭಟನಾ ನಿರತ ವಿದ್ಯಾರ್ಥಿಗಳನ್ನು ಕ್ಷಮಿಸಿದ್ದೇನೆ ಎಂದು ಹೇಳಿರುವುದಕ್ಕೆ ಸಿಜೆಪಿ ಸಂಸ್ಥಾಪಕ ಅಭಿಜೀತ್ ದೀಪ್ಕೆ ತೀವ್ರವಾಗಿ ಪ್ರತಿಕ್ರಿಯಿಸಿದ್ದಾರೆ. ಕೇವಲ ಇನ್ಸ್ಟಾಗ್ರಾಮ್ ರೀಲ್ಸ್‌ನಲ್ಲಿ ಮಾತ್ರ ಕ್ಷಮಿಸುತ್ತೀರಾ ಅಥವಾ ವಿದ್ಯಾರ್ಥಿಗಳ ಮೇಲಿರುವ ಪೊಲೀಸ್ ಪ್ರಕರಣಗಳನ್ನು ಹಿಂಪಡೆಯುತ್ತೀರಾ ಎಂದು ಪ್ರಧಾನಿಯವರನ್ನು ಪ್ರಶ್ನಿಸಿದ್ದಾರೆ.

ನೀಟ್ ಪರೀಕ್ಷಾ ಅಕ್ರಮ ಖಂಡಿಸಿ ದೆಹಲಿಯ ಜಂತರ್ ಮಂತರ್‌ನಲ್ಲಿ ಇತ್ತೀಚೆಗೆ ನಡೆದ ಪ್ರತಿಭಟನೆಯಲ್ಲಿ ತಮ್ಮ ಹಾಗೂ ತಮ್ಮ ದಿವಂಗತ ತಾಯಿಯವರ ವಿರುದ್ಧ ಆಕ್ಷೇಪಾರ್ಹ ಪದಗಳನ್ನು ಬಳಸಲಾಗಿತ್ತು ಎಂದು ಪ್ರಧಾನಿ ಮೋದಿ ವಿಡಿಯೊದಲ್ಲಿ ಉಲ್ಲೇಖಿಸಿದ್ದರು. ನಿಂದನೆ ಯಾವುದಕ್ಕೂ ಪರಿಹಾರವಲ್ಲ; ಯುವಕರನ್ನು ಶಿಕ್ಷಿಸುವುದು, ಕೋರ್ಟ್–ಕಚೇರಿ ಎಂದು ಕಿರುಕುಳ ನೀಡುವುದರಿಂದ ಪರಿಸ್ಥಿತಿ ಬದಲಾಗುವುದಿಲ್ಲ. ದಾರಿ ತಪ್ಪಿದ ಯುವಕರನ್ನು ಕ್ಷಮಿಸಿ ಸರಿದಾರಿಗೆ ತರಲು ಬಯಸುತ್ತೇನೆ ಎಂದು ಮೋದಿ ತಮ್ಮ ವಿಡಿಯೊದಲ್ಲಿ ಹೇಳಿದ್ದರು.

ಪ್ರಧಾನಿಯವರ ಈ ಕ್ಷಮಾಪಣೆಯ ಹೇಳಿಕೆಗೆ ಪ್ರತಿಕ್ರಿಯಿಸಿರುವ ಅಭಿಜೀತ್ ದೀಪ್ಕೆ, ಸರ್ಕಾರದ ಮಾತು ಮತ್ತು ಕೃತಿಯ ನಡುವಿನ ದ್ವಂದ್ವವನ್ನು ಎತ್ತಿ ತೋರಿಸಿದ್ದಾರೆ. ಒಂದು ಕಡೆ ಪ್ರಧಾನಿ ಕ್ಷಮೆಯ ಮಾತಾಡುತ್ತಿದ್ದರೆ, ಇನ್ನೊಂದೆಡೆ ಪ್ರತಿಭಟನಾನಿರತ ವಿದ್ಯಾರ್ಥಿಗಳ ವಿರುದ್ಧ ಪೊಲೀಸರು ಎಫ್‌ಐಆರ್ ದಾಖಲಿಸಿ ಬಂಧನದ ಬೆದರಿಕೆ ಹಾಕುತ್ತಿದ್ದಾರೆ ಎಂದು ಅವರು ಆರೋಪಿಸಿದ್ದಾರೆ. ಮಾಧ್ಯಮದವರ ಮೇಲೆ ಆಕ್ಷೇಪಾರ್ಹ ಪದ ಬಳಸಿದ್ದ ಬಿಜೆಪಿ ನಾಯಕರ ವಿರುದ್ಧ ಯಾವುದೇ ಕ್ರಮವಿಲ್ಲ, ಆದರೆ ವಿದ್ಯಾರ್ಥಿಗಳಿಗೆ ಕಠಿಣ ಶಿಕ್ಷೆ ವಿಧಿಸಲಾಗುತ್ತಿದೆ; ಈ ದೇಶದಲ್ಲಿ ಸಾಮಾನ್ಯ ಯುವಜನತೆಗೆ ಒಂದು ಕಾನೂನು, ಬಿಜೆಪಿ ನಾಯಕರಿಗೆ ಇನ್ನೊಂದು ಕಾನೂನು ಇದೆಯೇ ಎಂದು ದೀಪ್ಕೆ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಇದೇ ವೇಳೆ, ಜಂತರ್ ಮಂತರ್ ಪ್ರತಿಭಟನೆಯಲ್ಲಿ ಆಕ್ಷೇಪಾರ್ಹ ಹೇಳಿಕೆ ನೀಡಿದ ಆರೋಪ ಎದುರಿಸುತ್ತಿದ್ದ 15 ವರ್ಷದ ಬಾಲಕಿಯು ಕ್ಷಮಾಪಣೆಯ ವಿಡಿಯೊ ಬಿಡುಗಡೆ ಮಾಡಿದ್ದಾಳೆ. ನಾನು ತಪ್ಪು ಮಾಡಿದ್ದೇನೆ, ಇದು ನನ್ನ ಮೊದಲ ಮತ್ತು ಕೊನೆಯ ತಪ್ಪು, ಇತರರ ಪ್ರಭಾವಕ್ಕೆ ಒಳಗಾಗಿ ಹೀಗೆ ಮಾತನಾಡಿದೆ ಎಂದು ಆಕೆ ಕ್ಷಮೆ ಯಾಚಿಸಿದ್ದಾಳೆ. ಮತ್ತೊಂದೆಡೆ, ಸುಪ್ರೀಂ ಕೋರ್ಟ್ ಕೂಡ ಯಾವುದೇ ಅಪರಾಧ ಹಿನ್ನೆಲೆಯಿಲ್ಲದ ಅಪ್ರಾಪ್ತ ಪ್ರತಿಭಟನಾಕಾರರನ್ನು ತಕ್ಷಣವೇ ಬಿಡುಗಡೆ ಮಾಡುವಂತೆ ರಾಜ್ಯ ಸರ್ಕಾರಗಳಿಗೆ ನಿರ್ದೇಶನ ನೀಡಿದೆ.

# ವಿಕ್ಟಿಮ್ ಕಾರ್ಡ್ ಪ್ಲೇ ಮಾಡುತ್ತಿರುವ ಮೋದಿ ಕ್ಷಮೆ ಕೇಳಲಿ: ಕಾಂಗ್ರೆಸ್



ನವದೆಹಲಿ, ಆ.1: ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಸರ್ಕಾರದ ವೈಫಲ್ಯಗಳನ್ನು ಮುಚ್ಚಿಕೊಳ್ಳಲು ವಿಕ್ಟಿಮ್ ಕಾರ್ಡ್ (ಸಂತ್ರಸ್ತ ಕಾರ್ಡ್) ಬಳಸುತ್ತಿದ್ದಾರೆ ಎಂದು ಕಾಂಗ್ರೆಸ್ ಹಿರಿಯ ನಾಯಕ ಹಾಗೂ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ತೀವ್ರವಾಗಿ ವಾಗ್ದಾಳಿ ನಡೆಸಿದ್ದಾರೆ.

ಪ್ರತಿಭಟನಾನಿರತ ಯುವಜನರನ್ನು ಕ್ಷಮಿಸಿದ್ದೇನೆ ಎಂದು ಹೇಳಿರುವುದನ್ನು ಪ್ರಧಾನಿಯವರ ಆತ್ಮರತಿ ಹಾಗೂ ದೇಶದ ಯುವಜನತೆಗೆ ಮಾಡಿದ ಅಪಮಾನ ಎಂದು ಹೇಳಿರುವ ಅವರು, ನೀಟ್ ಅಕ್ರಮ, ರಾಮಮಂದಿರ ಟ್ರಸ್ಟ್ ವಿವಾದ ಮತ್ತು ನೋಟು ನಿಷೇಧದ ತಪ್ಪುಗಳಿಗೆ ಪ್ರಧಾನಿಯವರೇ ದೇಶದ ಕ್ಷಮೆಯಾಚಿಸಬೇಕು ಎಂದು ಆಗ್ರಹಿಸಿದ್ದಾರೆ.

ಜಂತರ್ ಮಂತರ್‌ನಲ್ಲಿ ನಡೆದ ಸಿಜೆಪಿ ಪ್ರತಿಭಟನೆಯಲ್ಲಿ ತಮ್ಮ ವಿರುದ್ಧ ಆಕ್ಷೇಪಾರ್ಹ ಪದ ಬಳಸಿದ್ದ ಯುವಕರನ್ನು ಕ್ಷಮಿಸಿರುವುದಾಗಿ ಪ್ರಧಾನಿ ಮೋದಿ ಅವರು ಇನ್ಸ್ಟಾಗ್ರಾಮ್ ವಿಡಿಯೊದಲ್ಲಿ ತಿಳಿಸಿದ್ದಕ್ಕೆ ಎಕ್ಸ್ ಜಾಲತಾಣದಲ್ಲಿ ಪೋಸ್ಟ್ ಮೂಲಕ ತಿರುಗೇಟು ನೀಡಿರುವ ಜೈರಾಮ್ ರಮೇಶ್, ಸ್ವಯಂ ಘೋಷಿತ ಜೈವಿಕೇತರ ಪ್ರಧಾನಿಗೆ ವಿಕ್ಟಿಮ್ ಕಾರ್ಡ್ ಪ್ಲೇ ಮಾಡುವುದು ಅಭ್ಯಾಸವಾಗಿದೆ ಎಂದಿದ್ದಾರೆ. ತಮ್ಮ ಪೂರ್ವಾಧಿಕಾರಿಗಳು ಮತ್ತು ರಾಜಕೀಯ ಎದುರಾಳಿಗಳ ವಿರುದ್ಧ ನಿಂದನಾತ್ಮಕ ಮಾತುಗಳನ್ನು ಆಡುವ ಪ್ರಧಾನಿ, ಸಂಸತ್ತಿನ ಒಳಗೂ ಮತ್ತು ಹೊರಗೂ ನಿಂದಕರ ಸೈನ್ಯವನ್ನೇ ಪೋಷಿಸುತ್ತಿದ್ದಾರೆ ಎಂದು ಅವರು ಆರೋಪಿಸಿದ್ದಾರೆ.

ಪ್ರಶ್ನೆಪತ್ರಿಕೆ ಸೋರಿಕೆಯಿಂದಾಗಿ ಲಕ್ಷಾಂತರ ಯುವಕರ ಭವಿಷ್ಯದೊಂದಿಗೆ ಚೆಲ್ಲಾಟವಾಡಿದ್ದಕ್ಕಾಗಿ ಹಾಗೂ ಗೃಹ ಸಚಿವಾಲಯದ ಅನುಮತಿಯೊಂದಿಗೆ ಪ್ರತಿಭಟನಾನಿರತ ವಿದ್ಯಾರ್ಥಿಗಳ ಮೇಲೆ ಕಠಿಣ ಪೊಲೀಸ್ ದೌರ್ಜನ್ಯ ಎಸಗಿದ್ದಕ್ಕಾಗಿ ಪ್ರಧಾನಿ ತಕ್ಷಣವೇ ಕ್ಷಮೆಯಾಚಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ. ಇದರ ಜೊತೆಗೆ, 2020ರ ಫೆಬ್ರವರಿ 5ರಂದು ಪ್ರಧಾನಿಯವರೇ ಲೋಕಸಭೆಯಲ್ಲಿ ಆಡಂಬರದಿಂದ ಘೋಷಿಸಿದ್ದ ರಾಮಮಂದಿರ ಟ್ರಸ್ಟ್‌ನಲ್ಲಿ ನಡೆದಿರುವ ಚಂದಾ ಕಳವು ಮತ್ತು ನಂಬಿಕೆದ್ರೋಹದ ವಿವಾದಕ್ಕೆ ಸಂಬಂಧಿಸಿದಂತೆ ಇಡೀ ದೇಶವೇ ಪ್ರಧಾನಿಯವರ ಕ್ಷಮಾಪಣೆಗಾಗಿ ಕಾಯುತ್ತಿದೆ ಎಂದಿದ್ದಾರೆ. ಅಲ್ಲದೆ, 2016ರ ನವೆಂಬರ್ 8ರಂದು ಜಾರಿಗೆ ತಂದ ತುಘಲಕ್ ಮಾದರಿಯ ನೋಟು ನಿಷೇಧ ನಿರ್ಧಾರದಿಂದಾಗಿ ಕೋಟ್ಯಂತರ ಜನರ ಜೀವನೋಪಾಯ ನಾಶವಾಗಿ, ಲಕ್ಷಾಂತರ ಸಣ್ಣ ಮತ್ತು ಮಧ್ಯಮ ಉದ್ಯಮಗಳು ಬಾಗಿಲು ಮುಚ್ಚಿದ ಐತಿಹಾಸಿಕ ತಪ್ಪಿಗೂ ಪ್ರಧಾನಿ ದೇಶದ ಕ್ಷಮೆ ಕೇಳಬೇಕು ಎಂದು ಒತ್ತಾಯಿಸಿದ್ದಾರೆ.

ಪ್ರಧಾನಿಯವರು ಯುವಕರನ್ನು ಕ್ಷಮಿಸಿದ್ದೇನೆ ಎಂದು ಹೇಳುವುದು ಅತ್ಯಂತ ಸ್ವಯಂ–ಮೋಹದ ಕೃತ್ಯ ಎಂದು ಟೀಕಿಸಿರುವ ಜೈರಾಮ್ ರಮೇಶ್, ತಮ್ಮ ಸರ್ಕಾರದ ಆಡಳಿತದಲ್ಲಿ ಸಂಕಷ್ಟಕ್ಕೊಳಗಾಗಿ ಪ್ರಧಾನಿಯಿಂದ ಕ್ಷಮೆಯಾಚನೆಗೆ ಒತ್ತಾಯಿಸುತ್ತಿರುವ ಯುವಜನತೆಗೆ ಇದು ಮಾಡಿರುವ ದೊಡ್ಡ ಅವಮಾನವಾಗಿದೆ ಎಂದಿದ್ದಾರೆ. ಪ್ರಧಾನಿಯವರ ಇನ್ಸ್ಟಾಗ್ರಾಮ್ ಸಭೆಗಳು ಯಾರನ್ನೂ ಮೂರ್ಖರನ್ನಾಗಿ ಮಾಡಲು ಸಾಧ್ಯವಿಲ್ಲ ಎಂದು ಅವರು ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದಾರೆ.

# ಮುಂಬಯಿಯಲ್ಲಿ ಕನ್ನಡ ಪತ್ರಕರ್ತರ ಸಂಭ್ರಮ ಜಿ.ಎನ್.ಮೋಹನ್‌ಗೆ ರಾಷ್ಟ್ರೀಯ ಮಾಧ್ಯಮ ಪ್ರಶಸ್ತಿ




**ಮುಂಬೈ, ಆ.1:** ಏಕ ಭಾಷೆ, ಏಕ ಉಡುಪು, ಏಕ ಆಹಾರ ಸಂಸ್ಕೃತಿಯನ್ನು ರೂಪಿಸುವ ಪ್ರಯತ್ನಗಳಂತೆ, ದೇಶದಲ್ಲಿ ಸದ್ದಿಲ್ಲದೆ ಏಕ ಮಾಧ್ಯಮದ ಪರಿಕಲ್ಪನೆಯನ್ನು ರೂಪಿಸುವ ಯತ್ನವೂ ನಡೆಯುತ್ತಿದೆ ಎಂದು ಹಿರಿಯ ಪತ್ರಕರ್ತ ಹಾಗೂ ಮಾಧ್ಯಮ ತಜ್ಞ ಜಿ.ಎನ್. ಮೋಹನ್ ಆತಂಕ ವ್ಯಕ್ತಪಡಿಸಿದರು.

ಕನ್ನಡಿಗ ಪತ್ರಕರ್ತರ ಸಂಘ, ಮಹಾರಾಷ್ಟ್ರ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯುಜೆ) ಮುಂಬೈ ಘಟಕದ ವತಿಯಿಂದ ಪತ್ರಿಕಾ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಸಮಾರಂಭದಲ್ಲಿ ರಾಷ್ಟ್ರೀಯ ಮಾಧ್ಯಮ ಪ್ರಶಸ್ತಿ ಸ್ವೀಕರಿಸಿ ಅವರು ಮಾತನಾಡಿದರು.

ಮಾಧ್ಯಮವು ಸಮಾಜದ ಕನ್ನಡಿ ಮತ್ತು ಪ್ರಜಾಪ್ರಭುತ್ವದ ಕಾವಲುಗಾರವಾಗಿರಬೇಕು. ಆದರೆ ಅದು ಉದ್ಯಮದ ಸ್ವರೂಪವನ್ನು ಪಡೆದ ಕ್ಷಣದಿಂದಲೇ ಸಮಾಜವನ್ನು ಕಟ್ಟುವ ತನ್ನ ಮೂಲ ಜವಾಬ್ದಾರಿಯಿಂದ ದೂರ ಸರಿಯಲು ಆರಂಭಿಸಿತು. ಇಂದು ಮಾಧ್ಯಮವು ಹಣ ಮತ್ತು ಅಧಿಕಾರ ಎರಡನ್ನೂ ತಂದುಕೊಡುವ ಪ್ರಬಲ ಸಾಧನವಾಗಿ ರೂಪುಗೊಂಡಿರುವುದು ಆತಂಕಕಾರಿ ಬೆಳವಣಿಗೆ ಎಂದು ಅವರು ಹೇಳಿದರು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಅಧ್ಯಕ್ಷ ಶಿವಾನಂದ ತಗಡೂರು, ಉದ್ಯೋಗ ಅರಸಿ ಮುಂಬಯಿಗೆ ಬಂದ ಕನ್ನಡಿಗರು ಈ ಮಹಾನಗರದ ಬೆಳವಣಿಗೆಯಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ. ಮರಾಠಿ ನೆಲದಲ್ಲಿ ಕನ್ನಡ ಪತ್ರಕರ್ತರು ಪ್ರಾಮಾಣಿಕ ಪತ್ರಿಕೋದ್ಯಮದ ಮೂಲಕ ಕನ್ನಡದ ಸೇವೆ ಸಲ್ಲಿಸುತ್ತಿರುವುದು ಹೆಮ್ಮೆಯ ಸಂಗತಿ. ಇಂತಹ ನೆಲದಲ್ಲಿ ಕನ್ನಡ ಪತ್ರಕರ್ತರನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸಿ, ಕೆಯುಡಬ್ಲ್ಯುಜೆ ಮುಂಬೈ ಘಟಕವನ್ನು ಬಲಿಷ್ಠ ಸಂಘಟನೆಯಾಗಿ ಬೆಳೆಸಿರುವುದು ನಿಜಕ್ಕೂ ಅಭಿನಂದನೀಯ ಎಂದು ಹೇಳಿದರು.

ಮುಂಬಯಿಯಲ್ಲಿ ಕನ್ನಡ ಪತ್ರಕರ್ತರ ಸಂಘಟನೆಯನ್ನು ಕಟ್ಟಿಬೆಳೆಸಲು ಶ್ರಮಿಸಿದ ರೋನ್ಸ್ ಬಂಟ್ವಾಳ, ಶಿವು ಮೂಡಿಗೆರೆ, ದಯಾನಂದ ಸಾಲಿಯಾನ (ಸಾದಯ್ಯ) ಸೇರಿದಂತೆ ಎಲ್ಲ ಪದಾಧಿಕಾರಿಗಳು ಹಾಗೂ ಸದಸ್ಯರ ಸೇವೆಯನ್ನು ಅವರು ವಿಶೇಷವಾಗಿ ಶ್ಲಾಘಿಸಿ ಅಭಿನಂದಿಸಿದರು.

ಸಮಾರಂಭದಲ್ಲಿ ಕೆಯುಡಬ್ಲ್ಯುಜೆ ಮುಂಬೈ ಘಟಕದ ಅಧ್ಯಕ್ಷ ಶಿವು ಮೂಡಿಗೆರೆ, ಪ್ರಧಾನ ಕಾರ್ಯದರ್ಶಿ ರೋನ್ಸ್ ಬಂಟ್ವಾಳ, ಸಂಘದ ಗೌರವ ಸಲಹೆಗಾರ ಐ.ಆರ್. ಶೆಟ್ಟಿ, ಡಾ. ಕಿರಣ್ ಶೆಟ್ಟಿ, ಕಪಸಂ ಅಧ್ಯಕ್ಷೆ ಡಾ. ಜಿ.ಪಿ. ಕುಸುಮ, ಸದಾರಾಮ ಶೆಟ್ಟಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದು, ಪತ್ರಿಕೋದ್ಯಮದ ಮೌಲ್ಯಗಳು, ಕನ್ನಡ ಭಾಷೆಯ ಬೆಳವಣಿಗೆ ಹಾಗೂ ಸಂಘಟಿತ ಶಕ್ತಿಯ ಮಹತ್ವದ ಕುರಿತು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು. ಪತ್ರಿಕಾ ದಿನಾಚರಣೆಯ ಅಂಗವಾಗಿ ನಡೆದ ಈ ಸಮಾರಂಭವು ಕನ್ನಡ ಪತ್ರಕರ್ತರ ಒಗ್ಗಟ್ಟು, ವೃತ್ತಿಪರ ಬದ್ಧತೆ, ಭಾಷಾಭಿಮಾನ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಮತ್ತೊಮ್ಮೆ ಅನಾವರಣಗೊಳಿಸಿದ ಸ್ಮರಣೀಯ ಕಾರ್ಯಕ್ರಮವಾಗಿ ಮೂಡಿಬಂತು.

# ನನಗಿನ್ನೂ 15 ವರ್ಷ, ನನ್ನನ್ನು ಕ್ಷಮಿಸಿ: ಪ್ರಧಾನಿ ವಿರುದ್ಧ ಅವಾಚ್ಯ ಶಬ್ದ ಬಳಸಿದ ಬಾಲಕಿ ಕ್ಷಮೆಯಾಚನೆ

**ನವದೆಹಲಿ:** ದೆಹಲಿಯಲ್ಲಿ ನಡೆದ ನೀಟ್ ಪ್ರತಿಭಟನೆಯ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರ ವಿರುದ್ಧ ಅವಾಚ್ಯ ಶಬ್ದಗಳನ್ನು ಬಳಸಿದ್ದಕ್ಕಾಗಿ ಅಪ್ರಾಪ್ತೆಯ ವಿರುದ್ಧ ಪ್ರಕರಣ ದಾಖಲಾಗಿದ್ದು, ಆಕೆ ಈಗ ಸೋಷಿಯಲ್ ಮೀಡಿಯಾದಲ್ಲಿ ವಿಡಿಯೋ ಮೂಲಕ ಕ್ಷಮೆಯಾಚಿಸಿದ್ದಾಳೆ. ವೈರಲ್ ಆದ ವಿಡಿಯೋದಲ್ಲಿ ಯುವತಿ, ನಾನು ಕೆಲವರ ಪ್ರಭಾವಕ್ಕೆ ಒಳಗಾಗಿ ಪ್ರಧಾನಿಯವರ ವಿರುದ್ಧ ಪ್ರತಿಭಟನೆಯಲ್ಲಿ ಮಾತನಾಡಿದ್ದೇನೆ. ನನ್ನನ್ನು ಕ್ಷಮಿಸಿ ಎಂದು ಬೇಡಿಕೊಂಡಿದ್ದಾಳೆ. ನನಗಿನ್ನೂ 15 ವರ್ಷ. ನಾನು ಮಾಡಿದ ಕೆಲಸ ಕ್ಷಮೆಗೆ ಅರ್ಹವಲ್ಲ. ನಾನು ದೊಡ್ಡ ತಪ್ಪು ಮಾಡಿದ್ದೇನೆ. ಈ ರೀತಿಯ ತಪ್ಪು ನನ್ನಿಂದ ಮತ್ತೊಮ್ಮೆ ಆಗದಂತೆ ನೋಡಿಕೊಳ್ಳುತ್ತೇನೆ. ಇಡೀ ದೇಶದ ಜನರ ಮುಂದೆ ಕ್ಷಮೆಯಾಚಿಸುತ್ತೇನೆ ಎಂದು ಹೇಳಿದ್ದಾಳೆ. ಯುವತಿಯ ವಿರುದ್ಧ ದಾಖಲಾಗಿರುವ ಎಫ್‌ಐಆರ್‌ನಲ್ಲಿ ಆಕೆಯ ವಯಸ್ಸು 25 ವರ್ಷ ಎಂದು ಉಲ್ಲೇಖಿಸಲಾಗಿದ್ದರೂ, ವಿಡಿಯೋದಲ್ಲಿ ತಾನು 15 ವರ್ಷದವಳು ಎಂದು ಹೇಳಿಕೊಂಡಿದ್ದಾಳೆ. ನೀಟ್ ಪ್ರತಿಭಟನೆಯಲ್ಲಿ ಪ್ರಧಾನಿ ಅವರ ವಿರುದ್ಧ ಅವಹೇಳನಕಾರಿ ಘೋಷಣೆಗಳು ಹಾಗೂ ಪೋಸ್ಟರ್‌ಗಳು ವೈರಲ್ ಆದ ಬೆನ್ನಲ್ಲೇ ಕೆಲವು ವಿದ್ಯಾರ್ಥಿಗಳು ವಿಡಿಯೋಗಳ ಮೂಲಕ ನರೇಂದ್ರ ಮೋದಿ ಅವರಿಗೆ ಕ್ಷಮೆಯಾಚಿಸಿದ್ದಾರೆ. ಇದಕ್ಕೂ ಮುನ್ನ ಜಂತರ್ ಮಂತರ್‌ನಲ್ಲಿ ನಡೆದ ಘಟನೆ, ತಮ್ಮ ಮತ್ತು ತಮ್ಮ ದಿವಂಗತ ತಾಯಿಯವರ ವಿರುದ್ಧ ವ್ಯಕ್ತವಾದ ನಿಂದನಾತ್ಮಕ ಹೇಳಿಕೆಗಳ ಕುರಿತು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ತಮ್ಮ ಅಧಿಕೃತ ಇನ್ಸ್ಟಾಗ್ರಾಮ್ ಖಾತೆಯಲ್ಲಿ ಭಾವುಕ ವಿಡಿಯೋ ಸಂದೇಶವೊಂದನ್ನ ಹಂಚಿಕೊಂಡಿದ್ದರು.

# ಕೆಲಸದ ಸ್ಥಳದಲ್ಲಿ ಊಟದ ವೇಳೆ ಅಪಘಾತವಾದರೂ ಪರಿಹಾರ

**ನವದೆಹಲಿ, ಆ.1:** ಕೆಲಸದ ಸ್ಥಳದಲ್ಲಿ ಕಾರ್ಮಿಕನಿಗೆ ಮಧ್ಯಾಹ್ನದ ಊಟದ ವಿರಾಮದ ವೇಳೆ ಅಪಘಾತ ಸಂಭವಿಸಿದರೂ, ಅದು ಉದ್ಯೋಗದ ಅವಧಿಯಲ್ಲೇ ನಡೆದ ಅಪಘಾತವೆಂದು ಪರಿಗಣಿಸಬೇಕು ಮತ್ತು ಉದ್ಯೋಗಿ ಪರಿಹಾರ ಪಡೆಯಲು ಅರ್ಹನಾಗಿರುತ್ತಾನೆ ಎಂದು ದೆಹಲಿ ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ.

ರಾಷ್ಟ್ರೀಯ ವಿಮಾ ಕಂಪನಿಯ ಯಶ್ಪಾಲ್ ಮತ್ತು ಇತರರು ಪ್ರಕರಣದಲ್ಲಿ ನ್ಯಾಯಮೂರ್ತಿ ಮನೋಜ್ ಕುಮಾರ್ ಓಹ್ರಿ ಅವರು ಈ ಆದೇಶ ನೀಡಿದ್ದಾರೆ. ಊಟಕ್ಕಾಗಿ ತೆಗೆದುಕೊಳ್ಳುವ ತಾತ್ಕಾಲಿಕ ವಿರಾಮವು ಉದ್ಯೋಗ ಮತ್ತು ಅಪಘಾತದ ನಡುವಿನ ಸಂಬಂಧವನ್ನು ಕಡಿದುಹಾಕುವುದಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ.

2010ರಲ್ಲಿ ದೆಹಲಿಯ ನಿರ್ಮಾಣ ಸ್ಥಳದಲ್ಲಿ ಮೇಲ್ವಿಚಾರಕರಾಗಿ ಕೆಲಸ ಮಾಡುತ್ತಿದ್ದ ಯಶ್ಪಾಲ್ ಅವರು ಮಧ್ಯಾಹ್ನದ ಊಟದ ವಿರಾಮದ ವೇಳೆ ಸ್ಥಳದಲ್ಲೇ ಇದ್ದಾಗ, ಮೊಬೈಲ್ ಕ್ರೇನ್ ಮೂಲಕ ಸಾಗಿಸಲಾಗುತ್ತಿದ್ದ ಕಬ್ಬಿಣದ ರಾಡ್ ಅವರ ಮೇಲೆ ಬಿದ್ದ ಪರಿಣಾಮ ಎಡಗಾಲು ಕಳೆದುಕೊಂಡಿದ್ದರು.

ಈ ಪ್ರಕರಣದಲ್ಲಿ ಉದ್ಯೋಗಿ ಪರಿಹಾರ ಆಯುಕ್ತರು ಯಶ್ಪಾಲ್ ಅವರಿಗೆ ಬಡ್ಡಿ ಸಹಿತ 7.86 ಲಕ್ಷ ಪರಿಹಾರ ನೀಡುವಂತೆ ಆದೇಶಿಸಿದ್ದರು. ಈ ಆದೇಶವನ್ನು ಪ್ರಶ್ನಿಸಿ ರಾಷ್ಟ್ರೀಯ ವಿಮಾ ಕಂಪನಿ ದೆಹಲಿ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿತ್ತು. ವಿಮಾ ಕಂಪನಿ ಪರ ವಕೀಲರು, ಅಪಘಾತ ಸಂಭವಿಸಿದ ವೇಳೆ ಯಶ್ಪಾಲ್ ಊಟದ ವಿರಾಮದಲ್ಲಿದ್ದರು. ಆದ್ದರಿಂದ ಅದು ಉದ್ಯೋಗದ ಅವಧಿಯಲ್ಲಿ ನಡೆದ ಅಪಘಾತವಲ್ಲ ಎಂದು ವಾದಿಸಿದ್ದರು.

# ತ್ಯಾಜ್ಯದಿಂದ ಸ್ವಾತಂತ್ರ್ಯ ಸ್ವಚ್ಛತಾ ಅಭಿಯಾನಕ್ಕೆ ಸಿಎಂ ಚಾಲನೆ: ಸ್ವಚ್ಛತಾ ಅಭಿಯಾನದಲ್ಲಿ ಕೈಜೋಡಿಸಿ- ಸ್ವಯಂಸೇವಾ ಸಂಘಗಳಿಗೆ ಆಹ್ವಾನ



**ಅಧಿಕಾರಿಗಳ ಮೇಲೆ ಹಲ್ಲೆ; ಸರ್ಕಾರದ ಮೇಲೆ ಮಾಡಿರುವ ಹಲ್ಲೆ - ಗೂಂಡಾಗಿರಿಗೆ ಸರ್ಕಾರ ಹೆದರುವುದಿಲ್ಲ**

**ಐದು ವರ್ಷಗಳಲ್ಲಿ ಮನೆ ನಿರ್ಮಾಣ ಮಾಡಿ; ತಪ್ಪಿದರೆ ದುಪ್ಪಟ್ಟು ತೆರಿಗೆ: ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಎಚ್ಚರಿಕೆ**

**ಬೆಂಗಳೂರು, ಆ.1:** ಬಿಡಿಎ ಅಥವಾ ಯಾವುದೇ ಕಾರ್ಪೊರೇಷನ್ ನಿವೇಶನಗಳಲ್ಲಿ ಮಾಲೀಕರು ಸ್ವಚ್ಛತೆ ಕಾಪಾಡಬೇಕು ಹಾಗೂ ಐದು ವರ್ಷಗಳಲ್ಲಿ ಚಿಕ್ಕದಾದ ಮನೆಯನ್ನು ಕಟ್ಟಿಕೊಳ್ಳಬೇಕು. ತಪ್ಪಿದಲ್ಲಿ ದುಪ್ಪಟ್ಟು ತೆರಿಗೆ ಕಟ್ಟಬೇಕು, ಇಲ್ಲದಿದ್ದರೆ ನಿವೇಶನವನ್ನು ಹಿಂತಿರುಗಿಸುವ ವ್ಯವಸ್ಥೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

ಅವರು ಶನಿವಾರ ಬೆಳಗ್ಗೆ ಹೆಬ್ಬಾಳ ಜಂಕ್ಷನ್ ಬಳಿ "ತ್ಯಾಜ್ಯದಿಂದ ಸ್ವಾತಂತ್ರ್ಯ" ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು.

**ಬೆಂಗಳೂರು ನಿಮ್ಮ ಆಸ್ತಿ.**

ಬೆಂಗಳೂರಿನ ನಾಗರಿಕರಿಗೆ ನಾಗರಿಕ ಜ್ಞಾನವನ್ನು ನೀಡಬೇಕಿದೆ. ನಿವೇಶನ ಖಾಲಿ ಇಟ್ಟುಕೊಂಡರೆ, ಅಲ್ಲಿ ಆಗುವ ಅನಾಹುತಗಳಿಗೆ ಸರ್ಕಾರ ಜವಾಬ್ದಾರರಲ್ಲ. ನಿಮ್ಮ ಆಸ್ತಿಯನ್ನು ನೀವು ರಕ್ಷಿಸಿಕೊಳ್ಳಬೇಕು, ರಾಜ್ಯದ ಆಸ್ತಿಯನ್ನು ನಾವು ಕಾಪಾಡಬೇಕು ಎಂದರು.

ಸ್ವಚ್ಛ ಮಾಡುವುದು ನಮ್ಮ ಕರ್ತವ್ಯ. ನಿಮ್ಮ ಬೆಂಗಳೂರನ್ನು ಕಾಪಾಡಬೇಕಾಗಿರುವುದು ನಿಮ್ಮಕರ್ತವ್ಯ. ಬೆಂಗಳೂರಿನ ಆಸ್ತಿ ಸರ್ಕಾರದ್ದಲ್ಲ ; ಬೆಂಗಳೂರು ನಿಮ್ಮ ಆಸ್ತಿ. ನಿಮ್ಮ ಆಸ್ತಿಯನ್ನು ಕಾಪಾಡಬೇಕೆಂದು ಈ ದೊಡ್ಡ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಎಲ್ಲೆಂದರಲ್ಲಿ ತ್ಯಾಜ್ಯ ಸುರಿಯುವ ವಾಹನಗಳನ್ನು ಮುಟ್ಟುಗೋಲು ಹಾಕಿಕೊಳ್ಳುವಂತೆ ಪೊಲೀಸರಿಗೆ ಸಿಎಂ ಕಟ್ಟಪ್ಪಣೆ

ಪ್ರಾರಂಭದಲ್ಲಿ ಕಸ ಸುರಿಯುವವರಿಗೆ ನೋಟೀಸು ಕೊಡುವುದು, ಕಾಮರಾ ಅಳವಡಿಸುವ ಕೆಲಸಗಳನ್ನು ಮಾಡಲಾಗಿತ್ತು. 15 ದಿನಗಳ ಕಾಲ ತ್ಯಾಜ್ಯ ಸುರಿಯುವುದು ನಿಯಂತ್ರಣದಲ್ಲಿತ್ತು. ತದನಂತರ ಯಥಾಸ್ಥಿತಿಗೆ ಬರಲಾಗಿದೆ. ಯಾರಾದರೂ ಕಟ್ಟಡದ ತ್ಯಾಜ್ಯವನ್ನು ಗುರುತು ಮಾಡಿರುವ ಸ್ಥಳದಲ್ಲಿ ಹಾಕದಿದ್ದರೆ, ಅಂತ ವಾಹನಗಳನ್ನು ಮುಟ್ಟುಗೋಲು ಹಾಕಿಕೊಳ್ಳುವಂತೆ ಪೊಲೀಸರಿಗೆ ಕಟ್ಟಪ್ಪಣೆ ನೀಡಿದರು.

**ಹಸಿರು ಬೆಂಗಳೂರು: ನೂರನೇ ದಿನದಂದು ಐತಿಹಾಸಿಕ ಘೋಷಣೆ**

ತಮ್ಮ ಸರ್ಕಾರದ ನೂರನೇ ದಿನದಂದು ಹಸಿರು ಬೆಂಗಳೂರಿನ ಬಗ್ಗೆ ಐತಿಹಾಸಿಕ ಘೋಷಣೆ ಮಾಡಲಾಗುವುದು ಎಂದರು.

ಟೀಕೆಗಳು ಸಾಯುತ್ತವೆ, ಕೆಲಸಗಳು ಉಳಿಯುತ್ತವೆ

ಬೆಂಗಳೂರಿನ ಸ್ವಚ್ಛತೆಯ ಬಗ್ಗೆ ಪರ, ವಿರೋಧ ಅಭಿಪ್ರಾಯಗಳು, ಟೀಕೆಗಳು ವ್ಯಕ್ತವಾಗಿದೆ. ಟೀಕೆಗಳು ಸಾಯುತ್ತವೆ, ಕೆಲಸಗಳು ಉಳಿಯುತ್ತವೆ ಎಂದರು.

**ಅಧಿಕಾರಿಗಳ ಮೇಲಿನ ಹಲ್ಲೆ; ಸರ್ಕಾರದ ಮೇಲೆ ಮಾಡಿರುವ ಹಲ್ಲೆ**

ಶಿವಾಜಿನಗರದಲ್ಲಿ ಅಧಿಕಾರಿಗಳ ಮೇಲೆ ಕೆಲವರು ಹಲ್ಲೆ ಮಾಡಿದ್ದು , ಅದನ್ನು ನೀವು ಕೇವಲ ಅಧಿಕಾರಿಗಳ ಮೇಲೆ ಮಾಡಿದ್ದೀರಿ ಎಂದು ತಿಳಿದರೆ ಅದು ಭ್ರಮೆ. ಇದು ಸರ್ಕಾರ, ಶಾಸಕರು ಮತ್ತು ಸಚಿವರ ಮೇಲೆ ಮಾಡಿರುವ ಹಲ್ಲೆ. ಗೂಂಡಾಗಿರಿಗೆ ಸರ್ಕಾರ ಹೆದರುವುದಿಲ್ಲ. ಎಲ್ಲಾ ಶಾಸಕರನ್ನು ವಿಶ್ವಾಸಕ್ಕೆ ತೆಗೆದುಕೊಂಡೆ ಬೆಂಗಳೂರಿನ ಪಾದಚಾರಿ ಮಾರ್ಗಗಳ ತೆರವು ಕಾರ್ಯಾಚರಣೆ ಕೈಗೊಳ್ಳಲಾಗಿದೆ ಎಂದರು.

ಬೀದಿ ವ್ಯಾಪಾರಿಗಳಿಗೆ ಕೆಲವು ಜಾಗಗಳನ್ನು ನಿಗದಿ ಮಾಡಿ ನೀಡಲಾಗುವುದು.ಪಾದಚಾರಿಗಳಿಗೆ, ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

**ಅನುಕರಣೀಯ ಅಭಿಯಾನ**

ಬೆಂಗಳೂರು ಸ್ವಚ್ಛತಾ ಅಭಿಯಾನವು ಮಾದರಿ ಕಾರ್ಯಕ್ರಮವಾಗಿದ್ದು, ಎಲ್ಲರೂ ಅವರವರ ಕ್ಷೇತ್ರಗಳಲ್ಲಿ ಈ ಅಭಿಯಾನವನ್ನು ಅನುಕರಿಸಬೇಕೆಂದು ಮನವಿ ಮಾಡಿದರು.

**ಬೆಂಗಳೂರಿನ ಸ್ವಚ್ಛತೆ ಕಾಪಾಡಿ ದೇಶಕ್ಕೆ ಸಂದೇಶ ನೀಡಬೇಕು**

ನಿಮ್ಮ ಮನೆ, ನಿಮ್ಮ ಬೆಂಗಳೂರನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಇಡೀ ದೇಶ ಬೆಂಗಳೂರಿನತ್ತ ಗಮನಹರಿಸಿದೆ. ಬೆಂಗಳೂರಿನ ಸ್ವಚ್ಛತೆ ಕಾಪಾಡಿ ಇಡೀ ದೇಶಕ್ಕೆ ಸಂದೇಶ ಕೊಡಬೇಕಾಗಿರುವುದು ನಿಮ್ಮ ನಮ್ಮೆಲ್ಲರ ಕರ್ತವ್ಯ.




**ಮುಂದಿನ ದಿನಗಳಲ್ಲಿ ಸ್ವಚ್ಛತೆಗೆ ಬೃಹತ್ ರೂಪ**

ರಸ್ತೆಯ ಬದಿಯಲ್ಲಿ ಕಸ ಸುರಿಯುವುದು ಬೆಂಗಳೂರಿನಲ್ಲಿ ಮಾತ್ರವಲ್ಲ ದೆಹಲಿ ಮುಂಬೈ ಸೇರಿದಂತೆ ಬಹುತೇಕ ಎಲ್ಲಾ ನಗರಗಳಲ್ಲಿರುವ ಸಮಸ್ಯೆ. ಸ್ವಚ್ಛತೆಯ ಬಗ್ಗೆ ಬಹಳಷ್ಟು ಸಮಸ್ಯೆಗಳಿದ್ದು, ಮುಂದಿನ ದಿನಗಳಲ್ಲಿ ಇದಕ್ಕೆ ದೊಡ್ಡ ರೂಪವನ್ನು ಕೊಡಲು ಸರ್ಕಾರ ಉದ್ದೇಶಿಸಿದ್ದು, ಇದಕ್ಕೆ ಎಲ್ಲರ ಸಹಕಾರವನ್ನು ಬಯಸುತ್ತೇನೆ ಎಂದರು.

**ಸ್ವಚ್ಛತಾ ಅಭಿಯಾನದಲ್ಲಿ ಭಾಗಿಯಾಗಲು ಸ್ವಯಂ ಸೇವಾ ಸಂಘಗಳಿಗೆ ಆಹ್ವಾನ**

ಸರ್ಕಾರ ಕೈಗೊಂಡಿರುವ ಈ ಸ್ವಚ್ಛತಾ ಕಾರ್ಯಕ್ರಮದಲ್ಲಿ ಸ್ವಯಂ ಸೇವಾ ಸಂಘಗಳು ಭಾಗಿಯಾಗಿ ಒಂದೊಂದು ಪ್ರದೇಶದ ಜವಾಬ್ದಾರಿ ಹೊತ್ತು ಕೊಂಡರೆ, ಅಥವಾ ನಾಲ್ಕು ರಸ್ತೆಗಳನ್ನು ದತ್ತು ತೆಗೆದುಕೊಂಡರೂ ಸಾಕು. ಅದನ್ನು ಸ್ವಾಗತಿಸುವುದಾಗಿ ಮುಖ್ಯಮಂತ್ರಿಗಳು ಈ ಸಂದರ್ಭದಲ್ಲಿ ತಿಳಿಸಿದರು.

"ಮಹಾತ್ಮಾ ಗಾಂಧಿಯವರು 'ಸ್ವಚ್ಛತೆಯೇ ದೇವರು' ಎಂದು ಮಾರ್ಗದರ್ಶನ ಮಾಡಿದ್ದಾರೆ. "ನಿಮ್ಮ ಮನೆ ಮುಂದೆ ಸ್ವಚ್ಛಗೊಳಿಸಿದರೆ ಬೀದೀ ಸ್ವಚ್ಛವಾಗುತ್ತದೆ, ಬೀದಿ ಸ್ವಚ್ಛವಾದರೆ ಊರು, ಊರು ಸ್ವಚ್ಛವಾದರೆ ನಾಡು ಸ್ವಚ್ಛವಾಗುತ್ತದೆ" ಎಂದು ಮಾಜಿ ಪ್ರಧಾನಿ ರಾಜೀವ್ ಗಾಂಧಿ ಹೇಳಿದ್ದಾರೆ.ಅನೇಕ ರಾಷ್ಟ್ರೀಯ ನಾಯಕರು ಸ್ವಚ್ಛತೆಯ ಬಗ್ಗೆ ನಮಗೆ ಮಾರ್ಗದರ್ಶನವನ್ನು ನೀಡಿದ್ದಾರೆ. ಅದನ್ನು ಮುಂದುವರಿಸಿಕೊಂಡು ಹೋಗಬೇಕಿದೆ" ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಸಚಿವ ಕೃಷ್ಣ ಬೈರೇಗೌಡರ ನೇತೃತ್ವದಲ್ಲಿ ನಡೆಯುತ್ತಿರುವ ಈ ಕಾರ್ಯಕ್ರಮಕ್ಕೆ ಕೇಂದ್ರ ಸಚಿವರು ಆಗಮಿಸಿರುವುದು ವಿಶೇಷ. ಇದಕ್ಕೆ ನಾಗರಿಕರೆಲ್ಲರೂ ಸಹಕಾರ ಅಗತ್ಯ ಎಂದರು

ಈ ಸಂದರ್ಭದಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್, ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ, ಶಾಸಕ ಎಸ್.ಆರ್. ವಿಶ್ವನಾಥ್, ಜಿ.ಬಿ.ಎ. ಮುಖ್ಯ ಆಯುಕ್ತ ಎಂ. ಮಹೇಶ್ವರ ರಾವ್ ಮೊದಲಾದವರು ಹಾಜರಿದ್ದರು.

---

# ಪತ್ನಿ ಸಮೇತರಾಗಿ ಮುಖ್ಯಮಂತ್ರಿ ಭೇಟಿ ಮಾಡಿದ ಮಾಜಿ ಸಚಿವ ವಿನಯ್ ಕುಲಕರ್ಣಿ



**ಬೆಂಗಳೂರು, ಆ.1:** ಮಾಜಿ ಸಚಿವ ವಿನಯ್ ಕುಲಕರ್ಣಿ ಜೈಲಿನಿಂದ ಬಿಡುಗಡೆಯಾಗಿ ಬಂದ ಕೂಡಲೇ ಶನಿವಾರ ಬೆಳಗ್ಗೆ ಪತ್ನಿ ಮತ್ತು ಮಕ್ಕಳ ಜೊತೆ ಬೆಂಗಳೂರಿನ ಸದಾ ಶಿವನಗರದಲ್ಲಿರುವ ಸಿಎಂ ಡಿ.ಕೆ. ಶಿವಕುಮಾರ್ ನಿವಾಸಕ್ಕೆ ತೆರಳಿ ಅವರನ್ನು ಭೇಟಿ ಮಾಡಿದ್ದಾರೆ.

ಧಾರವಾಡ ಜಿಲ್ಲಾ ಪಂಚಾಯ್ತಿ ಸದಸ್ಯ ಯೋಗೇಶ್ ಗೌಡ ಕೊಲೆ ಪ್ರಕರಣದಲ್ಲಿ ಮಾಜಿ ಸಚಿವ ವಿನಯ್ ಕುಲಕರ್ಣಿಗೆ ಬಿಗ್ ರಿಲೀಫ್ ಸಿಕ್ಕಿದೆ. ಹೈಕೋರ್ಟ್ ವಿಭಾಗೀಯ ಪೀಠ ಷರತ್ತುಬದ್ಧ ಮಧ್ಯಂತರ ಜಾಮೀನು ನೀಡಿದೆ. ಸ್ಪೆಷಲ್ ಕೋರ್ಟ್ ವಿಧಿಸಿರುವ ಶಿಕ್ಷೆ ಅಮಾನತ್ತಿನಲ್ಲಿಟ್ಟು ತಡೆ ನೀಡಿದೆ. ದೋಷಿ ತೀರ್ಪಿಗೂ ತಡೆ ನೀಡಿ ನ್ಯಾಯಮೂರ್ತಿ ಬಸವರಾಜ್ ಹಾಗೂ ಮೊಹಮ್ಮದ್ ನವಾಜ್ ಅವರಿದ್ದ ವಿಭಾಗೀಯ ಪೀಠ ಆದೇಶಿಸಿದೆ. ಇದೀಗ ಹೊರ ಬಂದ ಕೂಡಲೇ ಡಿಕೆಶಿ ಭೇಟಿ ಮಾಡಿದ್ದಾರೆ.

ಈ ವೇಳೆ ಅವರನ್ನು ಮಾಧ್ಯಮ ಪ್ರತಿನಿಧಿಗಳು ಮಾತನಾಡಲು ಯತ್ನಿಸಿದಾಗ, ಹೈಕೋರ್ಟ್ ನ್ಯಾಯಾಧೀಶರುಗಳಿಗೆ, ಕ್ಷೇತ್ರದ ಜನತೆಗೆ ಧನ್ಯವಾದ ಹೇಳುತ್ತೇನೆ, ಈಗ ನಾನು ಸಚಿವ ಸ್ಥಾನದ ಆಕಾಂಕ್ಷಿ ಅಲ್ಲ. ಸಿಎಂ ಜೊತೆಗೆ ಏನು ಚರ್ಚೆ ಮಾಡಿಲ್ಲ. ಮುಂದೆ ಮಾತನಾಡುತ್ತೇನೆ ಎಂದರು

ನಿನ್ನೆ ರಾತ್ರಿ ಜೈಲಿನಿಂದ ಹೊರಬಂದ ವಿನಯ್ ಕುಲಕರ್ಣಿ ಮಾಧ್ಯಮಗಳೊಂದಿಗೆ ಯಾವುದೇ ಪ್ರತಿಕ್ರಿಯೆ ನೀಡದೆ ನೇರವಾಗಿ ವಾಹನದಲ್ಲಿ ತೆರಳಿದರು. ಈ ವೇಳೆ ಜೈಲು ಹೊರಗೆ ಸೇರಿದ್ದ ಅಭಿಮಾನಿಗಳು ಅವರಿಗೆ ಹೂವಿನ ಹಾರ ಹಾಕಿ ಸ್ವಾಗತ ಕೋರಿದರು. ಕೆಲ ಅಭಿಮಾನಿಗಳೊಂದಿಗೆ ಶೇಕ್ಹ್ಯಾಂಡ್ ಮಾಡಿ ಅವರು ಅಲ್ಲಿಂದ ಡಾಲರ್ಸ್ ಕಾಲೋನಿಯಲ್ಲಿರುವ ತಮ್ಮ ನಿವಾಸದತ್ತ ತೆರಳಿದ್ದರು. ಯೋಗೇಶ್ಗೌಡ ಕೊಲೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆಗೆ ಗುರಿಯಾಗಿದ್ದ ವಿನಯ್ ಕುಲಕರ್ಣಿ, ತಮ್ಮ ಶಿಕ್ಷೆಗೆ ತಡೆ ನೀಡುವಂತೆ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು. ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್, ಶಿಕ್ಷೆಗೆ ತಾತ್ಕಾಲಿಕ ತಡೆ ನೀಡಿ ಜಾಮೀನು ಮಂಜೂರು ಮಾಡಿತ್ತು. 106 ದಿನಗಳ ಜೈಲುವಾಸದ ಬಳಿಕ ಹೈಕೋರ್ಟ್ ಜಾಮೀನಿನ ಮೇಲೆ ವಿನಯ್ ಕುಲಕರ್ಣಿ ಬಿಡುಗಡೆಯಾಗಿದ್ದಾರೆ. ವಿನಯ್ ಕುಲಕರ್ಣಿ ಸೇರಿದಂತೆ ಒಟ್ಟು 10 ಆರೋಪಿಗಳಿಗೆ ಜಾಮೀನು ಸಿಕ್ಕಿದೆ.

---

## ಸೋರಿಕೆ, ನಕಲು, ಅಕ್ರಮ ತಡೆಗೆ ಬಿಗಿಕ್ರಮ: ಪ್ರಿಯಾಂಕ್ ಖರ್ಗೆ

# ಯಾವ ಪ್ರಶ್ನೆಪತ್ರಿಕೆ ಬಳಸಬೇಕೆಂಬುದು ಅಂತಿಮ ಕ್ಷಣದವರೆಗೆ ಗೌಪ್ಯ



**ಬೆಂಗಳೂರು, ಜು.31:** ಪ್ರಶ್ನೆಪತ್ರಿಕೆಗಳ ಸೋರಿಕೆ, ಪರೀಕ್ಷಾ ನಕಲು ಹಾಗೂ ಅಕ್ರಮಗಳನ್ನು ತಡೆಯಲು ಪ್ರಶ್ನೆಪತ್ರಿಕೆ ಮತ್ತು ಉತ್ತರ ಪತ್ರಿಕೆಗಳನ್ನು ರಾಂಡಮೈಸೇಷನ್ ನಡೆಸಲಾಗುತ್ತಿದೆ. ಜೊತೆಗೆ ಅನೇಕ ಬಿಗಿಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಕುರಿತಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದಲ್ಲಿ ಮೂರೂವರೆ ಗಂಟೆಗಳ ಕಾಲ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಕರ್ನಾಟಕ ಲೋಕಸೇವಾ ಆಯೋಗ ಸೇರಿದಂತೆ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳೊಂದಿಗೆ ಸುದೀರ್ಘ ಸಭೆ ನಡೆಸಲಾಗಿದೆ ಎಂದು ಹೇಳಿದರು.

ಹಣಕಾಸು ಇಲಾಖೆಯಿಂದ 74 ಸಾವಿರ ಹುದ್ದೆಗಳ ನೇಮಕಾತಿಗೆ ಈಗಾಗಲೇ ಅನುಮೋದನೆ ದೊರೆತಿದೆ. ಮುಂದಿನ ಒಂದು ವರ್ಷದಲ್ಲಿ ಇವುಗಳಿಗೆ ನೇಮಕಾತಿ ನಡೆಯಲಿದೆ. ಮೊದಲ ಹಂತದಲ್ಲಿ ಮುಂದಿನ ಆರು ತಿಂಗಳೊಳಗೆ 36,773 ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನಿಸಿ ಲಿಖಿತ ಪರೀಕ್ಷೆಗಳನ್ನು ನಡೆಸಲಾಗುವುದು. ಸುಮಾರು 35 ಲಕ್ಷ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ನಿರೀಕ್ಷೆಯಿದೆ ಎಂದು ತಿಳಿಸಿದರು.

ಪ್ರಶ್ನೆಪತ್ರಿಕೆ ಸೋರಿಕೆಗೆ ಅವಕಾಶವೇ ಇಲ್ಲದಂತೆ ಈ ಬಾರಿ ಹಲವು ಹೊಸ ಭದ್ರತಾ ಕ್ರಮಗಳನ್ನು ಜಾರಿಗೊಳಿಸಲಾಗಿದೆ. ಒಂದೇ ಪ್ರಶ್ನೆ ಪತ್ರಿಕೆಯ ಬದಲಿಗೆ ವಿವಿಧ ಮಾದರಿಯ ಪ್ರಶ್ನೆ ಪತ್ರಿಕೆಗಳನ್ನು ಸಿದ್ಧಪಡಿಸಿ, ಪ್ರಶ್ನೆ ಪತ್ರಿಕೆಗಳ ಬ್ಯಾಂಕ್ ನಿರ್ಮಿಸಲಾಗಿದೆ. ವಿಷಯವಾರು ಮತ್ತು ನಿಗದಿತ ಪ್ರಮಾಣದಲ್ಲಿ ವಿವಿಧ ಸೆಟ್‌ಗಳ ಪ್ರಶ್ನೆಪತ್ರಿಕೆಗಳನ್ನು ಸಿದ್ಧಪಡಿಸಲಾಗಿದ್ದು, ಯಾವ ಪ್ರಶ್ನೆಪತ್ರಿಕೆ ಬಳಸಬೇಕು ಎಂಬುದು ಅಂತಿಮ ಕ್ಷಣದವರೆಗೆ ಗೌಪ್ಯವಾಗಿರಲಿದೆ. ಪ್ರಶ್ನೆಪತ್ರಿಕೆಯ ಟ್ರಂಕ್ ಅಥವಾ ಕವರ್ ಅನ್ನು ಪರೀಕ್ಷೆ ಆರಂಭಕ್ಕೂ ಮುನ್ನ ತೆರೆಯಲಾಗಿದೆ ಎಂಬ ಆರೋಪಗಳು ಬಂದಿದ್ದವು. ಬಹುಪದರ ಭದ್ರತಾ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ. ಯಾವುದೇ ಅನಧಿಕೃತ ವ್ಯಕ್ತಿ ಪ್ರಶ್ನೆಪತ್ರಿಕೆ ಟ್ರಂಕ್ ತೆರೆಯಲು, ಭದ್ರತಾ ವ್ಯವಸ್ಥೆ ಭೇದಿಸಲು ಯತ್ನಿಸಿದರೆ ತಕ್ಷಣವೇ ಎಚ್ಚರಿಕೆಯ ಸೈರನ್ ಮೊಳಗಲಿದೆ.

**ಪರೀಕ್ಷಾ ಕೊಠಡಿಯಲ್ಲೂ ಜಾಮರ್ ಅಳವಡಿಕೆ**

ಪ್ರಶ್ನೆಪತ್ರಿಕೆಗಳ ಮುದ್ರಣ ಹಾಗೂ ಸಾಗಾಣಿಕೆ ಹಂತದಲ್ಲೂ ಕಟ್ಟುನಿಟ್ಟಿನ ಭದ್ರತೆ ಕಲ್ಪಿಸಲಾಗಿದೆ. ಹೊರ ರಾಜ್ಯಗಳಲ್ಲಿ ಬಿಗಿಭದ್ರತೆ ಇರುವ ಕಡೆ ಪ್ರಶ್ನೆಪತ್ರಿಕೆ ಮುದ್ರಿಸಲಾಗಿದೆ. ಸಾಗಾಣಿಕೆ ಹಂತದಲ್ಲೂ ಪ್ರಮಾಣಿತ ಕಾರ್ಯವಿಧಾನ ಪಾಲಿಸಲಾಗುತ್ತಿದೆ ಎಂದು ಹೇಳಿದರು. ಈ ಹಿಂದೆ ಪರೀಕ್ಷಾ ಕೇಂದ್ರದ ಸುತ್ತಮುತ್ತ ಮಾತ್ರ ಜಾಮರ್ ಅಳವಡಿಸಲಾಗುತ್ತಿತ್ತು. ಈಗ ಪ್ರತಿಯೊಂದು ಪರೀಕ್ಷಾ ಕೊಠಡಿಯಲ್ಲೂ ಜಾಮರ್ ಅಳವಡಿಸಲಾಗುತ್ತಿದೆ. ತನ್ಮೂಲಕ ಮೊಬೈಲ್ ಅಥವಾ ಇತರೆ ತಂತ್ರಜ್ಞಾನದ ಮೂಲಕ ಪ್ರಶ್ನೆ ಪತ್ರಿಕೆ ಹೊರಹೋಗದಂತೆ ತಡೆಯಲಾಗುವುದು ಎಂದು ವಿವರಿಸಿದರು.

**ಓಎಂಆರ್ ತಿದ್ದುಪಡಿಗೆ ಅವಕಾಶವಿಲ್ಲ:** ಓಎಂಆರ್ ಉತ್ತರ ಪತ್ರಿಕೆಗಳಲ್ಲಿ ತಿದ್ದುಪಡಿ ಮಾಡುವ ಅವಕಾಶವೇ ಇರದಂತೆ ಪರೀಕ್ಷೆ ನಡೆದ ದಿನವೇ ಅಥವಾ 24 ಗಂಟೆಗಳೊಳಗೆ ಉತ್ತರ ಪತ್ರಿಕೆಗಳ ಓಎಂಆರ್ ಶೀಟ್‌ಗಳನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು..

**ಕಾರ್ಯಸೂಚಿ:** ಪ್ರಶ್ನೆಪತ್ರಿಕೆ ಹಾಗೂ ಓಎಂಆರ್ ಶೀಟ್‌ಗಳನ್ನು ಕನಿಷ್ಠ ಐದು ಅಭ್ಯರ್ಥಿಗಳ ಸಮುಖದಲ್ಲೇ ತೆರೆಯಬೇಕು. ಪರೀಕ್ಷಾ ಕೇಂದ್ರಗಳನ್ನು 24 ಗಂಟೆಗಳ ಮುಂಚಿತವಾಗಿ ಸಂಪೂರ್ಣ ಪರಿಶೀಲಿಸಿ ಭದ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಎಲ್ಲೆಡೆ ಸಿಸಿಟಿವಿ ಕ್ಯಾಮೆರಾಗಳು ಕಾರ್ಯನಿರ್ವಹಿಸುತ್ತಿರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಗೃಹ ಇಲಾಖೆ ಪ್ರಮಾಣಿತ ಕಾರ್ಯಸೂಚಿ ಹೊರಡಿಸಿದೆ. ಎಂದು ತಿಳಿಸಿದರು.

**ವಿಶೇಷ ನಿಗಾ:** ಈ ಹಿಂದೆ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಆರೋಪಿಗಳು ಹಾಗೂ ಕೆಲವು ಕೋಚಿಂಗ್ ಕೇಂದ್ರಗಳ ಮೇಲೂ ವಿಶೇಷ ನಿಗಾ ಇರಿಸಲಾಗಿದೆ. ಯಾವುದೇ ಕೋಚಿಂಗ್ ಕೇಂದ್ರಗಳಿಗೆ ಅನುಮಾನ ಅಥವಾ ವದಂತಿ ಕಂಡು ಬಂದರೆ ತಕ್ಷಣವೇ ಪೊಲೀಸ್ ಇಲಾಖೆಗೆ ಮಾಹಿತಿ ನೀಡುವಂತೆ ಮನವಿ ಮಾಡಿದರು.

---

## ಪಾದಚಾರಿ ಮಾರ್ಗಗಳ ಮಧ್ಯದಲ್ಲಿರುವ ಪರಿವರ್ತಕಗಳ ಸ್ಥಳಾಂತರಕ್ಕೆ ಚಾಲನೆ

# ಸುರಕ್ಷಿತ ಪಾದಚಾರಿ ಮಾರ್ಗದ ಗ್ಯಾರಂಟಿಗೆ ಬೆಸ್ಕಾಂ ಸಹಕಾರ: ಕೆ.ಜೆ.ಜಾರ್ಜ್

**ಬೆಂಗಳೂರು, ಆ.1:** ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಆಯೋಜಿಸಿರುವ ಒಂದು ತಿಂಗಳ ಅವಧಿಯ ಕ್ಲೀನ್ ಅಪ್ ಬೆಂಗಳೂರು ಅಭಿಯಾನದಲ್ಲಿ ಬೆಸ್ಕಾಂ ಕೈಜೋಡಿಸಿದ್ದು, ಪರಿವರ್ತಕಗಳ ಸ್ಥಳಾಂತರದಿಂದ ಸುರಕ್ಷಿತ ನಡಿಗೆಯ ಗ್ಯಾರಂಟಿ ನೀಡಲಿದೆ ಎಂದು ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ.ಜಾರ್ಜ್ ಹೇಳಿದ್ದಾರೆ.

ಜಿಬಿಎ ಘೋಷಿಸಿರುವ ಒಂದು ತಿಂಗಳ ಕ್ಲೀನ್ ಅಪ್ ಬೆಂಗಳೂರು ಅಭಿಯಾನದಲ್ಲಿ ಕೈಜೋಡಿಸಿರುವ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ (ಬೆಸ್ಕಾಂ) ಶನಿವಾರ ಹಮ್ಮಿಕೊಂಡಿದ್ದ ಪಾದಾಚಾರಿ ಮಾರ್ಗಗಳಲ್ಲಿರುವ ವಿದ್ಯುತ್ ಪರಿವರ್ತಕಗಳನ್ನು ಸ್ಥಳಾಂತರಿಸುವ ಕಾರ್ಯವನ್ನು ವೀಕ್ಷಿಸಿದ ಸಚಿವ ಕೆ.ಜೆ.ಜಾರ್ಜ್ ಅವರು, ಈ ಕಾರ್ಯವನ್ನು ತ್ವರಿತವಾಗಿ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಚಿವ ಕೆ.ಜೆ.ಜಾರ್ಜ್ ಅವರು ಹೆಣ್ಣೂರು ಮುಖ್ಯ ರಸ್ತೆ ಸಮೀಪದ ಚನ್ನಕೇಶವ ಬಡಾವಣೆಯ ಪಾದಚಾರಿ ಮಾರ್ಗದಲ್ಲಿದ್ದ ವಿದ್ಯುತ್ ಟ್ರಾನ್ಸ್ಫಾರ್ಮರ್ ಸ್ಥಳಾಂತರ ಕಾರ್ಯವನ್ನು ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಡಾ.ಎನ್.ಶಿವಶಂಕರ ಅವರೊಂದಿಗೆ ಪರಿಶೀಲನೆ ನಡೆಸಿದರು. ಸಾರ್ವಜನಿಕರಿಗೆ ಸುರಕ್ಷಿತ ಪಾದಚಾರಿ ಮಾರ್ಗ ಕಲ್ಪಿಸಲು ಆದ್ಯತೆ ಮೇರೆಗೆ ಕೆಲಸ ನಿರ್ವಹಿಸಲು ಸೂಚನೆ ನೀಡಿದರು.

"ನಾಗರಿಕ ಸ್ನೇಹಿಯಾಗಿರುವ ಬೆಸ್ಕಾಂ ಕೂಡ ಜಿಬಿಎ ಜತೆಗೆ ಕ್ಲೀನ್ ಅಪ್ ಬೆಂಗಳೂರು ಅಭಿಯಾನದಲ್ಲಿ ಭಾಗಿಯಾಗಿದೆ. ನಗರದ ಜನತೆಗೆ ಸುರಕ್ಷಿತ ಪಾದಚಾರಿ ಮಾರ್ಗ ಕಲ್ಪಿಸುವುದು ನಮ್ಮ ಕರ್ತವ್ಯವಾಗಿದೆ. ಅಭಿವೃದ್ಧಿಗೆ ವಿದ್ಯುತ್ ಮೂಲಸೌಕರ್ಯ ಅಳವಡಿಕೆ ಅವಶ್ಯಕ.

ಹೀಗಿದ್ದರೂ ಪಾದಚಾರಿಗಳಿಗೆ ತೊಂದರೆಯಾಗದಂತೆ ಕೆಲವೆಡೆ ಪಾದಚಾರಿ ಮಾರ್ಗಗಳಲ್ಲಿ ಇರುವ ವಿದ್ಯುತ್ ಪರಿವರ್ತಕಗಳನ್ನು ಕೂಡಲೇ ಸ್ಥಳಾಂತರಿಸುವ ಕೆಲಸಕ್ಕೆ ಬೆಸ್ಕಾಂ ಮುಂದಾಗಿದೆ.



ಇನ್ನೊಂದು ತಿಂಗಳಲ್ಲಿ ನಾವು ಜನತೆಗೆ ಸುರಕ್ಷಿತ ಪಾದಚಾರಿ ಮಾರ್ಗ ಹಾಗೂ ಕಸಮುಕ್ತ ವಾತಾವರಣ ನಿರ್ಮಿಸಿ ಕೊಡಲಿದ್ದೇವೆ. ಬೆಸ್ಕಾಂ ವಿಶೇಷವಾಗಿ ಅಭಿಯಾನದಲ್ಲಿ ತನ್ನ ಜವಾಬ್ದಾರಿ ಯನ್ನು ನಿರ್ವಹಿಸಲಿದೆ," ಎಂದು ಸಚಿವರು ಹೇಳಿದರು.

ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರಾದ ಡಾ.ಎನ್.ಶಿವಶಂಕರ ಮಾತನಾಡಿ, "ಪಾದಚಾರಿ ಮಾರ್ಗಗಳಲ್ಲಿರುವ ಅನುಪಯುಕ್ತ ಹಾಗೂ ನಿಷ್ಕ್ರಿಯಗೊಂಡ ವಿದ್ಯುತ್ ಮೂಲ ಸೌಕರ್ಯಗಳನ್ನು ತೆರವುಗೊಳಿಸಲಾಗುವುದು. ಮುರಿದಿರುವ, ಹಾನಿಗೊಳಗಾಗಿರುವ ಮತ್ತು ಸವಕಳಿಯಾಗಿರುವ ವಿದ್ಯುತ್ ಕಂಬಗಳನ್ನು ಉಗ್ರಾಣಗಳಿಗೆ ಹಿಂತಿರುಗಿ ಸಲು ಅಥವಾ ಸೂಕ್ತ ಸ್ಥಳಗಳಿಗೆ ಸ್ಥಳಾಂತರಿಸಲು ಸೂಚಿಸಲಾಗಿದೆ," ಎಂದರು.

"ಮುಖ್ಯ ರಸ್ತೆಗಳಲ್ಲಿ ಹಾಲಿ ಇರುವ ಡಿಪಿ ಸ್ಟ್ರಕ್ಚರ್ ಪರಿವರ್ತಕ ಕೇಂದ್ರಗಳಿಂದ ಪಾದಚಾರಿಗಳಿಗೆ ಅಡಚಣೆಯಾಗುತ್ತಿರುವುದು ಕಂಡುಬಂದಲ್ಲಿ ಅಂತಹ ಪರಿವರ್ತಕಗಳನ್ನು ಸ್ಪೆಷಲ್ ಡಿಸೈನ್ ಪರಿವರ್ತಕ ಕೇಂದ್ರಗಳನ್ನಾಗಿ ಬದಲಾಯಿಸಬೇಕು ಇಲ್ಲವೇ ಸ್ಪನ್ ಪೋಲ್ ಬಳಸಿ ಪರಿವರ್ತಕವನ್ನು ಅಳವಡಿಸಬೇಕು. ಸ್ಪನ್ ಪೋಲ್‌ಅನ್ನು ಅಳವಡಿಸುವಾಗ ಪಾದಚಾರಿ ಮಾರ್ಗ ದಿಂದ ದೂರವಿರುವಂತೆ ಹಾಗೂ ಪಾದಚಾರಿಗಳಿಗೆ ತೊಡಕಾಗ ದಂತೆ ಖಚಿತಪಡಿಸಿಕೊಳ್ಳಲು ಅಧಿಕಾರಿಗಳಿಗೆ ನಿರ್ದೇಶಿಸಲಾಗಿದೆ," ಎಂದು ತಿಳಿಸಿದರು.

---

# ಲೆಕ್ಕಪರಿಶೋಧನೆ ಮಾಡಿಸದ ಕೂಡಲಸಂಗಮ ಮಂಡಲಿ ಅಧಿಕಾರಿಗಳಿಗೆ ತರಾಟೆ

**ಬೆಂಗಳೂರು,ಆ.1 :** ಇಂದು ವಿಧಾನಸೌಧದಲ್ಲಿ ಉಪಮುಖ್ಯಮಂತ್ರಿ ಗಳು ಹಾಗೂ ಕಂದಾಯ ಸಚಿವರಾದ ಡಾ.ಜಿ.ಪರಮೇಶ್ವರ ಅವರು ಕಂದಾಯ ಇಲಾಖೆಯ ವ್ಯಾಪ್ತಿಗೆ ಒಳಪಡುವ ವಿವಿಧ ಅಭಿವೃದ್ಧಿ ಪ್ರಾಧಿಕಾರಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಅಧಿಕಾರಿಗಳಿಗೆ ಅಗತ್ಯ ನಿರ್ದೇಶನಗಳನ್ನು ನೀಡಿದರು.



ಈ ವೇಳೆ, ಕಳೆದ 35 ವರ್ಷ ಕಳೆದರೂ ಲೆಕ್ಕ ಪರಿಶೋಧ ಮಾಡಿಸದಿರುವುದಕ್ಕೆ ಕೂಡಲಸಂಗಮ ಮಂಡಳಿಯ ಅಧಿಕಾರಿಗಳನ್ನು ತೀವ್ರ ತರಾಟೆಗೆ ತೆಗೆದುಕೊಂಡರು.

ಬಳಿಕ, ಕಾಮಗಾರಿಗಳಿಗೆ ಸಂಬಂಧಿಸಿದಂತೆ ಯೋಜನೆ ಸಿದ್ಧಪಡಿಸಿದ ಬಳಿಕ ಮೂಲ ಅಂದಾಜು ವೆಚ್ಚದ ಪರಿಷ್ಕರಣೆ ಮಾಡಿಸಿ, ಜಸ್ಟಿಫಿಕೇಶನ್ ನೀಡಿ ಮಂಡಳಿಯು ಅನುಮೋದನೆ ನೀಡಬೇಕು. ಬಳಿಕ ಮುಂದಿನ ತೀರ್ಮಾನ ಸರ್ಕಾರ ತೆಗೆದುಕೊಳ್ಳಲಿದೆ. ಚಿಕ್ಕಸಂಗಮದಲ್ಲಿ ಕಲ್ಯಾಣ ಮಂಟಪ, ವೇದ ಪಾಠಶಾಲೆ ಸೇರಿದಂತೆ ಇನ್ನಿತರೆ ಅಭಿವೃದ್ಧಿಗೆ 24.98 ಕೋಟಿ ರೂ. ಅನುದಾನ ಕೇಳಲಾಗಿದೆ. ಈ ಬಗ್ಗೆಯೂ ಕ್ರಮ ವಹಿಸಲಾಗುವುದು ಎಂದರು. ಬಸವ ಕಲ್ಯಾಣ ಮಂಡಳಿ 2005ರಲ್ಲಿ ಜಾರಿಗೆ ಬಂದಿದೆ. 2023ರವರೆಗೆ ಯಾವುದೇ ಅಭಿವೃದ್ಧಿ ಕೈಗೊಳ್ಳಲು ಸಾಧ್ಯವಾಗಿಲ್ಲ. ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ 744 ಕೋಟಿ ರೂ. ಮಂಜೂರು ಮಾಡಿ ಸಚಿವ ಸಂಪುಟ ಅನುಮೋದನೆ ನೀಡಿತು. ಇದರಲ್ಲಿ 480 ಕೋಟಿ ರೂ. ಖರ್ಚು ಮಾಡಲಾಗಿದೆ. 17 ಸ್ಮಾರಕಗಳ ಕಾಮಗಾರಿ ಶೀಘ್ರದಲ್ಲಿ ಮುಗಿಸಬೇಕು ಎಂದು ಸೂಚಿಸಿದರು.

ಬಸವ ಕಲ್ಯಾಣಕ್ಕೆ ಮುಖ್ಯಮಂತ್ರಿಯವರೊಂದಿಗೆ ಭೇಟಿ ನೀಡಿದಾಗ ಡಿಸೆಂಬರ್ ಅಂತ್ಯದೊಳಗೆ ಪೂರ್ಣಗೊಳಿಸುವುದಾಗಿ ತಿಳಿಸಲಾಗಿತ್ತು. ಈಗ ಮತ್ತೆ ಹೆಚ್ಚಿನ ಕಾಲಾವಕಾಶ ಕೇಳುತ್ತಿದ್ದೀರಿ. ಇದು ಸರಿಯಲ್ಲ. ಎಲ್ಲ ಕಾಮಗಾರಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸಿ, ಲೋಕಾರ್ಪಣೆ ಗೊಳಿಸಲು ಸಿದ್ಧಪಡಿಸಬೇಕು ಎಂದು ಬೀದರ್ ಜಿಲ್ಲಾಧಿಕಾರಿಗಳಿಗೆ ಡಿಸಿಎಂ ಪರಮೇಶ್ವರ್ ಸ್ಪಷ್ಟ ನಿರ್ದೇಶನ ನೀಡಿದರು.

---

# ಬಹುಮುಖ ಪ್ರತಿಭೆ ಕು. ಜಾನಕಿ ಸುಬ್ರಮಣ್ಯಂ ರಂಗಪ್ರವೇಶ

ಬೆಂಗಳೂರಿನ ಹೆಸರಾಂತ 'ನಟರಾಜರಂಗಂ ಸ್ಕೂಲ್ ಆಫ್ ಡ್ಯಾನ್ಸ್' ನೃತ್ಯಸಂಸ್ಥೆಯ ಉತ್ತಮ ನಾಟ್ಯಗುರು ಮತ್ತು ನೃತ್ಯ ಕಲಾವಿದೆ ಶ್ರೀಮತಿ. ಅಭಿನಯ ನಟರಾಜನ್ ಅವರ ಬಳಿ ಕಳೆದ 9 ವರ್ಷಗಳಿಂದ ಬದ್ಧತೆಯಿಂದ ನೃತ್ಯ ಕಲಿಯುತ್ತಿರುವ ಬಹುಮುಖ ಪ್ರತಿಭೆ ಕು. ಜಾನಕಿ ಸುಬ್ರಮಣ್ಯಂ ಶ್ರೀ ಸುಬ್ರಮಣ್ಯಂ ಮತ್ತು ಕೃಷ್ಣವೇಣಿ ಅವರ ಮಗಳು. ಬೆಂಗಳೂರಿನ ಬಿ.ಎಂ.ಎಸ್. ಎಂಜಿನಿಯ ರಿಂಗ್ ಕಾಲೇಜಿನಲ್ಲಿ ಕಂಪ್ಯೂಟರ್ ಸೈನ್ಸ್ ವಿಷಯದಲ್ಲಿ ಎಂಜಿನಿಯರಿಂಗ್ ವಿದ್ಯಾಭ್ಯಾಸ ಮಾಡುತ್ತಿರುವ ಹತ್ತೊಂಭತ್ತರ ಜಾನಕೀ ಉತ್ತಮ ಉದಯೋನ್ಮುಖ ನೃತ್ಯ ಪ್ರತಿಭೆ. ಸಣ್ಣ ವಯಸ್ಸಿನಿಂದ ನೃತ್ಯ ಕಲಿಯುತ್ತಿರುವ ಜಾನಕೀ ಕರ್ನಾಟಕ ಸರ್ಕಾರ ನಡೆಸುವ ನೃತ್ಯಪರೀಕ್ಷೆಯಲ್ಲಿ ಜ್ಯೂನಿಯರ್ ಮತ್ತು ಡಾ. ಗಂಗೂಬಾಯಿ ಹಾನಗಲ್ ಮ್ಯೂಸಿಕ್ ಮತ್ತು ಪರ್ಫಾರ್ಮಿಂಗ್ ಆರ್ಟ್ಸ್ ಯೂನಿವರ್ಸಿಟಿಯಿಂದ ಸೀನಿಯರ್ ಬೋರ್ಡ್ ಪರೀಕ್ಷೆಯಲ್ಲಿ 'ಡಿಸ್ಟಿಂಕ್ಷನ್'ಪಡೆದು ತೇರ್ಗಡೆ ಯಾಗಿರುವ ಹಿರಿಮೆ ಇವಳದು. ಚಿತ್ರಕಲೆ ಮತ್ತು ಪೇಯಿಂಟಿಂಗ್ ಹವ್ಯಾಸವುಳ್ಳ ಜಾನಕೀ ಕರ್ನಾಟಕ ಶಾಸ್ತ್ರೀಯ ಸಂಗೀತವನ್ನೂ ಕಲಿತಿದ್ದು, ಈಗಾಗಲೇ ದೇಶಾದ್ಯಂತ ಅನೇಕ ನೃತ್ಯಪ್ರದರ್ಶನಗಳನ್ನು ನೀಡಿ ಕಲಾರಸಿಕರ ಮೆಚ್ಚುಗೆ ಪಡೆದಿದ್ದಾಳೆ. ಎಸ್.ಎಸ್.ಎಲ್.ಸಿ ಮತ್ತು ಪಿಯೂಸಿ ಪರೀಕ್ಷೆಗಳಲ್ಲಿ ಅತ್ಯುಚ್ಚ ಅಂಕಗಳನ್ನು ಗಳಿಸಿ ಡಿಸ್ಟಿಂಕ್ಷನ್‌ನಲ್ಲಿ ತೇರ್ಗಡೆಯಾದ ವೈಶಿಷ್ಟ್ಯ ಇವಳದು. ಉತ್ತಮ ವಾಗ್ಮಿಯಾದ ಇವಳು ಅನೇಕ ನೃತ್ಯ ಕಾರ್ಯಕ್ರಮಗಳಲ್ಲಿ ನಿರೂಪಣೆ ಮಾಡಿ ಹೆಸರು ಗಳಿಸಿದ್ದು, ಇದೀಗ, ವಿದುಷಿ. ಅಭಿನಯ ನಟರಾಜನ್ ಅವರಲ್ಲಿ ಅಭ್ಯಾಸ ಮಾಡಿರುವ ಭರತನಾಟ್ಯದ ವಿವಿಧ ಆಯಾಮಗಳನ್ನು ಪ್ರದರ್ಶಿಸಲು ಆಗಸ್ಟ್ 8 ಶನಿವಾರದಂದು ಸಂಜೆ 5 ಗಂಟೆಗೆ ನಗರದ ಎ. ಡಿ. ಎ. ರಂಗಮಂದಿರದಲ್ಲಿ ವಿಧ್ಯುಕ್ತವಾಗಿ ರಂಗಪ್ರವೇಶ ಮಾಡುತ್ತಿದ್ದಾಳೆ. ಈ ಪ್ರತಿಭಾವಂತ ನೃತ್ಯಕಲಾವಿದೆಯ ಸುಮನೋಹರ ನೃತ್ಯದ ಸೊಬಗನ್ನು ಕಣ್ತುಂಬಿಕೊಳ್ಳಲು ಸರ್ವರಿಗೂ ಸುಸ್ವಾಗತ.



ಬೆಂಗಳೂರಿನಲ್ಲಿ ವಾಸವಾಗಿರುವ ಸುಬ್ರಮಣ್ಯಂ ಮತ್ತು ಕೃಷ್ಣವೇಣಿ ಅವರ ಪುತ್ರಿ ಕು. ಜಾನಕಿ ಚಿಕ್ಕಂದಿನಿಂದ ಪ್ರತಿಭಾವಂತೆ.'ಬೆಳೆಯುವ ಪೈರು ಮೊಳಕೆಯಲ್ಲೇ' ಎನ್ನುವಂತೆ, ಜಾನಕೀ ಪುಟ್ಟಮಗುವಾಗಿದ್ದಾಗಲೇ ಹೆಜ್ಜೆ- ಗೆಜ್ಜೆಗಳ ತನ್ನ ನೃತ್ಯಾಸಕ್ತಿ ಯನ್ನು ವ್ಯಕ್ತಪಡಿಸಿದಂಥ ಬಾಲ ಪ್ರತಿಭೆ. ನೃತ್ಯ ಅವಳ ಬಾಲ್ಯದ ಒಲವು. ಕಥಕ್ ನೃತ್ಯಗುರು ಮಧು ಸೇನ್ ಇವಳ ಪ್ರಥಮ ನೃತ್ಯಗುರು. ಅನಂತರ ಅಂದಿನ ಖ್ಯಾತ ಚಿತ್ರನಟಿ ಪದ್ಮಿನಿ ರಾಮಚಂದ್ರನ್ ನೃತ್ಯಶೋಭೆಗೆ ಮನಸೋತು ಜಾನಕಿ. ಭರತನಾಟ್ಯ ಕಲಿಯಲು ಹೆಸರಿಗೆ ಅನ್ವರ್ಥಕರಾಗಿದ್ದ 'ಅಭಿನಯ ಚತುರೆ' ಗುರು ಅಭಿನಯರ ಬಳಿ ಬಂದಾಗ ಅವಳಿಗೆ ಹತ್ತುವರ್ಷ. ಅಲ್ಲಿಂದ ಇಲ್ಲಿಯವರೆಗೆ ಸತತ 9 ವರ್ಷಗಳ ಕಾಲ ಜಾನಕೀ ಏಕಾಗ್ರತೆಯಿಂದ ಪರಿಶ್ರಮಿಸಿ ನೃತ್ಯಾಭ್ಯಾಸ ಮಾಡಿದ್ದಾಳೆ. ಅವಳ ಆಸಕ್ತಿಗೆ ನೀರೆರೆದು, ಪ್ರೋತ್ಸಾಹ ನೀಡಿದ ತನ್ನ ಹೆತ್ತವರ ಬಗ್ಗೆ ಜಾನಕಿಗೆ ಅನನ್ಯ ಕೃತಜ್ಞತೆ. ಅಭಿನಯ ಅವರ ಸಮರ್ಥ ಮಾರ್ಗದರ್ಶನದಲ್ಲಿ ಉತ್ತಮ ತರಬೇತಿಯನ್ನು ಪಡೆಯುತ್ತಿರುವ ಜಾನಕೀ, ಭರವಸೆಯ ನೃತ್ಯಗಾರ್ತಿಯಾಗಿ ರೂಪುಗೊಳ್ಳುತ್ತಿದ್ದಾಳೆ.

ಓದಿನಲ್ಲೂ ಚುರುಕಾಗಿರುವ ಜಾನಕೀ ಶಾಲಾ- ಕಾಲೇಜಿನ ದಿನಗಳಿಂದಲೂ ಎಲ್ಲ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಮುಂದು ಮತ್ತು ಅನೇಕ ಬಹುಮಾನಗಳನ್ನು ಗಳಿಸಿದ್ದಾಳೆ. ಕರ್ನಾಟಕ ಶಾಸ್ತ್ರೀಯ ಸಂಗೀತವನ್ನು ಗುರು ಲಕ್ಷ್ಮೀ ಲಾವಣ್ಯರಲ್ಲಿ ಕಲಿತಿದ್ದು ಕರ್ನಾಟಕ ಮತ್ತು ತಮಿಳು ನಾಡಿನ ಅನೇಕ ದೇವಾಲಯಗಳಲ್ಲಿ ನೃತ್ಯಪ್ರದರ್ಶನ ನೀಡಿದ್ದಾಳೆ. ಓದಿನ ಜೊತೆ ನೃತ್ಯವನ್ನೂ ಮುಂದುವರೆಸಿಕೊಂಡು ಭವಿಷ್ಯದಲ್ಲಿ ಉತ್ತಮ ನರ್ತಕಿಯಾಗಿ ಸಾಧನೆ ಮಾಡುವ ಕನಸು ಇವಳದು.

–ವೈ.ಕೆ.ಸಂಧ್ಯಾಶರ್ಮ



ಮುಖ್ಯಮಂತ್ರಿ ಆದ ನಂತರ ಇದೇ ಮೊದಲ ಬಾರಿಗೆ ಮೈಸೂರಿಗೆ ಶನಿವಾರ ಭೇಟಿ ನೀಡಿದ ಡಿ ಕೆ ಶಿವಕುಮಾರ್ ಅವರನ್ನು ಸಚಿವ ಯತೀಂದ್ರ ಸಿದ್ದರಾಮಯ್ಯ ಅವರು ಬೃಹತ್ ಸೇಬಿನಹಾರ ಹಾಕಿ ತೆರೆದ ವಾಹನದಲ್ಲಿ ಮೆರವಣಿಗೆಯಲ್ಲಿ ಕರೆದೊಯ್ದರು. ಸಂಸದ ಅನಿಲ್ ಚಿಕ್ಕಮಾದು, ಶಾಸಕರಾದ ತನ್ವಿರ್ ಸೇಠ್, ಹರೀಶ್‌ಗೌಡ, ರವಿಶಂಕರ್ ಮತ್ತಿತರರು ಇದ್ದರು.

# ಜಿಲ್ಲೆಯಿಂದ ಯಾರೂ ವಲಸೆ ಹೋಗದಂತೆ ಖಾತ್ರಿ ಉದ್ಯೋಗ ಒದಗಿಸಿ: ಖಂಡ್ರೆ

**ಬೀದರ, ಆ. 1:** ಜಿಲ್ಲೆಯಲ್ಲಿ ಯಾವೊಬ್ಬ ವ್ಯಕ್ತಿಯೂ ಉದ್ಯೋಗ ಅರಸಿಕೊಂಡು ವಲಸೆ (ಗುಳೆ) ಹೋಗದಂತೆ ಸ್ಥಳೀಯವಾಗಿ ಅವರಿಗೆ ಉದ್ಯೋಗ ಖಾತ್ರಿ ಕೆಲಸ ನೀಡಲು ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ವಹಿಸಬೇಕು. ವಲಸೆ ಹೋಗುವುದು ಕಂಡುಬಂದಲ್ಲಿ ಸಂಬಂಧಿಸಿದ ಅಧಿಕಾರಿಗಳ ಮೇಲೆ ಕ್ರಮ ಜರುಗಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಜಿಲ್ಲಾ ಉಸ್ತುವರಿ ಸಚಿವ ಈಶ್ವರ ಖಂಡ್ರೆ ಅವರು ಅಧಿಕಾರಿಗಳಿಗೆ ಸೂಚಿಸಿದರು.

ವಿಬಿಜಿ ರಾಮ್‌ಜಿ ಯೋಜನೆಯಡಿಯಲ್ಲಿ ವೈಯಕ್ತಿಕ ಹಾಗೂ ಗುಂಪುಗಳಾಗಿ ಮಾನವ ದಿನಗಳನ್ನು ಸೃಷ್ಟಿಸಲು ಸಾಕಷ್ಟು ಅವಕಾಶಗಳಿದ್ದು, ಇದರಿಂದ ವಲಸೆ ಹೋಗುವುದನ್ನು ತಡೆಗಟ್ಟಬಹುದಾಗಿದೆ. ಯೋಜನೆಯಡಿ ಕೆಲಸ ಬಯಸಿ ಬಂದವರಿಗೆ ತಕ್ಷಣ ಉದ್ಯೋಗ ನೀಡಿ ಜಾಬ್ ಕಾರ್ಡ್ ನೀಡಲು ಕ್ರಮ ವಹಿಸಬೇಕು ಎಂದು ಹೇಳಿದರು.




ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಗ್ರಂಥಾಲಯಗಳಿದ್ದು, ಓದಲು ಬರುವವರಿಗೆ ಅಗತ್ಯಕ್ಕೆ ಅನುಗುಣವಾಗಿ ಪುಸ್ತಕಗಳು ದೊರೆಯುವಂತಾಗಬೇಕು. ಅದರೊಂದಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ 644 ಗ್ರಾಮಗಳನ್ನು 'ಹರ್ ಘರ್ ಜಲ್' ಗ್ರಾಮಗಳೆಂದು ಘೋಷಿಸಲಾಗಿದೆ. ಆದರೆ ಇದು ಘೋಷಣೆಗೆ ಮಾತ್ರ ಸೀಮಿತವಾಗದೆ, ಪ್ರತಿಯೊಂದು ಮನೆಗೂ ನಿರಂತರವಾಗಿ ಕುಡಿಯುವ ನೀರು ತಲುಪುತ್ತಿರುವುದನ್ನು ಜಿಲ್ಲೆಯ ಎಲ್ಲಾ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು (ಇಒ) ಹಾಗೂ ತಹಶೀಲ್ದಾರರು ಜಂಟಿಯಾಗಿ ಪರಿಶೀಲಿಸಬೇಕು. ಪ್ರತಿಯೊಂದು ಘೋಷಿತ ಗ್ರಾಮಕ್ಕೆ ಭೇಟಿ ನೀಡಿ, ಮನೆ ಮನೆಗೂ ನೀರು ತಲುಪುತ್ತಿದೆಯೇ ಎಂಬುದನ್ನು ಖಾತರಿಪಡಿಸಿಕೊಂಡು, ಸಮಸ್ಯೆಗಳಿದ್ದಲ್ಲಿ 15 ದಿನಗಳೊಳಗೆ ಅವುಗಳನ್ನು ಪರಿಹರಿಸಬೇಕು ಎಂದು ಅಧಿಕಾರಿಗಳಿಗೆ ಗಡುವು ನೀಡಿದರು.

ಡಿ.ಎ.ಪಿ ಹಾಗೂ ರಸಗೊಬ್ಬರದ ಅಭಾವ ಹಲವೆಡೆ ಕಂಡುಬಂದಿದ್ದು, ರೈತರಿಗೆ ಯಾವುದೇ ರೀತಿಯ ಗೊಬ್ಬರದ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು. ರೈತರು ಬೆಳೆ ವಿಮೆ ಮಾಡಿಸಲು ಬಂದಾಗ ಅವರನ್ನು ಮರಳಿ ಕಳುಹಿಸದೇ ಬೆಳೆ ವಿಮೆ ನೋಂದಾಯಿಸಿಕೊಳ್ಳಲು ಅವಕಾಶ ನೀಡಬೇಕು. ಈ ಕುರಿತು ಲೀಡ್ ಬ್ಯಾಂಕ್ ಅಧಿಕಾರಿಗಳೊಂದಿಗೆ ಸಮನ್ವಯ ಸಭೆ ನಡೆಸಿ ರೈತರಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.

ಜಿಲ್ಲೆಯಲ್ಲಿರುವ 'ಗ್ರಾಮ ಒನ್' ಕೇಂದ್ರಗಳಲ್ಲಿ ಸಾರ್ವಜನಿಕರು ವಿವಿಧ ಯೋಜನೆಗಳಡಿ ಅರ್ಜಿ ಸಲ್ಲಿಸಲು ಬಂದಾಗ ನಿಗದಿತ ಶುಲ್ಕಕ್ಕಿಂತ ಹೆಚ್ಚಿನ ಹಣ ಪಡೆಯಲಾಗುತ್ತಿದೆ ಎಂಬ ದೂರುಗಳು ಬಂದಿವೆ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ಅಂತಹ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸಿ, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಂಡು ವರದಿ ನೀಡುವಂತೆ ನಿರ್ದೇಶನ ನೀಡಿದರು.

# ಬಳ್ಳಾರಿಯಲ್ಲಿ ಇಂದು ಅದ್ದೂರಿ ಜೆಎಸ್‌ಡಬ್ಲ್ಯೂ ಸ್ಟೀಲ್ ಸಿಟಿ ರನ್‌ಗೆ ಕ್ಷಣಗಣನೆ: ನೋಂದಣಿ ಪ್ರಕ್ರಿಯೆಗೆ ವಿದ್ಯುಕ್ತ ಚಾಲನೆ

**ಬಳ್ಳಾರಿ ಆ 01.** ಪ್ರತಿ ವರ್ಷದಂತೆ ಬಳ್ಳಾರಿ ನಗರದಲ್ಲಿ ಆಗಸ್ಟ್ 2ರಂದು ನಡೆಯುವ ಪ್ರತಿಷ್ಠಿತ ಮ್ಯಾರಥಾನ್‌ಗೆ ಸಿದ್ಧತೆಗಳು ಭರದಿಂದ ಸಾಗುತ್ತಿವೆ. ಈ ವರ್ಷದ ಕಾರ್ಯಕ್ರಮವನ್ನು 'ಜೆಎಸ್‌ಡಬ್ಲ್ಯೂ ಸ್ಟೀಲ್ ಸಿಟಿ ರನ್–2026' ಹೆಸರಿನಲ್ಲಿ ಅತ್ಯಂತ ಉತ್ಸಾಹದಿಂದ ಆಯೋಜಿಸಲಾಗುತ್ತಿದೆ. ಜೆಎಸ್‌ಡಬ್ಲ್ಯೂ ಸಂಸ್ಥೆಯ ಸಹಯೋಗದೊಂದಿಗೆ 'ಬಳ್ಳಾರಿ ಸೈಕ್ಲಿಸ್ಟ್ಸ್ ಅಂಡ್ ರನ್ನರ್ಸ್ ಅಸೋಸಿಯೇಷನ್' ಜಂಟಿಯಾಗಿ ಈ ಮ್ಯಾರಥಾನ್ ಆಯೋಜಿಸುತ್ತಿವೆ. ಇದಕ್ಕೆ ಸಂಬಂಧಿಸಿದ ನೋಂದಣಿ ಪ್ರಕ್ರಿಯೆಗೆ ಆಗಸ್ಟ್ 1ನೇ ತಾರೀಖು, ಶನಿವಾರದಂದು ನಗರದ ಖಾಸಗಿ ಹೋಟೆಲ್‌ನಲ್ಲಿ ಸಂಘಟಕರು ಅಧಿಕೃತವಾಗಿ ಚಾಲನೆ ನೀಡಿದರು.

ಈ ನೋಂದಣಿ ಪ್ರಕ್ರಿಯೆಯನ್ನು ಜನರಿಗೆ ಇನ್ನಷ್ಟು ಹತ್ತಿರವಾಗಿಸುವ ನಿಟ್ಟಿನಲ್ಲಿ ಬಳ್ಳಾರಿಯ ರಾಕ್ ಗಾರ್ಡನ್‌ನಲ್ಲಿ ವಿಶೇಷ ಮೇಳವೊಂದನ್ನು ಆಯೋಜಿಸಿ ಸಂಭ್ರಮಿಸಲಾಯಿತು. ಈ ಮೇಳದ ಆವರಣದಲ್ಲಿ ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ ವಿಶೇಷ ಪ್ರಚಾರ ಮಳಿಗೆಯನ್ನು ಸ್ಥಾಪಿಸಿ, HP FuturX ಪ್ರೀಮಿಯಂ ಶ್ರೇಣಿಯ ಲೂಬ್ರಿಕೆಂಟ್‌ಗಳು ಮತ್ತು Power 95 ಪೆಟ್ರೋಲ್ ಉತ್ಪನ್ನಗಳನ್ನು ಸಂದರ್ಶಕರಿಗೆ ಪರಿಚಯಿಸಿತು. ಓಟದಲ್ಲಿ ಪಾಲ್ಗೊಳ್ಳುವ ರನ್ನರ್‌ಗಳು, ವಾಹನ ಸವಾರರು ಹಾಗೂ ಇತರ ಸಂದರ್ಶಕರು ಹೆಚ್ಚಿನ ಸಂಖ್ಯೆಯಲ್ಲಿ ಈ ಮಳಿಗೆಗೆ ಆಗಮಿಸಿ ಉತ್ಪನ್ನಗಳ ವೈಶಿಷ್ಟ್ಯಗಳು, ಕಾರ್ಯಕ್ಷಮತೆ ಮತ್ತು ಪ್ರಯೋಜನಗಳ ಬಗ್ಗೆ ಆಸಕ್ತಿಯಿಂದ ತಿಳಿದುಕೊಂಡರು. ಗ್ರಾಹಕರೊಂದಿಗೆ ನಡೆಸಿದ ನೇರ ಅರಿವು ಕಾರ್ಯಕ್ರಮಗಳು, ಉತ್ಪನ್ನಗಳ ಪ್ರಾತ್ಯಕ್ಷಿಕೆಗಳು ಮತ್ತು ಸಂವಾದಗಳಿಗೆ ಉತ್ತಮ ಸ್ಪಂದನೆ ವ್ಯಕ್ತವಾಯಿತು. ಈ ಕಾರ್ಯಕ್ರಮದ ಮೂಲಕ HPCL ತನ್ನ ಪ್ರೀಮಿಯಂ ಇಂಧನಗಳು ಮತ್ತು ಲೂಬ್ರಿಕೆಂಟ್‌ಗಳ ಬಗ್ಗೆ ಅರಿವು ಮೂಡಿಸುವುದರ ಜೊತೆಗೆ, ಗ್ರಾಹಕರೊಂದಿಗೆ ಬಲವಾದ ಬಾಂಧವ್ಯವನ್ನು ಬೆಳೆಸಿಕೊಂಡಿತು.




ಕ್ರೀಡೆಯ ಜೊತೆಗೆ ಪರಿಸರ ಸಂರಕ್ಷಣೆ ಮತ್ತು ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸಲು 'ಸ್ವಚ್ಛ ಭಾರತ' ಕುರಿತು ಜನರಲ್ಲಿ ಅರಿವು ಮೂಡಿಸುವ ವಿಶೇಷ ಕೇಂದ್ರವನ್ನೂ ಇಲ್ಲಿ ಸ್ಥಾಪಿಸಲಾಗಿತ್ತು. ಇದಲ್ಲದೆ, ಸಾಮಾಜಿಕ ಜವಾಬ್ದಾರಿಯ ಭಾಗವಾಗಿ ಏಡ್ಸ್ ರೋಗದ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ರಕ್ತದಾನ ಶಿಬಿರದಂತಹ ಸೇವಾ ಕಾರ್ಯಕ್ರಮಗಳನ್ನು ಕೂಡ ಸಂಘಟಕರು ಇಲ್ಲಿ ಯಶಸ್ವಿಯಾಗಿ ನಡೆಸಿದರು. ಇದರ ಜೊತೆಗೆ ಮ್ಯಾರಥಾನ್‌ನಲ್ಲಿ ಪಾಲ್ಗೊಳ್ಳುವ ಆಸಕ್ತರು ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ ವಿವಿಧ ಅಂಗಡಿಗಳು ಮತ್ತು ಆಹಾರದ ಮಳಿಗೆಗಳನ್ನು ಇಲ್ಲಿ ತೆರೆಯಲಾಗಿತ್ತು.

ಕ್ರೀಡಾ ಮನೋಭಾವ, ಆರೋಗ್ಯದ ಅರಿವು ಮತ್ತು ಸಾಮಾಜಿಕ ಸೇವಾ ಮನೋಭಾವವನ್ನು ಸಮ್ಮಿಳಿತಗೊಳಿಸಿ ಆಗಸ್ಟ್ 2ರಂದು ನಡೆಯಲಿರುವ ಈ 'ಸ್ಟೀಲ್ ಸಿಟಿ ರನ್'ನಲ್ಲಿ ನಗರದ ಜನತೆ, ಯುವಕರು ಮತ್ತು ಕ್ರೀಡಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಸಂಘಟಕರು ವಿನಂತಿಸಿದ್ದಾರೆ.

# ಸಮಾನತೆ, ಕಾಯಕ ನಿಷ್ಠೆಗೆ ಶರಣರ ತತ್ವ ಒತ್ತು: ಶಾಸಕ ಅಲ್ಲಮಪ್ರಭು



**ಕಲಬುರಗಿ, ಆ. 1:** ಹಡಪದ ಸಮಾಜ ಅನಾದಿ ಕಾಲದಿಂದಲೂ ಕಾಯಕ ನಿಷ್ಠೆಗೆ ಹೆಸರುವಾಸಿ. 12ನೇ ಶತಮಾನದ ಕ್ರಾಂತಿಯಲ್ಲಿ ಹಡಪದ ಅಪ್ಪಣ್ಣನವರು ಸಮಾನತೆ, ಕಾಯಕ ನಿಷ್ಠೆಗೆ ಒತ್ತು ನೀಡುವಂಥ ಅಮೂಲ್ಯ ಕೊಡುಗೆಯನ್ನು ತಮ್ಮ ವಚನಗಳ ಮೂಲಕ ನೀಡಿದ್ದಾರೆ ಎಂದು ಶಾಸಕ ಅಲ್ಲಮಪ್ರಭು ಪಾಟೀಲ್ ಹೇಳಿದರು.

ನಗರದ ಡಾ.ಎಸ್.ಎಂ.ಪಂಡಿತ ಜಿಲ್ಲಾ ರಂಗಮಂದಿರದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯಿತಿ ಸಹಯೋಗದಡಿ ಆಯೋಜಿಸಿದ್ದ ಶಿವಶರಣ ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದ ಅವರು, ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರಚಿಸಿದ ಸಂವಿಧಾನದ ಮೂಲ ತತ್ವಗಳಿಗೂ ಶರಣರ ವಚನಗಳೇ ಪ್ರಮುಖ ಆಧಾರ ಮತ್ತು ಪ್ರೇರಣೆ ಎಂದರು.

ಚಿತ್ತಾಪುರ ಕಂಬಳೇಶ್ವರ ಸಂಸ್ಥಾನ ಮಠದ ಶ್ರೀ ಸೋಮಶೇಖರ ಶಿವಾಚಾರ್ಯ ಮಾತಾನಾಡಿ, ಬಸವಣ್ಣನವರು ಹಡಪದ ಅಪ್ಪಣ್ಣ ನವರನ್ನು ಆಪ್ತ ಕಾರ್ಯದರ್ಶಿಯಾಗಿ ಮಾಡಿಕೊಳ್ಳುವ ಮೂಲಕ ದೂರದೃಷ್ಟಿ ಮೆರೆದಿದ್ದರು. ಯಾರೇ ಬಸವಣ್ಣನವರ ಭೇಟಿಗೆ ಬಂದರೂ ಮೊದಲು ಹಡಪದ ಅಪ್ಪಣ್ಣನವರ ದರ್ಶನ ಪಡೆದು ಅವರ ಅನುಮತಿ ಕೇಳಿಯೇ ಬರಬೇಕಾಗಿತ್ತು. ರೈತಸಮಾಜ ಹೊಟ್ಟೆಗೆ ಅನ್ನ ನೀಡಿದರೆ, ಹಡಪದ ಸಮಾಜ ಮನುಷ್ಯನನ್ನು ಸುಂದರವಾಗಿ ಕಾಣುವಂತೆ ಮಾಡುತ್ತದೆ. ಯುವಕರು ಕಾಯಕ ನಂಬಿದವನೇ ನಿಜವಾದ ನಾಯಕನಾಗಲು ಸಾಧ್ಯ ಎಂಬುದನ್ನು ಅರಿತುಕೊಳ್ಳಬೇಕು ಎಂದು ಹಿತೋಪದೇಶ ನೀಡಿದರು.

> **ಮಾನವ ಕುಲ ಒಂದೇ ಎಂಬ ಉದಾತ್ತ ಭಾವನೆಯನ್ನು ಶರಣರು ಜಗತ್ತಿಗೆ ಸಾರಿದ್ದಾರೆ. ಇಂಥ ಮಹನೀಯರ ತತ್ವಾದರ್ಶಗಳನ್ನು ಅಳವಡಿಸಿಕೊಂಡು ಸಮಾಜದ ಸರ್ವಾಂಗೀಣ ಅಭಿವೃದ್ಧಿ, ಯುವ ಪೀಳಿಗೆಯ ಪ್ರಗತಿಗೆ ಒಟ್ಟಾಗಿ ಶ್ರಮಿಸುವ ಅಗತ್ಯವಿದೆ.**
> –ಅಲ್ಲಮಪ್ರಭು ಪಾಟೀಲ್,ಶಾಸಕರು.

ಶಹಾಬಾದ್‌ನ ಶರಣ ಹಡಪದ ಅಪ್ಪಣ್ಣ ದೇವಸ್ಥಾನದ ಬಾಲ ಬ್ರಹ್ಮಚಾರಿ ರಾಜ ಶಿವಯೋಗಿಗಳು, ಬಸವಣ್ಣನವರ ವಚನದಲ್ಲಿ ಹೇಳಿದಂತೆ ಸಕಲ ಜೀವಾತ್ಮರಲ್ಲೂ ದಯೆ ಇರಬೇಕು. ದಯೆಯೇ ಧರ್ಮದ ಮೂಲ. ಹಡಪದ ಅಪ್ಪಣ್ಣನವರು ಅಂತಹ ಮಹಾದಯೆ ಹೊಂದಿದ್ದರು. ಕಲ್ಯಾಣಕ್ಕೆ ಬಂದವರನ್ನು ಪ್ರೀತಿಯಿಂದ ಅಪ್ಪಿಕೊಳ್ಳುವ ಗುಣ ಅವರಲ್ಲಿತ್ತು. ಬಸವಣ್ಣನವರೇ ಸ್ವತಃ ಹಡಪದ ಅಪ್ಪಣ್ಣನವರನ್ನು ಭೇಟಿಯಾಗಲು ಒತ್ತು ನೀಡುತ್ತಿದ್ದರು ಎಂದರು.

# ಗೋ ಬ್ಯಾಕ್ ಮೋದಿ ಚಳವಳಿಗೆ ಮುಂದಾಗಿದ್ದವರನ್ನು ವಶಕ್ಕೆ ಪಡೆದ ಪೊಲೀಸರು

**ಮೈಸೂರು, ಆ.1:** ಪ್ರಧಾನಮಂತ್ರಿ ನರೇಂದ್ರ ಮೋದಿ ಮೈಸೂರಿಗೆ ಆಗಮಿಸುವುದನ್ನು ವಿರೋಧಿಸಿ ಗೋ ಬ್ಯಾಕ್ ಮೋದಿ ಚಳುವಳಿಗೆ ಮುಂದಾಗಿದ್ದ ದಲಿತ ಸಂಘರ್ಷ ಸಮಿತಿ ಮುಖಂಡರು ಮತ್ತು ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದರು.

ನಗರದ ನಾರಾಯಣ ಶಾಸ್ತ್ರಿ ರಸ್ತೆಯಲ್ಲಿ ನಿರ್ಮಾಣಗೊಂಡಿರುವ ವಿವೇಕ ಸ್ಮಾರಕ ಉದ್ಘಾಟನೆಗೆ ಆಗಮಿಸುತ್ತಿರುವ ನರೇಂದ್ರ ಮೋದಿ ಆಗಮನವನ್ನು ವಿರೋಧಿಸಿ ಮಾನಸ ಗಂಗೋತ್ರಿಯ ಕ್ಲಾಕ್ ಟವರ್ ಮುಂಭಾಗದಿಂದ ನಾರಾಯಣ ಶಾಸ್ತ್ರಿ ರಸ್ತೆಯ ವಿವೇಕ ಸ್ಮಾರಕದವರೆಗೆ ಜಾಥಾ ನಡೆಸಲು ಮುಂದಾಗಿದ್ದ ದಸಂಸ ಮುಖಂಡರನ್ನು ಪ್ರತಿಭಟನೆ ಮಾಡುವ ಮುನ್ನ ಕ್ಲಾಕ್ ಟವರ್ ಬಳಿ ಪೊಲೀಸರು ಬಂಧಿಸಿ ಕರೆದೊಯ್ದರು.



ದಸಂಸ ಜಿಲ್ಲಾ ಸಂಚಾಲಕ ಚೋರನಹಳ್ಳಿ ಶಿವಣ್ಣ ಅವರನ್ನು ಶುಕ್ರವಾರ ರಾತ್ರಿಯೇ ಆಲನಹಳ್ಳಿ ಪೊಲೀಸರು ಚೋರನಹಳ್ಳಿಯಲ್ಲಿ ವಶಕ್ಕೆ ಪಡೆದು ಕರೆದೊಯ್ದಿದ್ದರು. ಇದಕ್ಕೆ ಬಗ್ಗದ ಮುಖಂಡರು ದಸಂಸ ಸಂಚಾಲಕ ಎಡದೊರೆ ಮಹದೇವಯ್ಯ ಅವರ ನೇತೃತ್ವದಲ್ಲಿ ಗೋ ಬ್ಯಾಕ್ ಮೋದಿ ಚಳುವಳಿ ನಡೆಸಲು ಮಾನಸಗಂಗೋತ್ರಿಯ ಕ್ಲಾಕ್ ಟವರ್ ಬಳಿ ಜಮಾಯಿಸಿದರು.

ವಿಷಯ ತಿಳಿದು ಮೊದಲೇ ಎಚ್ಚೆತ್ತುಕೊಂಡಿದ್ದ ಪೊಲೀಸರು, ಪ್ರತಿಭಟನೆ ನಡೆಸದಂತೆ ಒಂದು ಗಂಟೆಗೂ ಹೆಚ್ಚು ಕಾಲ ದಸಂಸ ಮುಖಂಡರೊಂದಿಗೆ ಮಾತುಕತೆ ನಡೆಸಿದರು. ಪ್ರತಿಭಟನಾಕಾರರು, ನಾವು ಜಾಥಾ ಹೋಗುವುದಿಲ್ಲ ಹತ್ತು ನಿಮಿಷ ಪ್ರತಿಭಟನೆಗೆ ಕಾಲಾವಕಾಶ ನೀಡಿ ಎಂದು ಕೇಳಿಕೊಂಡರು

ಪೊಲೀಸರು ಅವಕಾಶ ಕೊಡಲಿಲ್ಲ. ಇದೇವೇಳೆ ಮಾತನಾಡಿದ ದಸಂಸ ಮುಖಂಡ ಎಡೆದೊರೆ ಮಹದೇವಯ್ಯ, ಹೋರಾಟ ನಮ್ಮ ಹಕ್ಕು ಅದಕ್ಕೆ ಅವಕಾಶ ಮಾಡಿಕೊಡಿ, ಹೋರಾಟವನ್ನು ಹತ್ತಿಕ್ಕಬೇಡಿ ಎಂದು ಹೇಳಿದರು.

ನೀಟ್ ಹಗರಣದಿಂದ 21 ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಅವರ ಕುಟುಂಬದವರಿಗೆ ಪರಿಹಾರ ನೀಡಿಲ್ಲ. ಆ ಕುಟುಂಬದ ಸದಸ್ಯರಿಗೆ ಸರ್ಕಾರಿ ಉದ್ಯೋಗ ಕೊಟ್ಟಿಲ್ಲ, ಜೊತೆಗೆ ರಾಮಕೃಷ್ಣ ಆಶ್ರಮದವರು ಎನ್‌ಟಿಎಂ ಹೆಣ್ಣು ಮಕ್ಕಳ ಶಾಲೆ ಇದ್ದ ಜಾಗದಲ್ಲಿ ಮಾತಿಗೆ ತಪ್ಪಿ ವಿವೇಕ ಸ್ಮಾರಕ ನಿರ್ಮಾಣ ಮಾಡಿದ್ದಾರೆಂದರು. ಇದನ್ನು ಯಾವ ನೈತಿಕತೆ ಇಟ್ಟುಕೊಂಡು ಮೋದಿ ಉದ್ಘಾಟನೆ ಮಾಡಲು ಬರುತ್ತಿದ್ದಾರೆ? ಹಾಗಾಗಿ ಗೋ ಬ್ಯಾಕ್ ಮೋದಿ ಚಳವಳಿ ಮಾಡುತ್ತೇವೆ ಎಂದರು. ಮುಖಂಡರನ್ನು ವಶಕ್ಕೆ ಪಡೆದು ಸಿಎಆರ್ ಮೈದಾನಕ್ಕೆ ಕರೆದೊಯ್ದರು.

# ಜಲಾನಯನ ಪ್ರದೇಶದಲ್ಲಿ ವ್ಯಾಪಕ ಮಳೆ: ಭರ್ತಿಯಾಗುವ ಹಂತದಲ್ಲಿ ಕಬಿನಿ ಜಲಾಶಯ



**ಮೈಸೂರು, ಆ.1:** ಕಬಿನಿ ಜಲಾನಯನ ಪ್ರದೇಶದಲ್ಲಿ ಭಾರೀ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಕಬಿನಿ ಜಲಾಶಯವು ಪ್ರಸ್ತುತ ಭರ್ತಿಯಾಗುವ ಹಂತದಲ್ಲಿದೆ. ಈ ಹಿನ್ನೆಲೆಯಲ್ಲಿ ಕಾವೇರಿ ನೀರಾವರಿ ನಿಗಮ ನಿಯಮಿತ, ಕಬಿನಿ ಜಲಾಶಯ ವಿಭಾಗವು ಪ್ರವಾಹ ಮುನ್ನೆಚ್ಚರಿಕೆ ಸೂಚನೆಯನ್ನು ಹೊರಡಿಸಿದೆ.ದಿನಾಂಕ 01–08–2026 ರಂದು ಪ್ರಸ್ತುತ ಕಬಿನಿ ಜಲಾಶಯಕ್ಕೆ 15,500 ಕ್ಯೂಸೆಕ್ ಒಳಹರಿವು ಬರುತ್ತಿದ್ದು, ಜಲಾಶಯದಿಂದ 8,000 ರಿಂದ 10,000 ಕ್ಯೂಸೆಕ್ ನೀರನ್ನು ಹೊರಬಿಡುವ ಸಂಭವವಿದೆ. ಈ ಪ್ರಮಾಣವು ಯಾವುದೇ ಕ್ಷಣದಲ್ಲಾದರೂ ಹೆಚ್ಚಾಗುವ ಸಾಧ್ಯತೆಯಿದೆ ಅಧಿಕಾರಿಗಳು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಕಾರ್ಯಪಾಲಕ ಅಭಿಯಂತರರು, ಕಬಿನಿ ನದಿಯ ಪಾತ್ರದಲ್ಲಿರುವ ಮತ್ತು ನದಿಯ ಎರಡೂ ದಂಡೆಯಲ್ಲಿ ವಾಸಿಸುತ್ತಿರುವ ಜನರು ತಮ್ಮ ಆಸ್ತಿ–ಪಾಸ್ತಿ ಹಾಗೂ ಜಾನುವಾರು ರಕ್ಷಣೆಯ ಬಗ್ಗೆ ಮುನ್ನೆಚ್ಚರಿಕೆ ವಹಿಸಿ, ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಕೋರಿದ್ದಾರೆ.

ಜಲಾಶಯದಿಂದ ನೀರು ಬಿಡುಗಡೆಯಾಗುವುದರಿಂದ ನದಿಯ ನೀರಿನ ಮಟ್ಟವು ಏರುವ ಸಾಧ್ಯತೆಯಿದ್ದು, ತಗ್ಗು ಪ್ರದೇಶಗಳಿಗೆ ನೀರು ನುಗ್ಗುವ ಅಪಾಯವಿದೆ. ಆದ್ದರಿಂದ ಸಾರ್ವಜನಿಕರು ಆತಂಕಕ್ಕೆ ಒಳಗಾಗದೆ ಎಚ್ಚರಿಕೆಯಿಂದ ಇರುವಂತೆ ಅಧಿಕಾರಿಗಳು ಸೂಚಿಸಿದ್ದಾರೆ.

ಮಳೆಯಿಂದಾಗಿ ಕಬಿನಿ ಜಲಾಶಯಕ್ಕೆ ಒಳಹರಿವು ಹೆಚ್ಚಾಗಿದ್ದು, ಜಲಾಶಯ ಭರ್ತಿಯಾಗುವ ಹಂತದಲ್ಲಿದೆ. ನೀರಿನ ಮಟ್ಟವನ್ನು ನಿಯಂತ್ರಿಸುವ ಸಲುವಾಗಿ ಹೊರಹರಿವನ್ನು ಹೆಚ್ಚಿಸುವ ಸಾಧ್ಯತೆಯಿದೆ.

### ಮತದಾರರ ನೋಂದಣಾಧಿಕಾರಿ ವಿನಯಕುಮಾರ್ ಪಾಟೀಲ ಹೇಳಿಕೆ

# ಸಿಂದಗಿ ಕ್ಷೇತ್ರದಲ್ಲಿ 11,743 ಮತದಾರರ ಗಣತಿ ನಮೂನೆ ಗಣಕೀಕರಣ ಬಾಕಿ

**ವಿಜಯಪುರ, ಆ.1,** ಸಿಂದಗಿ ವಿಧಾನದಭಾ ಕ್ಷೇತ್ರದ ಒಟ್ಟು 2,50,761 ಮತದಾರರಿದ್ದು, 2,13,788 ನಮೂನೆಗಳನ್ನು ಡಿಜಿಟಕರಣ ಮಾಡಲಾಗಿದೆ ಎಂದು ಮತದಾರರ ನೋಂದಣಾಧಿಕಾರಿ ಹಾಗೂ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ವಿನಯಕುಮಾರ ಪಾಟೀಲ ಅವರು ಹೇಳಿದರು.

ಸಿಂದಗಿ ಮತಕ್ಷೇತ್ರದಲ್ಲಿ ಇಲ್ಲಿಯವರೆಗೆ ಶೇ. 85.26 ರಷ್ಟು ನಮೂನೆಗಳು ಗಣಕೀರಣಗೊಂಡಿದ್ದು, ಇನ್ನೂ 11,743 ಮತದಾರರ ನಮೂನೆಗಳ ಗಣಕೀಕರಣ ನಡೆಯಬೇಕಿದೆ ಎಂದರು. 16237 ಮತದಾರರು ಸ್ಥಳಾಂತರಗೊಂಡಿದ್ದು ಪರಿಶೀಲನೆ ವೇಳೆ ಪತ್ತೆಯಾಗಿದೆ. ಪ್ರತಿದಿನವೂ ಸಂಬಂಧಪಟ್ಟ ಬೂತ್‌ಮಟ್ಟದ ಏಜೆಂಟರಿಗೆ ಮಾಹಿತಿ ನೀಡಲಾಗುತ್ತಿದೆ. 1,201ಮತದಾರರು ಗೈರು ಉಳಿದಿದ್ದು, 16,237 ಮತದಾರರು ಶಾಶ್ವತವಾಗಿ ಸ್ಥಳಾಂತರಗೊಂಡಿದ್ದಾರೆ. 5,685 ಮರಣ ಹೊಂದಿದ್ದಾರೆ. ಈಗಾಗಲೇ 2,037 ಮತದಾರರು ನೋಂದಾಯಿಸಿಕೊಂಡಿದ್ದಾರೆ.

ಯಾವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ವಂಚಿತರಾಗಬಾರದು. ಹೀಗಾಗಿ ಗಣಕೀಕರಣಕ್ಕೆ ಬಾಕಿ ಇರುವ ಮತದಾರರು ತಕ್ಷಣವೇ ನಮೂನೆಗಳನ್ನು ಭರ್ತಿಮಾಡಿ ಅಧಿಕಾರಿಗಳಿಗೆ ತಲುಪಿಸಬೇಕು. ಈ ಪ್ರಕ್ರಿಯೆಗೆ ಎಲ್ಲಾ ರಾಜಕೀಯ ಪಕ್ಷಗಳ ಮುಖಂಡರು ಹಾಗೂ ಕಾರ್ಯಕರ್ತರು ಸಂಪೂರ್ಣ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

# ಯುವಜನತೆ ವ್ಯಸನಮುಕ್ತರಾದಾಗ ಮಾತ್ರ ಮಹಾಂತ ಶ್ರೀಗಳ ಸಂಕಲ್ಪಕ್ಕೆ ಅರ್ಥ: ಗಾದೆಪ್ಪ

**ಬಳ್ಳಾರಿ,ಆ.01.**ಯುವಜನತೆ ವ್ಯಸನಗಳಿಂದ ದೂರವಿದ್ದಾಗ ಮಾತ್ರ ಮಹಾಂತ ಶಿವಯೋಗಿಗಳು ಹಾಕಿಕೊಟ್ಟ ದಾರಿಗೆ ಮತ್ತು ಅವರ ಸಂಕಲ್ಪಕ್ಕೆ ನಿಜವಾದ ಅರ್ಥ ಸಿಗುತ್ತದೆ ಎಂದು ಬಳ್ಳಾರಿ ಮಹಾನಗರ ಪಾಲಿಕೆಯ ಮಹಾಪೌರರಾದ ಪಿ. ಗಾದೆಪ್ಪ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ಮದ್ಯಪಾನ ಸಂಯಮ ಮಂಡಳಿ ಬೆಂಗಳೂರು ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರುಗಳ ಸಂಯುಕ್ತಾಶ್ರಯದಲ್ಲಿ ಡಾ. ಮಹಾಂತ ಶಿವಯೋಗಿಗಳ ಜನ್ಮದಿನಾಚರಣೆಯ ಅಂಗವಾಗಿ ನಗರದ ಡಾ. ರಾಜ್‌ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯ ಆವರಣದ ಹೊಂಗಿರಣ ಸಭಾಂಗಣದಲ್ಲಿ ಶನಿವಾರ ಆಯೋಜಿಸಿದ್ದ 'ವ್ಯಸನ ಮುಕ್ತ ದಿನಾಚರಣೆ;' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ವ್ಯವಸ್ಥೆಯಲ್ಲಿ ಯುವ ಪೀಳಿಗೆ ಹಾಗೂ ವಿದ್ಯಾರ್ಥಿಗಳು ದುಶ್ಚಟಗಳಿಗೆ ಬಲಿಯಾಗುತ್ತಿರುವ ಕುರಿತು ಕಳವಳ ವ್ಯಕ್ತಪಡಿಸಿದ ಅವರು, ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲಾ ಯುವಕ–ಯುವತಿಯರು ಮತ್ತು ವಿದ್ಯಾರ್ಥಿಗಳು ಇಂದು ಒಂದೊಳ್ಳೆಯ ಸಂಕಲ್ಪ ಮಾಡಬೇಕು. ತಮ್ಮ ಸಹಪಾಠಿಗಳಿಗೆ ಮತ್ತು ಗೆಳೆಯರಿಗೆ ವ್ಯಸನ ಮುಕ್ತ ಜೀವನದ ಮಹತ್ವವನ್ನು ತಿಳಿಸಿ, ದುಶ್ಚಟಗಳನ್ನು ಕೈಬಿಡುವಂತೆ ಪ್ರೇರೇಪಿಸಬೇಕು ಎಂದು ಕರೆ ನೀಡಿದರು.

ಅಂದಿನ ಕಾಲದಲ್ಲಿ ಮಹಾಂತ ಶಿವಯೋಗಿಗಳು ಜನರ ಬಳಿ ಹೋಗಿ, 'ನಿಮ್ಮ ದುಶ್ಚಟಗಳನ್ನು ಮತ್ತು ವ್ಯಸನಗಳನ್ನು ನನ್ನ ಜೋಳಿಗೆಗೆ ಹಾಕಿ, ನೀವು ಮುಕ್ತರಾಗಿ ಹಾಗೂ ನಿಮ್ಮ ಆರೋಗ್ಯ, ಭವಿಷ್ಯ ಉಜ್ವಲವಾಗಲಿ' ಎಂದು ಸಂಕಲ್ಪ ಮಾಡಿ ಜನರನ್ನು ದುಶ್ಚಟಗಳಿಂದ ಮುಕ್ತಗೊಳಿಸಿದ್ದರು. ಅವರ ಈ ಮಹಾನ್ ತತ್ತವವನ್ನು ಮುನ್ನಡೆಸಲು ರಾಜ್ಯ ಸರ್ಕಾರವು ಅವರ ಹೆಸರಿನಲ್ಲೇ ಈ ಆಚರಣೆಯನ್ನು ಜಾರಿಗೆ ತಂದಿದೆ ಎಂದು ತಿಳಿಸಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ. ಚಿದಾನಂದಪ್ಪ ಅವರು ಮಾತನಾಡಿ, ಮಹಾಂತ ಶಿವಯೋಗಿಗಳು ತಮ್ಮ 10ನೇ ವಯಸ್ಸಿನಲ್ಲೇ ಸವದಿ ಮಠದ ಕಿರಿಯ ಗುರುಗಳಾಗಿ ನೇಮಕಗೊಂಡು ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದರು ಎಂದು ತಿಳಿಸಿದರು. ಇತಿಹಾಸ ಮತ್ತು ಪುರಾಣಗಳ ಕಾಲದಿಂದಲೂ ವ್ಯಸನಗಳು ಮನುಷ್ಯನ ವಿನಾಶಕ್ಕೆ ಕಾರಣವಾಗಿವೆ ಎಂಬುದನ್ನು ಧರ್ಮರಾಯನ ಉದಾಹರಣೆಯೊಂದಿಗೆ ವಿವರಿಸಿದ ಅವರು, ಪಗಡೆ ಆಟದ ದುರಭ್ಯಾಸದಿಂದಾಗಿ ಧರ್ಮರಾಯ ತನ್ನ ಆಸ್ತಿ, ಅಂತಸ್ತು ಹಾಗೂ ಸಕಲವನ್ನೂ ಕಳೆದುಕೊಂಡು ಕೌರವರ ಅಡಿಯಾಳಾಗಬೇಕಾಯಿತು. ವ್ಯಸನಗಳು ಮನುಷ್ಯನನ್ನು ಭಿಕ್ಷುಕನನ್ನಾಗಿ ಮಾಡುತ್ತದೆ ಎಂಬುದಕ್ಕೆ ಇದೊಂದು ದೊಡ್ಡ ನಿದರ್ಶನವಾಗಿದೆ. ಮದ್ಯಪಾನ, ಜೂಜು, ಡ್ರಗ್ಸ್‌ನಂತಹ ಸಾಂಪ್ರದಾಯಿಕ ವ್ಯಸನಗಳ ಜೊತೆಗೆ, ಇಂದಿನ ಜಗತ್ತಿನಲ್ಲಿ ?ಮೊಬೈಲ್ ಚಟ? ಅತಿ ದೊಡ್ಡ ಮಾರಕ ವ್ಯಸನವಾಗಿ ಪರಿಣಮಿಸಿದೆ ಎಂದು ಆತಂಕ ವ್ಯಕ್ತಪಡಿಸಿದರು.



ಬಳ್ಳಾರಿಯ ಶ್ರೀ ಸತ್ಯಂ ಶಿಕ್ಷಣ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಅಲಂಭಾಷ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಕೇವಲ ಪುಸ್ತಕಗಳನ್ನು ಓದುವುದು ಅಥವಾ ಪೂಜೆ–ಪುನಸ್ಕಾರಗಳನ್ನು ಮಾಡುವುದಷ್ಟೇ ಮುಖ್ಯವಲ್ಲ. ಓದಿದ ನಂತರ ಮತ್ತು ಪೂಜೆ ಮಾಡಿದ ನಂತರ ನಮ್ಮ ನಡವಳಿಕೆ ಹಾಗೂ ಜೀವನದಲ್ಲಿ ಸಕಾರಾತ್ಮಕ ಬದಲಾವಣೆಯಾಗಬೇಕು. ಆಗ ಮಾತ್ರ ನಾವು ಮಾಡುವ ಪ್ರತಿಯೊಂದು ಕಾರ್ಯಕ್ಕೂ ಅರ್ಥ ಸಿಗುತ್ತದೆ ಎಂದು ಹೇಳಿದರು.

ಶಿವಶಾಂತ ಶಿವಯೋಗಿಗಳು ಇಡೀ ಸಮಾಜವನ್ನು ದುಶ್ಚಟಗಳಿಂದ ಮುಕ್ತಗೊಳಿಸಲು ತಮ್ಮ ಜೋಳಿಗೆಯನ್ನು ಹಿಡಿದು ಬೀದಿ ಬೀದಿ ಅಲೆದರು. ಜನರ ಕೈಲಿದ್ದ ಮಾದಕ ವಸ್ತುಗಳನ್ನು ಜೋಳಿಗೆಗೆ ಹಾಕಿಸಿಕೊಂಡು, ಅವರಿಂದ ಪ್ರಮಾಣ ಮಾಡಿಸಿ ಸಮಾಜವನ್ನು ತಿದ್ದಿದ ಮಹಾನ್ ಶಕ್ತಿ ಅವರದ್ದು, ಎಂದು ಅವರ ಕಾರ್ಯವನ್ನು ಕೊಂಡಾಡಿದರು.

13 ರಿಂದ 18 ವರ್ಷದ ವಯಸ್ಸು ಅತ್ಯಂತ ಸೂಕ್ಷ್ಮ ಹಾಗೂ ಅಪಾಯಕಾರಿ ಕಾಲಘಟ್ಟ. ಈ ವಯಸ್ಸಿನಲ್ಲಿ ಪ್ರತಿಯೊಂದು ಆಕರ್ಷಣೆಯೂ ಇಷ್ಟವಾಗುತ್ತದೆ. ಆದರೆ, ಈ ಹಂತದಲ್ಲಿ ಎಚ್ಚರ ತಪ್ಪಿದರೆ ಜೀವನದ ದಾರಿ ತಪ್ಪುತ್ತದೆ. ಇಂದಿನ ಯುವಜನತೆ ಸೋಶಿಯಲ್ ಮೀಡಿಯಾ ದುಶ್ಚಟಗಳಿಗೆ ದಾಸರಾಗುತ್ತಿದ್ದಾರೆ. ನಮ್ಮ 'ಫೇಸ್' (ಮುಖ) ಬರೀ ಸೋಶಿಯಲ್ ಮೀಡಿಯಾದಲ್ಲಿ ನೋಡಿಕೊಳ್ಳುವುದಕ್ಕಿಂತ, ಬುಕ್' (ಪುಸ್ತಕ) ನಲ್ಲಿ ಬರುವಂತೆ ಸಾಧನೆ ಮಾಡಬೇಕು ಎಂದು ಯುವಕ–ಯುವತಿಯರಿಗೆ ಕಿವಿಮಾತು ಹೇಳಿದರು.

ಬಳ್ಳಾರಿಯ ಕುಮಾರಿ ತಸ್ಮಿಯ ಅನ್ನಪೂರ್ಣ ಮತ್ತು ತಂಡ ವಚನ ಗಾಯನ ಕಾರ್ಯಕ್ರಮ ನೆರವೇರಿಸಿಕೊಟ್ಟರು. ಸಂವಿಧಾನ ಪ್ರಸ್ತಾವನೆ ಬೋಧಿಸಲಾಯಿತು.

### ಸಮಾಜದ ಅಂಕು–ಡೊಂಕುಗಳನ್ನು ತಿದ್ದುವ ಶಕ್ತಿ ಪತ್ರಿಕೆಗೆ ಇದ್ದೆ

# ಸಾಮಾಜಿಕ ಬದಲಾವಣೆಗೆ ಪತ್ರಿಕೆಗಳ ಪಾತ್ರ ಮಹತ್ವದ್ದು ಬಳ್ಳಾರಿ ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಜುಬೇರ

**ಬಳ್ಳಾರಿ, ಆ.01;** ವಿದ್ಯಾರ್ಥಿ ಬದುಕಿನ ಯಶಸ್ಸಿಗೆ ಪತ್ರಿಕೆಗಳು ಪೂರಕವಾಗುತ್ತವೆ ಎಂದು ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಜುಬೇರ ತಿಳಿಸಿದರು.

ಪತ್ರಿಕೆಯನ್ನು ವಿನ್ಯಾಸಗೊಳಿಸಿ ಮುದ್ರಿಸಿ ಓದುಗರ ಕೈಗಿಡುವ ಹಿಂದೆ ನೂರಾರು ಕೈಗಳ ಶ್ರಮವಿರುತ್ತದೆ. ಒಂದು ಕಾಫಿಗೂ ಕಡಿಮೆ ಖರ್ಚಿನಲ್ಲಿ ಇಂದು ನಾವು ದಿನಪತ್ರಿಕೆಗಳನ್ನು ಓದುತ್ತಿದ್ದೇವೆ. ಪತ್ರಿಕಾ ಮಾಧ್ಯಮ ಬಹಳಷ್ಟು ದೊಡ್ಡದಾಗಿ ಬೆಳೆದಿದ್ದು, ಸಾಮಾಜಿಕ ಬದಲಾವಣೆಯಲ್ಲಿ ಮಹತ್ವದ ಪಾತ್ರ ಹೊಂದಿದೆ ಎಂದು ತಿಳಿಸಿದರು.

ಪತ್ರಕರ್ತರಿಗೆ ತಾಳ್ಮೆ ಮತ್ತು ವ್ಯವಧಾನ ಬಹಳ ಮುಖ್ಯವಾಗುತ್ತದೆ. ಪ್ರತಿಯೊಂದು ವಿಚಾರವನ್ನು ಸಮಾಜ ಮುಖಿಯಾಗಿ ಚಿಂತಿಸಿ ಅದರ ಬದಲಾವಣೆಗೆ ಪತ್ರಕರ್ತ ಪ್ರಯತ್ನಿಸಬೇಕು. ಕೇವಲ ವರದಿಯಿಂದಷ್ಟೆ ಬದಲಾವಣೆಯ ಸಾಧ್ಯವಿಲ್ಲ. ಪತ್ರಿಕೆಗಳು ಬಡವರ ಶೋಷಿತ ವರ್ಗದ ಪರವಾದ ಧ್ವನಿಯಾಗಬೇಕು ಎಂದು ಎಡಿಸಿ ಮೊಹಮ್ಮದ್ ಜುಬೇರ ತಿಳಿಸಿದರು.

ಬಳ್ಳಾರಿ ಮಹಾನಗರ ಪಾಲಿಕೆಯ ಮೇಯರ್ ಪಿ.ಗಾದೆಪ್ಪ ಮಾತನಾಡಿ, ವಿದ್ಯಾರ್ಥಿಗಳು ಪ್ರತಿನಿತ್ಯ ಪತ್ರಿಕೆಗಳನ್ನು ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು. ನಮ್ಮ ಸುತ್ತಮುತ್ತಲಿನ ಸಮಾಜದಲ್ಲಿ ನಡೆಯುವ ಆಗುಹೋಗುಗಳ ಬಗ್ಗೆ ಹೆಚ್ಚಿನ ಜ್ಞಾನ ಅಗತ್ಯ. ಇದಕ್ಕಾಗಿ ಪ್ರತಿಯೊಬ್ಬರು ಪತ್ರಿಕೆಗಳನ್ನು ಅವಲೋಕನ ಮಾಡಬೇಕು. ಇದರಿಂದ ಸಾಮಾನ್ಯ ಜ್ಞಾನ ಹೆಚ್ಚುವುದಲ್ಲದೆ ವಿದ್ಯಾಭ್ಯಾಸಕ್ಕೆ ಹೆಚ್ಚಿನ ಅನುಕೂಲವಾಗುವುದು. ಪತ್ರಕರ್ತ ವೃತ್ತಿ ಅತ್ಯಂತ ಗೌರವಯುತ. ಸಮಾಜದ ಅಂಕು ಡೊಂಕುಗಳನ್ನು ತಿದ್ದುವ ಶಕ್ತಿ ಪತ್ರಿಕೆಗಳಿಗಿದೆ ಎಂದು ಗಾದೆಪ್ಪ ತಿಳಿಸಿದರು.



ಮಾಜಿ ಮೇಯರ್ ಹಾಲಿ ಪಾಲಿಕೆಯ ಸದಸ್ಯರಾದ ಎಂ. ರಾಜೇಶ್ವರಿ ಸುಬ್ಬರಾಯುಡು ರವರು ಮಾತನಾಡಿ ಸಮಾಜದ ಓರೆಕೋರೆಗಳನ್ನು ತಿದ್ದುವ ನಿಟ್ಟಿನಲ್ಲಿ ಪತ್ರಿಕೋದ್ಯಮ ಮಹತ್ವದ ಪಾತ್ರವನ್ನು ವಹಿಸುತ್ತದೆ ಎಂದು ತಿಳಿಸಿದರಲ್ಲದೇ, ಆರೋಗ್ಯವಂತ ಸಮಾಜ ನಿರ್ಮಾಣ ಮಾಡುವತ್ತ ಪತ್ರಕರ್ತರು ಗಮನಹರಿಸಬೇಕು. ಅಲ್ಲದೆ, ಪ್ರಾಮಾಣಿಕವಾದ ಕರ್ತವ್ಯ ಕೂಡ ಮುಖ್ಯವಾಗುತ್ತದೆ. ಸಾಮಾಜಿಕ ಜ್ವಲಂತ ಸಮಸ್ಯೆಗಳನ್ನು ಹೊರ 'ತರುವಂತಹ ಕೆಲಸವನ್ನು ಪತ್ರಕರ್ತರು ಮಾಡಬೇಕಿದೆ. ಸಾಮಾನ್ಯ ಜ್ಞಾನ ಹೊಂದಿಲ್ಲದಿದ್ದರೆ ವೃತ್ತಿ ನಿಭಾಯಿಸುವುದು ಕಷ್ಟವಾಗುತ್ತದೆ. ಉತ್ತಮ ಚಿಂತನೆ, ಆಲೋಚನೆಗಳೊಂದಿಗೆ ಸೇವಾ ಮನೋಭಾವನೆಯಿಂದ ಕಾರ್ಯನಿರ್ವಹಿಸುವ ವ್ಯಕ್ತಿಗಳು ವಿರಳವಾಗುತ್ತಿದ್ದಾರೆ ಎಂದರು.

ಸಮಾಜದ ಅಂಕುಡೊಂಕು ತಿದ್ದುವ ಮಾಧ್ಯಮಗಳಿಗೆ ಹೆಚ್ಚಿನ ಸ್ವಾತಂತ್ರ್ಯ ದೊರಕಬೇಕು ಎಂಬುದು ನಿಜವಾದರೂ ಈ ಸ್ವಾತಂತ್ರ್ಯದ ವ್ಯಾಪ್ತಿಯನ್ನು ಮೀರಬಾರದು. ಪತ್ರಕರ್ತರು ರಚನಾತ್ಮಕ ಕಾರ್ಯಗಳನ್ನು ಕೈಗೊಳ್ಳಬೇಕು ಎಂದರು.

# ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ನೋಡಿಕೊಳ್ಳಿ: ಡಿಸಿ ಇಕ್ರಮ್ ಶರೀಫ್

**ಕಲಬುರಗಿ, ಆ. 1:** ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಶೈಕ್ಷಣಿಕ ಪ್ರಗತಿ, ಮೂಲಸೌಕರ್ಯ ಸುಧಾರಣೆ, ವಸತಿ ಯೋಜನೆಗಳು ಹಾಗೂ ವಿವಿಧ ಕಲ್ಯಾಣ ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನಕ್ಕೆ ತರುವ ಮೂಲಕ ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಇಕ್ರಂ ಶರೀಫ ಸೂಚಿಸಿದರು.

ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ನೋಡಿಕೊಳ್ಳಿ. ಸಭೆಯಲ್ಲಿ ಕೇವಲ ಭೌತಿಕ ಅಂಕಿ-ಅಂಶಗಳ ವರದಿ ನೀಡುವುದಕ್ಕೆ ಸೀಮಿತವಾಗದೆ, ಬಜೆಟ್ ಅನುದಾನದ ಸಮರ್ಪಕ ಬಳಕೆ ಹಾಗೂ ಶಿಕ್ಷಣದ ಗುಣಮಟ್ಟದಲ್ಲಿ ಬದಲಾವಣೆ ತರಲು 15 ಪ್ರಮುಖ ಅಂಶಗಳ ಆಧಾರದ ಮೇಲೆ ವಿಸ್ತೃತವಾಗಿ ಚರ್ಚಿಸಿ, ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿದರು.

ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳು ಎದುರಿಸುತ್ತಿರುವ ಸವಾಲುಗಳನ್ನು ನೇರವಾಗಿ ಪರಿಶೀಲಿಸಿ ಪರಿಹಾರ ಕಂಡುಕೊಳ್ಳಿ, ಉರ್ದು ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ಎದುರಿಸುವ ಕಲಿಕಾ ಹಿನ್ನಡೆ ಹಾಗೂ 'ಡ್ರಾಪ್‌ಔಟ್' ತಡೆಯಲು ಆರಂಭದಿಂದಲೇ ಕನ್ನಡ ಮತ್ತು ಇಂಗ್ಲಿಷ್ ಭಾಷೆಗಳನ್ನು ಪರಿಣಾಮಕಾರಿಯಾಗಿ ಕಲಿಸ ಬೇಕು, ಇದಕ್ಕಾಗಿ ಅಜೀಮ್ ಪ್ರೇಮ್‌ಜಿ ಫೌಂಡೇಶನ್ ಸಹಯೋಗದೊಂದಿಗೆ ಗಣಿತ, ವಿಜ್ಞಾನ ಹಾಗೂ ಭಾಷಾ ಶಿಕ್ಷಕರನ್ನು ಒದಗಿಸಲು ಕ್ರಮ ವಹಿಸಲಾಗುತ್ತಿದೆ. ಅಲ್ಲದೆ, 200ಕ್ಕೂ ಹೆಚ್ಚು ವಿದ್ಯಾರ್ಥಿಗಳಿರುವ ಮದರಸಗಳನ್ನು ಗುರುತಿಸಿ ಮೂಲಸೌಕರ್ಯಗಳ ಪಡೆಯಲು ಪ್ರಸ್ತಾವನೆ ಸಲ್ಲಿಸಲು ಅಧಿಕಾರಿಗಳಿಗೆ ಹೇಳಿದರು.

ಮೌಲಾನಾ ಆಜಾದ್, ಮೊರಾರ್ಜಿ ದೇಸಾಯಿ ಹಾಗೂ ಉರ್ದು ಶಾಲೆಗಳ ಫಲಿತಾಂಶ, ಶಿಕ್ಷಕರ ಅಭಾವ ಹಾಗೂ ಅಗತ್ಯಗಳ ಕುರಿತು ಪಿಪಿಟಿ ವರದಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಜೊತೆಗೆ, ಪೋಷಕರಿಗೆ



ನಿರ್ದಿಷ್ಟ ಸ್ಥಳದಲ್ಲೇ ಪುಸ್ತಕ-ಬ್ಯಾಗ್ ಕೊಳ್ಳುವಂತೆ ಒತ್ತಾಯಿಸುವ ಖಾಸಗಿ ಶಾಲೆಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಲಾಗಿದೆ.

ನಗರದಲ್ಲಿ ಮಂಜೂರಾಗಿರುವ ಬಾಲಕಿಯರ ನೂತನ ಸರ್ಕಾರಿ ಪದವಿಪೂರ್ವ ಕಾಲೇಜಿನ ಸ್ವಂತ ಕಟ್ಟಡ ನಿರ್ಮಾಣಕ್ಕೆ ವಕ್ಫ್ ಮಂಡಳಿ ಅಥವಾ ಲಭ್ಯವಿರುವ ಸರ್ಕಾರಿ ಭೂಮಿಯನ್ನು ತಕ್ಷಣ ಗುರುತಿಸಿ ವರದಿ ನೀಡುವಂತೆ ಜಿಲ್ಲಾ ವಕ್ಫ ಅಧಿಕಾರಿಗಳಿಗೆ ಸೂಚನೆ ನೀಡಿದರು. 0ಅಂಗನವಾಡಿ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳ ವ್ಯವಸ್ಥೆ ಸುಧಾರಿಸಲು ಕ್ರಮ ಕೈಗೊಳ್ಳಲು ಹಾಗೂ ಅಂಗನವಾಡಿ ಕೇಂದ್ರಗಳು ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 4 ಗಂಟೆಯ ವರೆಗೆ ಕಾರ್ಯನಿರ್ವಹಿಸುವಂತೆ ಅಂಗನವಾಡಿ ಕಾರ್ಯಕರ್ತರಿಗೆ ತಿಳಿಸಲು ಅಗತ್ಯ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು

ಶಾಲಾ ಹೆಣ್ಣುಮಕ್ಕಳಿಗೆ ಶೌಚಾಲಯ ಮತ್ತು ಕಾಂಪೌಂಡ್ ನಿರ್ಮಿಸಲು ಕೆಕೆಆರ್‌ಡಿಬಿ ಅನುದಾನ ಬಳಸಿಕೊಳ್ಳಲು ಸೂಚಿಸಲಾಗಿದ್ದು, ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಪತ್ತೆಹಚ್ಚಲು ಮೌಲಾನಾ ಆಜಾದ್ ಶಿಕ್ಷಕರು ಭಾನುವಾರ ಸೇರಿದಂತೆ ಮನೆಮನೆಗೆ ತೆರಳಿ ಸಮೀಕ್ಷೆ ನಡೆಸಲುವಂತೆ ಸೂಚಿಸಿದರು.

ಪ್ರತಿಯೊಬ್ಬ ಅರ್ಹ ವಿದ್ಯಾರ್ಥಿಗೂ ಪ್ರೀ-ಮೆಟ್ರಿಕ್ ಹಾಗೂ ಪೋಸ್ಟ್-ಮೆಟ್ರಿಕ್ ವಿದ್ಯಾರ್ಥಿವೇತನ ಸಮಯಕ್ಕೆ ಸರಿಯಾಗಿ ತಲುಪಿಸುವಂತೆ ಸೂಚಿಸಲಾಯಿತು. ಪಿ.ಎಂ. ಎ.ವಾಯ್ -ಗ್ರಾಮೀಣ ಯೋಜನೆಯಡಿ ಜಿಲ್ಲೆಗೆ ನಿಗದಿಯಾದ 72,000 ಮನೆಗಳಲ್ಲಿ ಈಗಾಗಲೇ 37,362 ಮನೆಗಳು ಮಂಜೂರಾಗಿದ್ದು, ಅದರಲ್ಲಿ 7,ಸಾವಿರ ಫಲಾನುಭವಿಗಳನ್ನು ಆಯ್ಕೆ ಆಗಿದ್ದು ಕಡಿಮೆನೆ, ಸರ್ಕಾರದ ಯೋಜನೆಗಳು ಪ್ರಚಾರ ವಾಹನಗಳು, 'ಜಿಂಗಲ್ಸ್' ಮತ್ತು ಮಾಧ್ಯಮ ಪ್ರಕಟಣೆಗಳ ಮೂಲಕ ತಳಮಟ್ಟದ ಸಾರ್ವಜನಿಕರಿಗೆ ತಲುಪಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಿನ ಸೂಚನೆ ನೀಡಿದರು. ಜಿಲ್ಲಾಮಟ್ಟದ ನಾಮ ನಿರ್ದೇಶಕ ಸದಸ್ಯರುಗಳು ತಮ್ಮ ತಮ್ಮ ಸಲಹೆ ಸೂಚನೆಗಳು ನೀಡಿದರು.

'ಡೇ-ನಲ್ಮ್' ಯೋಜನೆಯಡಿ ಬೀದಿಬದಿ ವ್ಯಾಪಾರಿಗಳಿಗೆ ಬ್ಯಾಂಕ್ ಮುಖಾಂತರ ಸಾಲಸೌಲಭ್ಯ ಒದಗಿಸಲು ಒದಗಿಸಿ, ಕ್ರಿಶ್ಚಿಯನ್, ಜೈನ್, ಸಿಖ್ ಹಾಗೂ ಮುಸ್ಲಿಂ ಸಮುದಾಯದ ಪ್ರಾರ್ಥನಾ ಮಂದಿರಗಳು, ಚರ್ಚ್ ನವೀಕರಣ ಮತ್ತು ಸಮುದಾಯ ಭವನಗಳ ಬಾಕಿ ಪ್ರಸ್ತಾವನೆಗಳನ್ನು ಶೀಘ್ರ ಸಲ್ಲಿಸಲು ತಿಳಿಸಲಾಗಿದೆ.

# ಪ್ರಾದೇಶಿಕ ಅಸ್ಮಿತೆ ಕಲಾಕೃತಿಗಳ ಜೀವಾಳವಾಗಲಿ: ಚಂದ್ರಹಾಸ ಜಾಲಿಹಾಳ



**ಕಲಬುರಗಿ, ಆ. 1:** ಒಂದು ಪ್ರದೇಶದ ಜನಜೀವನದ ಭಾಷೆ, ಸಂಪ್ರದಾಯ, ಜನಪದ, ಉಡುಪು, ವಿಚಾರ, ಅನುಭವ ಮತ್ತು ಭೌಗೋಳಿಕ ಗುಣಲಕ್ಷಣಗಳನ್ನು ಆಳವಾಗಿ ಅಳವಡಿಸಿಕೊಂಡಂಥ ಕಲಾಕೃತಿಯಲ್ಲಿ ಪ್ರಾದೇಶಿಕ ಅಸ್ಮಿತೆ ಗುರುತಿಸಬಹುದು ಎಂದು ಹಿರಿಯ ಚಿತ್ರಕಲಾವಿದ ಚಂದ್ರಹಾಸ ಜಾಲಿಹಾಳ ಹೇಳಿದರು.

ದಿ ಆರ್ಟ್ ಇಂಟ್ರಿಗ್ರೇಶನ್ ಚಿತ್ರಕಲಾ ಮಹಾವಿದ್ಯಾಲಯದ ಅಂಕುರ ಕಲಾ ಗ್ಯಾಲರಿಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಡಿ ಆಯೋಜಿಸಿದ್ದ ಕವಿತಾ ಎಸ್.ಕಟ್ಟೆ ಅವರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ ಉದ್ಘಾಟಿಸಿದ ಅವರು, ಕವಿತಾ ಕಲಾಕೃತಿಗಳಲ್ಲಿ ಅವರು ಬೆಳೆದ ಗ್ರಾಮೀಣ ಪ್ರದೇಶದ ಕೌದಿ, ಬೀಸುವ ಕಲ್ಲು, ತೊಟ್ಟಿಲು, ಅಡಕಲು ಗಡಿಗೆಗಳು ಹೀಗೆ ಹಲವಾರು ಜನಪದ ದೃಶ್ಯ, ಸಂದರ್ಭ ಮತ್ತು ಆಚರಣೆಗಳೆಲ್ಲ ಸ್ಮತಿಪಟಲದಲ್ಲಿ ಅಚ್ಚೊತ್ತಿ ಹರಳುಗೊಂಡ ಅನುಭವಗಳ ಅಭಿವ್ಯಕ್ತಿ ತೀವ್ರತೆಯಿಂದ ಚಿತ್ರಗಳಾಗಿ ಮೂಡಿಬಂದಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ದಿ ಆರ್ಟ್ ಇಂಟಿಗ್ರೇಶನ್ ಸಂಸ್ಥೆ ನಿರ್ದೇಶಕಿ ನೀಲಮ್ಮ ಬೆಳಮಗಿ, ಚಿತ್ರಕಲಾವಿದ ಬಸವರಾಜ ಕಮಾಜಿ ಮಾತನಾಡಿದರು.

**ಆಧುನಿಕತೆ ಭರಾಟೆಯಲ್ಲಿ ಜನಪದ ವಸ್ತು&ವಿಷಯಗಳನ್ನು ಒಳಗೊಂಡ ಕವಿತಾ ಅವರ ಕಲಾಕೃತಿಗಳು ಮನಸ್ಸಿಗೆ ನೆಮ್ಮದಿ ನೀಡಿ ಬಾಲ್ಯದ ನೆನಪುಗಳನ್ನು ಮರುಕಳಿಸುವಂತೆ ಮಾಡಿವೆ. ಚಿತ್ರಕಲೆಯಲ್ಲಿ ಸ್ಥಳಿಯ ವಸ್ತು, ವಿಷಯಗಳಿಗೆ ಆದ್ಯತೆ ನೀಡಬೇಕು.**

**– ನೀಲಮ್ಮ ಬೆಳಮಗಿ, ನಿರ್ದೇಶಕಿ, ದಿ ಆರ್ಟ್ ಇಂಟಿಗ್ರೇಶನ್ ಸಂಸ್ಥೆ.**

# ಶಿಷ್ಯರ ಬದುಕು ಸುಂದರಗೊಳಿಸುವವ ಗುರು: ಯೋಗೇಂದ್ರ ಯದಲಾಪುರೆ

**ಬೀದರ್, ಆ. 1:** ಅಜ್ಞಾನ ಹಾಗೂ ಅಂಧಕಾರ ಹೊಗಲಾಡಿಸಿ ಶಿಷ್ಯರ ಬದುಕು ಸುಂದರಗೊಳಿಸುವವನೇ ನಿಜವಾದ ಗುರು ಎಂದು ಖ್ಯಾತ ಯೋಗ ಗುರು, ಪತಂಜಲಿ ಯೋಗ ಸಮಿತಿಯ ಜಿಲ್ಲಾಧ್ಯಕ್ಷ ಯೋಗೇಂದ್ರ ಯದಲಾಪುರೆ ಹೇಳಿದರು.

ದಲ್ಲಿ ಜೀವನ ಸಾರ್ಥಕ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಯೋಗ ಗುರುಗಳನ್ನು ಸನ್ಮಾನಿಸಲಾಯಿತು. ಯೋಗ ಸಾಧಕರಾದ ವಿಶ್ವನಾಥ ಮಠಪತಿ, ನಾಗರಾಜ ಸ್ವಾಮಿ ಕಮಠಾಣ, ವೀರಶೆಟ್ಟಿ ಭಾಲ್ಕೆ, ಮಲ್ಲಿಕಾರ್ಜುನ ನೆಲವಾಡೆ, ಕೃಷ್ಣಾರೆಡ್ಡಿ,



ಪತಂಜಲಿ ಯೋಗ ಸಮಿತಿಯ ಜಿಲ್ಲಾ ಘಟಕದ ವತಿಯಿಂದ ನಗರದ ಚಿಟ್ಟಾ ರಸ್ತೆಯಲ್ಲಿ ಇರುವ ದತ್ತಗಿರಿ ಮಹಾರಾಜ ಕಾಲೇಜಿನಲ್ಲಿ ಆಯೋಜಿಸಿದ್ದ ಗುರು ಪೂರ್ಣಿಮೆ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಗುರುವಿಲ್ಲದೆ ಜ್ಞಾನ, ಮೋಕ್ಷ ಸಾಧ್ಯವಿಲ್ಲ. ಆದರ್ಶ ಜೀವನ ರೂಪಿಸಿಕೊಳ್ಳಲು, ಮಹತ್ವದ್ದನ್ನು ಸಾಧಿಸಲು ಹಾಗೂ ದೇವರ ಸಾಮಿಪ್ಯಕ್ಕೆ ಗುರು ಬೇಕೇ ಬೇಕು. ಗುರು ಆಧ್ಯಾತ್ಮಕ್ಕಷ್ಟೇ ಸೀಮಿತವಾಗಿಲ್ಲ. ಶಿಕ್ಷಣ, ರಾಜಕೀಯ, ಸಾಮಾಜಿಕ ಕ್ಷೇತ್ರ ಸೇರಿದಂತೆ ಎಲ್ಲ ಕ್ಷೇತ್ರಕ್ಕೂ ಗುರುವಿನ ಅವಶ್ಯಕತೆ ಇದೆ. ಗುರು ಕೃಪೆಯಿಂದ ಏನನ್ನು ಬೇಕಾದರೂ ಸಾಧಿಸಬಹುದು ಎಂದು ಹೇಳಿದರು.

ಭಾರತೀಯ ಸಂಸ್ಕೃತಿಯಲ್ಲಿ ಗುರುವಿಗೆ ಶ್ರೇಷ್ಠ ಸ್ಥಾನ ಇದೆ. ಗುರುವನ್ನು ಬ್ರಹ್ಮ, ವಿಷ್ಣು, ಮಹೇಶ್ವರರಿಗೆ ಹೋಲಿಸಲಾಗಿದೆ ಎಂದು ತಿಳಿಸಿದರು.

ಹಿರಿಯ ಯೋಗ ಸಾಧಕ ಶಿವಮೂರ್ತಿ ಬಟನಾಪುರೆ ಮಾತನಾಡಿ, ಶಿಲ್ಪಿ ಕಲ್ಲನ್ನು ಶಿಲೆಯಾಗಿಸುವಂತೆ ಗುರು ಮನುಷ್ಯನನ್ನು ಮಹಾ ಮಾನವನನ್ನಾಗಿಸುತ್ತಾನೆ. ಗುರು ಸಕಲರ ಕಲ್ಯಾಣವನ್ನೇ ಬಯಸುತ್ತಾನೆ ಎಂದು ಹೇಳಿದರು.

ಡಯಟ್ ಉಪನ್ಯಾಸಕ ಸಂತೋಷಕುಮಾರ ಪೂಜಾರಿ ಮಾತನಾಡಿ, ಗುರುಪೂಜೆಯಿಂದ ಸಕಲ ಕಾರ್ಯಗಳು ಸರಳಗೊಳ್ಳುತ್ತವೆ. ಸಮಸ್ಯೆಗಳು ಪರಿಹಾರಗೊಳ್ಳುತ್ತವೆ. ಹೀಗಾಗಿ ಗುರುವಿನ ಮಾರ್ಗದರ್ಶನ

ಸಂಜು ಸಾಹುಕಾರ್, ರಾಘವೇಂದ್ರ ಕುಲಕರ್ಣಿ, ಡಾ. ವೈಜನಾಥ ಬಿರಾದಾರ, ಭಗವಂತ ಎಂಪಳ್ಳಿ, ಶಿವಾನಂದ ಡೊಣ್ಣೆ, ಕಾಶಿನಾಥ ಸಜ್ಜನಶೆಟ್ಟಿ, ರವೀಂದ್ರ ಗಚ್ಚಿನಮನಿ, ಗುರಪ್ಪ ಗಿರಿಮಲ್, ಬಸವರಾಜ ಕೆರಳೆ, ಅನಿಲಕುಮಾರ ಏಕಂಬೆ, ಬಕ್ಕಪ್ಪ ಪೋತರೆಡ್ಡಿ, ಮಹಾನಂದ ಬರಿದಾಬಾದೆ, ನಾಗಮಣಿ ಅಶೋಕ ಗೋರ್ಟೆ, ನಂದಾ ಬಿರಾದಾರ, ರಾಖಿ ಚೌಧರಿ, ನಾಗಮ್ಮ ಗಿರಮಲ್, ಭದ್ರಮ್ಮ ರಾಜಕುಮಾರ, ಅನಿತಾ ಮಡಿವಾಳ, ಜಗದೇವಿ ಅಷ್ಟೂರೆ, ಲಲಿತಾ ಹಾಲಹಳ್ಳಿ, ಮಲ್ಲಿಕಾರ್ಜುನ ಪೋತರೆಡ್ಡಿ, ಸಂಗೀತಾ ಗಾನಪ್ಪನೋರ, ಸಿಂಚನಾ ಬಿದ್ರಿ, ರಮೇಶ್ ಬಿರಾದಾರ ಕೌಠಾ, ಜಗದೇವಿ ಸ್ವಾಮಿ, ಶಕುಂತಲಾ, ಕಮಳಾಬಾಯಿ, ಗೀತಾ ಪಟ್ನೆ, ಸವಿತಾ, ಚಿತ್ರಮ್ಮ, ಪ್ರಣವಿ, ಸುಕನ್ಯಾ, ಮೀರಾ ಏಕಂಬೆ ಮತ್ತಿತರರು ಇದ್ದರು.

ಆರಂಭದಲ್ಲಿ ಸಾಂಸ್ಕೃತಿಕ ನಾಯಕ ಬಸವಣ್ಣ ಹಾಗೂ ಪತಂಜಲಿ ಪ್ರಮುಖರಾದ ಅಂತರರರಾಷ್ಟ್ರೀಯ ಯೋಗ ಗುರು ಬಾಬಾ ರಾಮದೇವ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು.

ಚಂದ್ರಕಾಂತ ಪಟ್ನೆ ವಚನ ಪ್ರಾರ್ಥನೆ ನಡೆಸಿಕೊಟ್ಟರು. ನವೀನ್ ಘುಳೆ ಸ್ವಾಗತಿಸಿದರು. ಯೋಗ ಸಾಧಕ ಹುಲೆಪ್ಪ ಬರಿದಾಬಾದೆ ನಿರೂಪಿಸಿದರು. ಯೋಗ ಶಿಕ್ಷಕಿ ಲಲಿತಾ ಎನ್. ಗಾದಗೆ ವಂದಿಸಿದರು. ಯೋಗ ಸಾಧಕರು, ಯೋಗಾಸಕ್ತರು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು.

# ಸಂಗೀತ ಪರಂಪರೆಯ ಸಂರಕ್ಷಣೆಗೆ ನೈಜ ಸಂಗೀತ ಅಗತ್ಯ: ಬಸವರಾಜ ದೊರೆ

**ರಾಯಚೂರು, ಆ.1:** ಶಾಸ್ತ್ರೀಯ ಸಂಗೀತ, ಭಾವಗೀತೆ, ಭಕ್ತಿಗೀತೆ, ದಾಸವಾಣಿ, ವಚನಗೀತೆ ಹಾಗೂ ತತ್ವಪದಗಳಂತಹ ಭಾರತೀಯ ಸಂಗೀತ ಪರಂಪರೆಗಳು ನೈಜ ಸಂಗೀತದ ಮೂಲಕವೇ ಜೀವಂತವಾಗಿ ಉಳಿ ಯಲು ಸಾಧ್ಯವಗಿದೆ ಎಂದು ಮಂದಾರ ಪತ್ತಿನ ಸೌಹಾರ್ದ ಸಂಘದ ಅಧ್ಯಕ್ಷ ಬಸವರಾಜ ದೊರೆ ಅಭಿಪ್ರಾಯ ಪಟ್ಟರು.



ನಗರದ ದೇವರು ಕಾಲೊನಿಯ ವೆಂಕಟೇಶ್ವರ ದೇವಸ್ಥಾನದಲ್ಲಿ ರಾಗರಂಜನಿ ಕಲಾ ಬಳಗದ ವತಿಯಿಂದ 'ಆಷಾಢ ಕಲಾ ಉತ್ಸವ' ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿದ ಅವರು, ಇಂತಹ ಕಾರ್ಯಕ್ರಮಗಳನ್ನು ರಾಜ್ಯದ ಪ್ರತಿ ಜಿಲ್ಲೆ, ತಾಲ್ಲೂಕು ಹಾಗೂ ಗ್ರಾಮ ಮಟ್ಟದಲ್ಲಿ ಆಯೋಜಿಸಿ ಸಂಗೀತದ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಅಗತ್ಯವಿದೆ. ಮೊಬೈಲ್ ಯುಗದಲ್ಲಿ ಯುವಜನರಲ್ಲಿ ಸಂಗೀತದ ಆಸಕ್ತಿ ಕಡಿಮೆಯಾಗುತ್ತಿರುವುದು ವಿಷಾದನೀಯ. ಸಂಗೀತದಲ್ಲಿ ಆಸಕ್ತಿ ಹೊಂದಿರುವ ವಿದ್ಯಾರ್ಥಿಗಳಿಗೆ ಸೂಕ್ತ ವೇದಿಕೆ ಕಲ್ಪಿಸಿ, ಹೆಚ್ಚಿನ ತರಬೇತಿ ನೀಡುವ ಕಾರ್ಯವನ್ನು ಸಂಸ್ಥೆಗಳು ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.


ರಾಗರಂಜನಿ ಕಲಾ ಬಳಗದ ಅಧ್ಯಕ್ಷೆ ಮಹಾಲಕ್ಷ್ಮಿ ಅವರು ಹಲವು ವರ್ಷಗಳಿಂದ ರಾಯಚೂರು ಜಿಲ್ಲೆಯ ವಿವಿಧ ಕಾರ್ಯಕ್ರಮಗಳಲ್ಲಿ ಪ್ರಾರ್ಥನಾ ಗಾಯನದ ಮೂಲಕ ವಿಶಿಷ್ಟ ಗುರುತನ್ನು ಪಡೆದಿದ್ದು, ಜಿಲ್ಲೆಯ 'ಸಂಗೀತ ಸರಸ್ವತಿ ಎಸ್. ಜಾನಕಿ' ಎಂದೇ ಜನಪ್ರಿಯರಾಗಿದ್ದಾರೆ. ಜಿಲ್ಲೆಯ ಕಲಾವಿದರಿಗೆ ಸಾರ್ವಜನಿಕರು ಸದಾ ಬೆನ್ನೆಲುಬಾಗಿ ನಿಲ್ಲಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪವನ್ ದೇವರು ಮಾತನಾಡಿ, ನೈಜ ಸಂಗೀತವು ಯುವಪೀಳಿಗೆಗೆ ಪ್ರೇರಣೆಯಾಗಬೇಕಾಗಿದೆ. ಇದರಿಂದ ಯುವಕರು ಸಂಗೀತ ಕಲಿಯಲು, ಅಭ್ಯಾಸ ಮಾಡಲು ಹಾಗೂ ಉತ್ತಮ ಕಲಾವಿದರಾಗಿ ಬೆಳೆಯಲು ಅವಕಾಶ ದೊರೆಯುತ್ತದೆ ಎಂದು ಹೇಳಿದರು.

# ಮೊಟ್ಟೆ ಅನುದಾನ ಹೆಚ್ಚಳಕ್ಕೆ ಒತ್ತಾಯ

## ಅಂಗನವಾಡಿ ಕಾರ್ಯಕರ್ತೆಯರ ಮನವಿ

**ರಾಯಚೂರು, ಆ. 1:** ಅಂಗನವಾಡಿ ಕೇಂದ್ರಗಳಿಗೆ ಪೂರೈಕೆ ಮಾಡಲಾಗುವ ಮೊಟ್ಟೆಯ ದರವನ್ನು ಇಂದಿನ ಮಾರುಕಟ್ಟೆ ಬೆಲೆಗೆ ಅನುಗುಣವಾಗಿ ಹೆಚ್ಚಿಸುವುದರ ಜೊತೆಗೆ ಕಳೆದ ಐದು ತಿಂಗಳಿಂದ ಸ್ಥಗಿತಗೊಂಡಿರುವ ಹಾಲಿನ ಪೌಡರ್ ಪೂರೈಕೆಯನ್ನು ಕೂಡಲೇ ಪುನರಾರಂಭಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ (ಸಿಐಟಿಯು) ಜಿಲ್ಲಾ ಸಮಿತಿಯ ಪದಾಧಿಕಾರಿಗಳು ಜಿಲ್ಲಾಧಿಕಾರಿ ಪೂವಿತಾ ಅವರಿಗೆ ಮನವಿ ಸಲ್ಲಿಸಿದರು.



ಅಂಗನವಾಡಿ ಕೇಂದ್ರಗಳಲ್ಲಿ ಅಪೌಷ್ಠಿಕ ಮಕ್ಕಳು, ಗರ್ಭಿಣಿ ಮತ್ತು ಬಾಣಂತಿಯರಿಗೆ ಪೌಷ್ಟಿಕ ಆಹಾರ ಯೋಜನೆಯಡಿ ನೀಡಲಾಗುವ ಮೊಟ್ಟೆಗೆ ಇಲಾಖೆಯಿಂದ ಪ್ರಸ್ತುತ 6 ರೂ ಮಾತ್ರ ಅನುದಾನ ನೀಡಲಾಗುತ್ತಿದೆ. ಆದರೆ ಮಾರುಕಟ್ಟೆಯಲ್ಲಿ ಉತ್ತಮ ಗುಣಮಟ್ಟದ ಮೊಟ್ಟೆಯ ಬೆಲೆ 8 ರಿಂದ 9 ರಷ್ಟಿದ್ದು, ಉಳಿದ ಮೊತ್ತವನ್ನು ಅಂಗನವಾಡಿ ನೌಕರರು ತಮ್ಮ ಸ್ವಂತ ಹಣದಿಂದ ಭರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಅತ್ಯಲ್ಪ ಗೌರವಧನ ಪಡೆಯುವ ನಮ್ಮಿಂದ ಈ ಹಣ ಭರಿಸಲು ಸಾಧ್ಯವಿಲ್ಲ. ಆದ್ದರಿಂದ ಪ್ರಸ್ತುತ ಮಾರುಕಟ್ಟೆ ದರಕ್ಕೆ ಅನುಗುಣವಾಗಿ ಮೊಟ್ಟೆಯ ಅನುದಾನವನ್ನು 9ಕ್ಕೆ ಹೆಚ್ಚಿಸಬೇಕು. ಹೆಚ್ಚುವರಿ ಅನುದಾನ ಬಿಡುಗಡೆಯಾಗುವವರೆಗೆ ಈಗಿನ ಅನುದಾನದಲ್ಲಿ ದೊರೆಯುವಷ್ಟು ಮೊಟ್ಟೆಗಳನ್ನು ಖರೀದಿಸಲು ಅವಕಾಶ ನೀಡಬೇಕು ಎಂದು ಒತ್ತಾಯಿಸಿದರು.

ಕಳೆದ ಐದು ತಿಂಗಳಿಂದ ಜಿಲ್ಲೆಯ ಅಂಗನವಾಡಿ ಕೇಂದ್ರಗಳಿಗೆ ಹಾಲಿನ ಪೌಡರ್ ಸರಬರಾಜು ಆಗದಿರುವುದರಿಂದ ಮಕ್ಕಳಲ್ಲಿ ಅಪೌಷ್ಠಿಕತೆ ಹೆಚ್ಚುವ ಸಾಧ್ಯತೆ ಇದ್ದು, ಕೇಂದ್ರಗಳಿಗೆ ಮಕ್ಕಳ ಹಾಜರಾತಿಯೂ ಕುಸಿಯುತ್ತಿದೆ. ಹೀಗಾಗಿ ಹಾಲಿನ ಪೌಡರ್ ಪೂರೈಕೆಯನ್ನು ಕೂಡಲೇ ಆರಂಭಿಸಲು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

### ವ್ಯಸನಮುಕ್ತ ದಿನಾಚರಣೆಯಲ್ಲಿ ಡಾ. ಪೆರ್ಲ ಅಭಿಮತ

# ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಯುವಶಕ್ತಿ ಪಾತ್ರ ಮಹತ್ವ



**ಕಲಬುರಗಿ, ಆ.01–** : ವ್ಯಸನ ಮುಕ್ತ ಸಮಾಜ ನಿರ್ಮಾಣ ಮಾಡಲು ಯುವಶಕ್ತಿಯ ಪಾತ್ರ ಅತ್ಯಂತ ಮಹತ್ವವಾಗಿದ್ದು ಹಾಗೂ ಸದೃಢ ರಾಷ್ಟ್ರ ಕಟ್ಟಲು ನೆರವಾಗುತ್ತದೆ ಎಂದು ಆಕಾಶವಾಣಿಯ ನಿವೃತ್ತ ಕಾರ್ಯಕ್ರಮ ಮುಖ್ಯಸ್ಥರಾದ ಡಾ. ಸದಾನಂದ ಪೆರ್ಲ ಹೇಳಿದರು.

ನಗರದ ಆಳಂದ ರಸ್ತೆಯ ಶೆಟ್ಟಿ ಕಾಂಪ್ಲೆಕ್ಸ್ ಎದುರುಗಡೆಯಿರುವ 'ಶಾರದಾ ವಿವೇಕ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯ'ದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಶನಿವಾರ ಜರುಗಿದ 'ಡಾ.ಮಹಾಂತ ಶಿವಯೋಗಿಗಳವರ ಜನ್ಮದಿನಾಚರಣೆ-ವ್ಯಸನ ಮುಕ್ತ ದಿನಾಚರಣೆ'ಯಲ್ಲಿ,ಮಠಾಧೀಶರು ಕೇವಲ ಮಠ, ಪೂಜೆ, ಪುನಸ್ಕಾರಗಳಿಗೆ ಸೀಮಿತವಾಗದೆ ಸಾಮಾಜಿಕ ಸಮಸ್ಯೆಗಳಿಗೆ ಸ್ಪಂದಿಸಿ ಕ್ರಾಂತಿಕಾರಿ ಬದಲಾವಣೆ ತರಲು ಸಾಧ್ಯ ಎಂಬುದನ್ನು ತೋರಿಸಿಕೊಟ್ಟ ಪೂಜ್ಯ ಶ್ರೀ ಮಹಾಂತ ಶಿವಯೋಗಿಗಳ ಕಾರ್ಯ ಎಲ್ಲರಿಗೂ ಆದರ್ಶವಾಗಬೇಕಾಗಿದೆ ಎಂದರು.

'ಮಹಾಂತ ಜೋಳಿಗೆ'ಯ ಮೂಲಕ ಅವರು ಮಾಡಿದ ಕ್ರಾಂತಿಯ ಸಂದೇಶ ನಾಡಿನ ಹಳ್ಳಿ ಹಳ್ಳಿಗೂ ವ್ಯಾಪಿಸಿ ಪರಿವರ್ತನೆ ಸೃಷ್ಟಿಸಲು ಯುವಕರು ಮತ್ತು ವಿದ್ಯಾರ್ಥಿಗಳು ಅದಕ್ಕೆ ರಾಯಭಾರಿಗಳಾಗಬೇಕು. ದೇಶದಲ್ಲಿ 15 ರಿಂದ 29 ವಯೋಮಾನದ 37 ಕೋಟಿಗೂ ಅಧಿಕ ಯುವಕರನ್ನು ಹೊಂದಿದ್ದು ಭಾರತ ಸಮಗ್ರವಾಗಿ ಪ್ರಗತಿ ಹೊಂದಲು ದುಶ್ಚಟಗಳಿಂದ ಮುಕ್ತರಾದ ಯುವಕರ ಅಗತ್ಯವಿದೆ. ದೇಶದ ಯುವಕರು ಪ್ರಧಾನಿ ನರೇಂದ್ರ ಮೋದಿಯವರ ಘೋಷಣೆಯ "ಫಿಟ್ನೆಸ್ ಇಂಡಿಯಾ " ಅಳವಡಿಸಿಕೊಂಡಾಗ ಸ್ವಾಸ್ಥ್ಯ ಹಾಗೂ ಅಭಿವೃದ್ಧಿಪರ ರಾಷ್ಟ್ರ ಕಟ್ಟಲು ಸಾಧ್ಯ ಎಂದು ಡಾ.ಪೆರ್ಲ ಹೇಳಿದರು.

ಬಸವೇಶ್ವರ ಸಮಾಜ ಸೇವಾ ಬಳಗದ ಸೇವಾ ಅಧ್ಯಕ್ಷ ಹಾಗೂ ಉಪನ್ಯಾಸಕ ಎಚ್.ಬಿ. ಪಾಟೀಲ್ ಮಾತನಾಡಿ, ವ್ಯಸನ ಮುಕ್ತ ಸಮಾಜ ನಿರ್ಮಾಣ ಮಾಡಲು ಪ್ರಯತ್ನಿಸಿದ ಪೂಜ್ಯಶ್ರೀ ಮಹಾಂತ ಶಿವಯೋಗಿಗಳ ಕಾರ್ಯ ಜನಮನಕ್ಕೆ ತಲುಪಿಸಲು ಒಗ್ಗಟ್ಟಾಗಿ ದುಡಿಯೋಣ ಎಂದು ಹೇಳಿದರು.


ಶಾರದಾ ವಿವೇಕ ಕಲಾ ಮತ್ತು ವಾಣಿಜ್ಯ ಕಾಲೇಜಿನ ಪ್ರಾಂಶುಪಾಲ ಹಣಮಂತ ರಾವ್ ಗುಡ್ಡೇವಾಡ ಅಧ್ಯಕ್ಷತೆ ವಹಿಸಿದ್ದರು ಕಾರ್ಯಕ್ರಮದಲ್ಲಿ ಶಿವಯೋಗೆಪ್ಪಾ ಎಸ್. ಬಿರಾದಾರ, ಉಪನ್ಯಾಸಕರಾದ ಸತೀಶ್ ತುಮಕೂರು, ವನಜಾಕ್ಷಿ ಉಪಸ್ಥಿತರಿದ್ದರು. ವಿದ್ಯಾರ್ಥಿನಿ ಕವಿತಾ ಪ್ರಾರ್ಥನ ಗೀತೆ ಹಾಡಿದರು. ಉಪನ್ಯಾಸಕರಾದ ಮಹಾದೇವಪ್ಪ ಕುಂಬಾರ ನಿರೂಪಣೆ ಮಾಡಿದರು. ಉಪನ್ಯಾಸಕಿ ತ್ರಿವೇಣಿ ಕಲಶೆಟ್ಟಿ ವಂದಿಸಿದರು.

# ಅವಿರಾ ಉಡುಪು ವತಿಯಿಂದ ಬಳ್ಳಾರಿಯಲ್ಲಿ ವಿಶೇಷ ಸೀರೆ-ಬೆಳ್ಳಿ ಆಭರಣಗಳ ಪ್ರದರ್ಶನಕ್ಕೆ ಇಂದು ತೆರೆ

**ಬಳ್ಳಾರಿ,ಆ.1:** ವರಮಹಾಲಕ್ಷ್ಮಿ ಹಬ್ಬದ ಅಂಗವಾಗಿ ಅವಿರಾ ಉಡುಪು ವತಿಯಿಂದ ಮೂರು ದಿನಗಳ ವಿಶೇಷ ಸೀರೆ ಮತ್ತು ಬೆಳ್ಳಿ ಆಭರಣಗಳ ಹಬ್ಬವನ್ನು ಜುಲೈ 31ರಿಂದ ಆಗಸ್ಟ್ 2ರವರೆಗೆ ನಗರದ ಹೊಸ ಟ್ರಂಕ್ ರಸ್ತೆಯಲ್ಲಿರುವ ಹೋಟೆಲ್ ರಾಯಲ್ ಫೋರ್ಟ್‌ನಲ್ಲಿ ಆಯೋಜಿಸಲಾಗಿದೆ.

ಅವಿರಾ ಉಡುಪು ಸಂಸ್ಥೆಯ ಕಾರುಣ್ಯ ಗೌಡ ಉದ್ದೇಶಿಸಿ ಮಾತನಾಡಿದ ಅವರು, ಪ್ರತಿದಿನ ಬೆಳಿಗೆ 10ರಿಂದ ಸಂಜೆ 8 ಗಂಟೆಯವರೆಗೆ ಪ್ರದರ್ಶನ ಹಾಗೂ ಮಾರಾಟ ನಡೆಯಲಿದ್ದು, ವರಮಹಾಲಕ್ಷ್ಮಿ ಹಬ್ಬದ ಪ್ರಯುಕ್ತ ಗ್ರಾಹಕರಿಗೆ ವಿಶೇಷ ರಿಯಾಯಿತಿಗಳನ್ನು ನೀಡಲಾಗುತ್ತಿದೆ ಎಂದರು.

ಈ ಸೀರೆಹಬ್ಬದಲ್ಲಿ ಅಪ್ಪಟ ಮೈಸೂರು ಕ್ರೇಪ್ ರೇಷ್ಮೆ ಸೀರೆಗಳು, ಪ್ಯೂರ್ ಬನಾರಸಿ ಸೀರೆಗಳು, ಟಿಶ್ಯೂ ರೇಷ್ಮೆ ಸೀರೆಗಳು, ಪ್ಯೂರ್ ಮುಗಾ ರೇಷ್ಮೆ, ಪನ್ನು



ಕಲಂಕಾರಿ, ಕಾಟನ್, ಕಟ್ ವರ್ಕ್ ಕಸೂತಿ ಸೀರೆಗಳು, ಪ್ರಿಂಟೆಡ್ ಸೀರೆಗಳು ಹಾಗೂ ದೈನಂದಿನ ಬಳಕೆಯ ವಿವಿಧ ಮಾದರಿಯ ಸೀರೆಗಳು ವಿಶೇಷ ರಿಯಾಯಿತಿ ದರದಲ್ಲಿ ಲಭ್ಯವಿರಲಿವೆ.

ವರಮಹಾಲಕ್ಷ್ಮಿ ಹಬ್ಬದ ಅಂಗವಾಗಿ ಆಯ್ದ ಸೀರೆಗಳ ಮೇಲೆ ಶೇ.50ರವರೆಗೆ ರಿಯಾಯಿತಿ ನೀಡಲಾಗುತ್ತಿದ್ದು, ಉತ್ತಮ ಗುಣಮಟ್ಟದ ಉತ್ಪನ್ನಗಳನ್ನು ಗ್ರಾಹಕರಿಗೆ ಕೈಗೆಟುಕುವ ದರದಲ್ಲಿ ಒದಗಿಸಲಾಗುತ್ತಿದೆ ಎಂದು ತಿಳಿಸಿದರು.

# ಸೇವೆ ಮುಗಿಯಬಹುದು, ಸೇವೆಯ ನೆನಪು ಎಂದಿಗೂ ಮುಗಿಯುವುದಿಲ್ಲ: ಲಿಡ್ಕರ್ ಅಧ್ಯಕ್ಷ ಮುಂಡರಗಿ ನಾಗರಾಜ್



**ಬೆಂಗಳೂರು, ಆ 01.**ಸರ್ಕಾರಿ ಸೇವೆಯಿಂದ ನಿವೃತ್ತರಾದ ಲಿಡ್ಕರ್‌ನ ಬೆಳಗಾವಿ ಜಿಲ್ಲಾ ಸಂಯೋಜಕ ರುದ್ರೇಶಿ ಹಾಗೂ ಹಾವೇರಿ ಜಿಲ್ಲಾ ಸಂಯೋಜಕ ಕೃಷ್ಣಪ್ಪ ಅವರಿಗೆ ಬೆಂಗಳೂರಿನ ವಸಂತನಗರದಲ್ಲಿರುವ ಲಿಡ್ಕರ್ ಮುಖ್ಯ ಕಚೇರಿಯಲ್ಲಿ ಆತ್ಮೀಯ ಬೀಳ್ಕೊಡುಗೆ ಹಾಗೂ ಸನ್ಮಾನ ಸಮಾರಂಭ ನಡೆಯಿತು.

ಲಿಡ್ಕರ್ ಅಧ್ಯಕ್ಷ ಮುಂಡರಗಿ ನಾಗರಾಜ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಮಾರಂಭದಲ್ಲಿ ಇಬ್ಬರು ಅಧಿಕಾರಿಗಳ ಸೇವೆಯನ್ನು ಸ್ಮರಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅಧ್ಯಕ್ಷರು, ರುದ್ರೇಶಿ ಅವರು 41 ವರ್ಷ 6 ತಿಂಗಳಿಗೂ ಹೆಚ್ಚು ಅವಧಿಯ ಸೇವೆ ಸಲ್ಲಿಸಿರುವುದು ಲಿಡ್‌ಕರ್ ಇತಿಹಾಸದಲ್ಲೇ ಅಪರೂಪದ ಸಾಧನೆ. ಸಂಸ್ಥೆಯ ಬೆಳವಣಿಗೆಯೊಂದಿಗೆ ತಮ್ಮ ಬದುಕನ್ನೇ ಬೆಸೆದುಕೊಂಡು ಪ್ರಾಮಾಣಿಕವಾಗಿ ದುಡಿದ ಅವರು ಇಂದಿನ ಯುವ ಅಧಿಕಾರಿಗಳಿಗೆ ಮಾದರಿಯಾಗಿದ್ದಾರೆ ಎಂದು ಹೇಳಿದರು.

ಕೃಷ್ಣಪ್ಪ ಅವರೂ ತಮ್ಮ ಕರ್ತವ್ಯವನ್ನು ಅತ್ಯಂತ ನಿಷ್ಠೆಯಿಂದ ನಿರ್ವಹಿಸಿ, ಸಹೋದ್ಯೋಗಿಗಳ ಪ್ರೀತಿ ಮತ್ತು ಜನರ ವಿಶ್ವಾಸ ಗಳಿಸಿದ ಅಧಿಕಾರಿಯಾಗಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ನಿವೃತ್ತಿ ಎನ್ನುವುದು ಹುದ್ದೆಯಿಂದ ಮಾತ್ರ; ಸೇವೆಯಿಂದ ಅಲ್ಲ. ನಾವು ಕೆಲಸ ಮಾಡುವ ಅವಧಿಯಲ್ಲಿ ಸಮಾಜಕ್ಕೆ ಏನು ಕೊಟ್ಟೆವು, ಜನರ ಬದುಕಿನಲ್ಲಿ ಎಂತಹ ಬದಲಾವಣೆ ತಂದೆವು ಎಂಬುದೇ ನಮ್ಮ ನಿಜವಾದ ಪರಿಚಯ. ಕಚೇರಿಯ ಬಾಗಿಲು ತೆರೆಯುವ ಮೊದಲು ನಮ್ಮ ಮನಸ್ಸು ತೆರೆಯಬೇಕು. ಮಾನವೀಯತೆಯೇ ಪ್ರತಿಯೊಬ್ಬ ಸರ್ಕಾರಿ ನೌಕರನ ದೊಡ್ಡ ಸಂಪತ್ತು ಎಂದು ಅಧ್ಯಕ್ಷರು ಹೇಳಿದರು.


### ಬೀದರ್‌ನ 17 ಕೇಂದ್ರಗಳಲ್ಲಿ ಸಿಸಿ ಕ್ಯಾಮರಾ ಕಣ್ಗಾವಲು

# ಸಿವಿಲ್ ಪೊಲೀಸ್ ಕಾನ್‌ಸ್ಟೇಬಲ್ ಪರೀಕ್ಷೆಗೆ ಸಜ್ಜು; ಶಿಲ್ಪಾ ಶರ್ಮಾ

**ಬೀದರ್, ಆ. 1:** ಭಾನುವಾರ ಆಗಸ್ಟ್ 2ರಂದು ನಡೆಯಲಿರುವ ಸಿವಿಲ್ ಪೊಲೀಸ್ ಕಾನ್‌ಸ್ಟೇಬಲ್ ನೇಮಕಾತಿಯ ಲಿಖಿತ ಪರೀಕ್ಷೆಯನ್ನು ಪಾರದರ್ಶಕ ಹಾಗೂ ಅಕ್ರಮರಹಿತವಾಗಿ 17 ಕೇಂದ್ರಗಳಲ್ಲಿ ಸಿಸಿ ಕ್ಯಾಮರಾ ಕಣ್ಗಾವಲಿನಲ್ಲಿ ನಡೆಸಲು ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ವ್ಯಾಪಕ ಸಿದ್ಧತೆ ಕೈಗೊಂಡಿದೆ ಎಂದು ಜಿಲ್ಲಾಧಿಕರಿ ಶಿಲ್ಪಾ ಶರ್ಮಾ ತಿಳಿಸಿದರು.

ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರ ಅಧ್ಯಕ್ಷತೆಯಲ್ಲಿ ನಡೆದ ಸಿದ್ಧತಾ ಸಭೆಯಲ್ಲಿ ಎಲ್ಲಾ ಅಧಿಕಾರಿಗಳಿಗೆ ಅಗತ್ಯ ನಿರ್ದೇಶನಗಳನ್ನು ನೀಡಲಾಗಿದ್ದು, ನಗರದ 17 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಸುಸೂತ್ರವಾಗಿ ನಡೆಯುವಂತೆ ಕ್ರಮವಹಿಸಲಾಗಿದೆ.

ಬೆಳಿಗ್ಗೆ 10 ಗಂಟೆಗೆ ಕಲ್ಯಾಣ ಕರ್ನಾಟಕ ಭಾಗದ ಅಭ್ಯರ್ಥಿಗಳ ಪರೀಕ್ಷೆ ನಡೆಯಲಿದ್ದು, 4,745



ಅಭ್ಯರ್ಥಿಗಳು ಹಾಜರಾಗಲಿದ್ದಾರೆ. ಸಂಜೆ 4 ಗಂಟೆಗೆ ನಾನ್-ಕಲ್ಯಾಣ ಕರ್ನಾಟಕ ಭಾಗದ 5,882 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷಾ ಕೇಂದ್ರಗಳಲ್ಲಿ ಕುಡಿಯುವ ನೀರು, ಸ್ವಚ್ಛತೆ, ಬೆಳಕು ಹಾಗೂ ಗಾಳಿಯ ಸಮರ್ಪಕ ವ್ಯವಸ್ಥೆ ಕಲ್ಪಿಸಲು ಸೂಚನೆ ನೀಡಲಾಗಿದೆ. ಎಲ್ಲಾ ಕೇಂದ್ರಗಳಲ್ಲಿ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲಾಗುತ್ತಿದ್ದು, ಪ್ರತಿಯೊಂದು ಕೇಂದ್ರಕ್ಕೂ ವೀಕ್ಷಕರು, ಕಸ್ಟೋಡಿಯನ್‌ಗಳು ಹಾಗೂ ಡ್ರೆಸ್ ಕೋಡ್ ಅಧಿಕಾರಿಗಳನ್ನು ನೇಮಿಸಲಾಗಿದೆ. ಪ್ರಶ್ನೆ ಪತ್ರಿಕೆ ಮತ್ತು ಓಎಂಆರ್ ಶೀಟ್‌ಗಳನ್ನು ಸುರಕ್ಷಿತವಾಗಿ ತಲುಪಿಸಲು ಆರು ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಪರೀಕ್ಷೆಯಲ್ಲಿ ಯಾವುದೇ ರೀತಿಯ ಅಕ್ರಮ ನಡೆಯದಂತೆ ಕಟ್ಟುನಿಟ್ಟಿನ ನಿಯಮಗಳನ್ನು ಜಾರಿಗೊಳಿಸಲಾಗಿದೆ.

ಜ್ಯಾಮಿಟ್ರಿ ಬಾಕ್ಸ್, ಕ್ಯಾಲ್ಕುಲೇಟರ್, ಸ್ಕೇಲ್, ಲಾಗ್ ಟೇಬಲ್, ಪೆನ್ ಡ್ರೈವ್, ಎಲೆಕ್ಟ್ರಾನಿಕ್ ಪೆನ್, ಸ್ಕ್ಯಾನರ್ ಸೇರಿದಂತೆ ಯಾವುದೇ ಎಲೆಕ್ಟ್ರಾನಿಕ್ ಸಾಧನಗಳನ್ನು ತರಲು ಅವಕಾಶ ಇರುವುದಿಲ್ಲ. ಮೊಬೈಲ್, ಬ್ಲೂಟೂತ್, ಸ್ಮಾರ್ಟ್ ವಾಚ್, ಪೇಜರ್, ವ್ಯಾಲೆಟ್, ಬೆಲ್ಟ್, ಕ್ಯಾಪ್ ಹಾಗೂ ಗಾಗಲ್ಸ್‌ಗಳನ್ನೂ ಸಂಪೂರ್ಣ ನಿಷೇಧಿಸಲಾಗಿದೆ.

ಅಭ್ಯರ್ಥಿಗಳಿಗೆ ಕಟ್ಟುನಿಟ್ಟಿನ ಡ್ರೆಸ್ ಕೋಡ್ ಜಾರಿಯಲ್ಲಿದ್ದು, ಉದ್ದ ತೋಳಿನ ಉಡುಪು, ಕಿವಿ, ತಲೆ ಅಥವಾ ಮುಖ ಮುಚ್ಚುವ ವಸ್ತ್ರ, ಲೋಹದ ಆಭರಣಗಳನ್ನು ಧರಿಸಲು ಅವಕಾಶ ಇರುವುದಿಲ್ಲ. ಮೂಗುತಿ ಮತ್ತು ಮಂಗಳಸೂತ್ರಕ್ಕೆ ಮಾತ್ರ ವಿನಾಯಿತಿ ನೀಡಲಾಗಿದೆ. ಶೂ ಧರಿಸಲು ಅವಕಾಶವಿಲ್ಲದ ಕಾರಣ ಅಭ್ಯರ್ಥಿಗಳು ಕಡಿಮೆ ಹಿಮ್ಮಡಿಯ ಸ್ಯಾಂಡಲ್ ಧರಿಸಬೇಕು. ಧಾರ್ಮಿಕ ಉಡುಪು ಧರಿಸುವ ಅಭ್ಯರ್ಥಿಗಳು ಪರೀಕ್ಷೆ ಆರಂಭಕ್ಕೂ ಎರಡು ಗಂಟೆಗಳ ಮುಂಚಿತವಾಗಿ ಕೇಂದ್ರಕ್ಕೆ ಆಗಮಿಸಿ ಪರಿಶೀಲನೆಗೆ ಒಳಪಡಬೇಕಾಗಿದೆ.

ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200 ಮೀಟರ್ ವ್ಯಾಪ್ತಿಯಲ್ಲಿ ದಂಡ ಪ್ರಕ್ರಿಯಾ ಸಂಹಿತೆಯ ಸೆಕ್ಷನ್ 144ರಡಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದ್ದು, ಅನಗತ್ಯ ಜನಸಂದಣಿ ಮತ್ತು ಅಕ್ರಮ ಚಟುವಟಿಕೆಗಳನ್ನು ತಡೆಯಲು ಭದ್ರತಾ ವ್ಯವಸ್ಥೆಯನ್ನು ಬಿಗಿಗೊಳಿಸಲಾಗಿದೆ.

# ಮತ್ತೊಮ್ಮೆ ದಾಳಿಗೆ ಮುಂದಾದರೆ ಪ್ರಬಲ ತಿರುಗೇಟು: ಅಮೆರಿಕಕ್ಕೆ ಇರಾನ್ ಎಚ್ಚರಿಕೆ

ಟೆಹರಾನ್, ಆ.1: ಒಂದು ವೇಳೆ ಅಮೆರಿಕವು ತನ್ನ ಭೂಪ್ರದೇಶದ ಮೇಲೆ ಮತ್ತೊಂದು ಸುತ್ತಿನ ದಾಳಿಗಳನ್ನು ನಡೆಸಿದರೆ ಪ್ರಬಲ ತಿರುಗೇಟು ನೀಡಲು ಸಿದ್ಧವಿರುವುದಾಗಿ ಇರಾನ್ ಶನಿವಾರ ಎಚ್ಚರಿಸಿದೆ. ಜತೆಗೆ ಪಶ್ಚಿಮ ಏಷ್ಯಾದಾದ್ಯಂತ ಪ್ರಮುಖ ಇಸ್ರೇಲಿ ಮೂಲಸೌಕರ್ಯಗಳು ಮತ್ತು ಯುಎಸ್ ಇಂಧನ ಆಸ್ತಿಗಳ ಮೇಲೆ ದಾಳಿ ಮಾಡಲು ಸಮಗ್ರ ಯೋಜನೆ ರೂಪಿಸಿರುವುದಾಗಿಯೂ ಹೇಳಿದೆ.

ಇರಾನ್, ಇಸ್ರೇಲ್ ಮತ್ತು ಯುಎಸ್ ಒಳಗೊಂಡ 40 ದಿನಗಳ ಸಂಘರ್ಷ ಮುಗಿದ ಕೆಲ ತಿಂಗಳುಗಳ ನಂತರ, ವಾಷಿಂಗ್ಟನ್ ಇರಾನ್ ವಿರುದ್ಧ ಮರು ಸೇನಾ ಕ್ರಮಕ್ಕೆ ಚಿಂತಿಸುತ್ತಿದೆ ಎಂಬ ವರದಿಗಳ ನಡುವೆ ಇರಾನ್‌ನಿಂದ ಈ ಎಚ್ಚರಿಕೆ ಬಂದಿದೆ.

ಇರಾನ್‌ನ ಸುದ್ದಿ ಸಂಸ್ಥೆಯೊಂದಿಗೆ ಮಾತನಾಡಿದ ಹಿರಿಯ ಇರಾನಿಯನ್ ಭದ್ರತಾ ಅಧಿಕಾರಿಯೊಬ್ಬರು, ಇರಾನ್ ಮೂಲಸೌಕರ್ಯಗಳ ಮೇಲೆ ಯುಎಸ್ ಮತ್ತು ಇಸ್ರೇಲ್ ನಡೆಸಬಹುದಾದ ದಾಳಿಯ ವರದಿಗಳನ್ನು ಒಂದು ರೀತಿಯ ಹುಚ್ಚುತನ ಎಂದಿದ್ದಾರೆ. ಆದರೆ, ಟೆಹರಾನ್ ಪ್ರಬಲ ತಿರುಗೇಟು ನೀಡಲು ಸಮಗ್ರ ಯೋಜನೆಯನ್ನು ಸಿದ್ಧಪಡಿಸಿದೆ ಎಂದು ತಿಳಿಸಿದ್ದಾರೆ. "ನಾವು ಅದಕ್ಕೆ ಸಿದ್ಧರಾಗಿದ್ದೇವೆ," ಎಂದು ಅಧಿಕಾರಿ ಹೇಳಿದರು. ಅಲ್ಲದೆ,



ಸಂಘರ್ಷದ ಸಮಯದಲ್ಲಿ ಮತ್ತು ಅದರ ನಂತರದ ವಾರಗಳಲ್ಲಿ ಇರಾನ್ನ ಸಶಸ್ತ್ರ ಪಡೆಗಳು ತಮ್ಮ ಸಾಮರ್ಥ್ಯ ಮತ್ತು ಸಿದ್ಧತೆ ಎರಡನ್ನೂ ಈಗಾಗಲೇ ಪ್ರದರ್ಶಿಸಿವೆ ಎಂದು ಬೆಟ್ಟು ಮಾಡಿದರು.

ಪರಮಾಣು ಕಾರ್ಯಕ್ರಮದ ಕುರಿತು ಒಪ್ಪಂದಕ್ಕೆ ಬರಲು ಟೆಹರಾನ್ ವಿಳಂಬ ಮಾಡುವುದನ್ನು ಮುಂದುವರಿಸಿದರೆ ಇರಾನ್‌ನ ಮೂಲಸೌಕರ್ಯಗಳ ಮೇಲೆ ದಾಳಿ ಮಾಡಬಹುದು ಎಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನೀಡಿದ ಎಚ್ಚರಿಕೆಗಳ ಬೆನ್ನಲ್ಲೇ ಇರಾನ್ ಪ್ರತಿಕ್ರಿಯಿಸಿದೆ.

ಮತ್ತೊಂದು ವರದಿ ಪ್ರಕಾರ ಅಮೆರಿಕದ ಸೆಂಟ್ರಲ್ ಕಮಾಂಡ್ (ಸೆಂಟ್‌ಕಾಮ್) ಹಲವು ಆಯ್ಕೆಗಳನ್ನು ಸಿದ್ಧಪಡಿಸಿದೆ, ಆದರೆ ಯಾವುದೇ ಅಂತಿಮ ನಿರ್ಧಾರವನ್ನು ತೆಗೆದುಕೊಂಡಿಲ್ಲ ಮತ್ತು ಯೋಜನೆಗಳನ್ನು ಕೈಬಿಡುವ ಸಾಧ್ಯತೆಯೂ ಇದೆ. ಒಂದು ಯೋಜನೆ ಪ್ರಕಾರ ಇರಾನ್‌ನ ಕ್ಷಿಪಣಿ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡು ಎರಡು ವಾರ ಕಾರ್ಯಾಚರಣೆ ನಡೆಸುವುದು ಸೇರಿದೆ. ಜತೆಗೆ ಇರಾನ್‌ನ ಇಂಧನ ಸೌಲಭ್ಯಗಳ ಮೇಲಿನ ದಾಳಿಯ ಸಾಧ್ಯತೆಗಳನ್ನು ಸಹ ಪರಿಶೀಲಿಸುತ್ತಿದ್ದಾರೆ ಎನ್ನಲಾಗಿದೆ.

ಆದಾಗ್ಯೂ, ಜಾಗತಿಕ ತೈಲ ಪೂರೈಕೆಗೆ ಅಡ್ಡಿಪಡಿಸುವ ರೀತಿಯಲ್ಲಿ ಗಲ್ಫ್‌ನಾದ್ಯಂತ ಇರುವ ಇಂಧನ ಮೂಲಸೌಕರ್ಯಗಳ ಮೇಲೆ ಟೆಹರಾನ್ ಪ್ರತೀಕಾರ ತೀರಿಸಿಕೊಳ್ಳಬಹುದು ಎಂಬ ಕಳವಳದಿಂದಾಗಿ ಟ್ರಂಪ್ ಆಡಳಿತವು ಇರಾನ್‌ನ ಇಂಧನ ವಲಯದ ಮೇಲಿನ ದಾಳಿಗೆ ಇದುವರೆಗೆ ಅನುಮೋದನೆ ನೀಡುವುದರಿಂದ ಹಿಂದೆ ಸರಿದಿದೆ. ಆರ್ಥಿಕ ಒತ್ತಡವನ್ನು ಹೆಚ್ಚಿಸಲು ಇರಾನ್‌ನ ಇಂಧನ ಸೌಲಭ್ಯಗಳನ್ನು ಗುರಿಯಾಗಿಸುವ ಪರವಾಗಿ ಇಸ್ರೇಲ್ ರಕ್ಷಣಾ ಸಚಿವ ಇಸ್ರೇಲ್ ಕಾಟ್ಜ್ ಬಹಿರಂಗವಾಗಿ ವಾದಿಸಿದ್ದಾರೆ. ಆದರೆ ವಾಷಿಂಗ್ಟನ್ ಇಂತಹ ಕಾರ್ಯಾಚರಣೆಗಳಿಗೆ ಅನುಮೋದನೆ ನೀಡಿಲ್ಲ ಎನ್ನಲಾಗಿದೆ. ಅಗತ್ಯ ಬಿದ್ದರೆ ಬಲವಾಗಿ ಪ್ರತ್ಯುತ್ತರ ನೀಡಲು ಟ್ರಂಪ್ ಸಿದ್ಧರಾಗಿದ್ದಾರೆ ಎಂದು ವೈಟ್ ಹೌಸ್ ಸ್ಪಷ್ಟಪಡಿಸಿದೆ. ಆಡಳಿತವು ಅರ್ಥಪೂರ್ಣ ಮಾತುಕತೆ ಎಂದು ಪರಿಗಣಿಸುವ ಚರ್ಚೆಗಳಲ್ಲಿ ತೊಡಗಿಸಿಕೊಳ್ಳುವವರೆಗೆ ಇರಾನ್ ಪರಿಣಾಮಗಳನ್ನು ಎದುರಿಸುತ್ತಲೇ ಇರುತ್ತದೆ ಎಂದು ಪತ್ರಿಕಾ ಕಾರ್ಯದರ್ಶಿ ಕ್ಯಾರೋಲಿನ್ ಲೀವಿಟ್ ತಿಳಿಸಿದ್ದಾರೆ.

# ಖನಿಜ ಒಪ್ಪಂದದಂತೆ ಉಕ್ರೇನ್‌ನಿಂದ ತನಗೆ ಬೇಕಾದ್ದನ್ನು ಪಡೆಯಬಹುದು: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್

**ವಾಷಿಂಗ್ಟನ್, ಆ.1:** ಕಳೆದ ವರ್ಷ ಸಹಿ ಮಾಡಲಾದ ಖನಿಜಗಳ ಒಪ್ಪಂದದಡಿ ಉಕ್ರೇನ್‌ನ ಅಪರೂಪದ ಭೂಸಂಪನ್ಮೂಲಗಳಿಂದ (ರೇರ್ ಅರ್ಥ್ ಡೆಪಾಸಿಟ್ಸ್) ಅಮೆರಿಕವು ತನಗೆ ಬೇಕಾದುದನ್ನು ಪಡೆದುಕೊಳ್ಳಬಹುದು. ಹಾಗೂ ಇದರಿಂದ ಉಕ್ರೇನ್‌ಗೆ 2022ರಿಂದ ನೀಡಲಾದ ಅಮೆರಿಕದ ನೆರವಿನ ಮೌಲ್ಯಕ್ಕಿಂತ ಹೆಚ್ಚಿನ ಆದಾಯವನ್ನು ಗಳಿಸಬಹುದು ಎಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.



ಶುಕ್ರವಾರ ನಡೆದ ಖಾಸಗಿ ಸಂದರ್ಶನದಲ್ಲಿ ಮಾತನಾಡಿದ ಅವರು, ಮರುಪಾವತಿಯ ಮಾರ್ಗಗಳನ್ನು ಭದ್ರಪಡಿಸಿಕೊಳ್ಳದೆ ಕೀವ್‌ಗೆ 300 ಶತಕೋಟಿ ಡಾಲರ್‌ಗಿಂತಲೂ ಹೆಚ್ಚು ಮಿಲಿಟರಿ ನೆರವು ನೀಡಿದ್ದಕ್ಕಾಗಿ ನಿಕಟಪೂರ್ವ ಅಧ್ಯಕ್ಷ ಜೋ ಬೈಡೆನ್ ಅವರನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ಅಮೆರಿಕ–ಉಕ್ರೇನ್ ಖನಿಜಗಳ ಒಪ್ಪಂದವನ್ನು ಉಲ್ಲೇಖಿಸಿದ ಟ್ರಂಪ್, ಉಕ್ರೇನ್ ಅಪರೂಪದ ಭೂ ಸಂಪನ್ಮೂಲಗಳ ವಿಷಯದಲ್ಲಿ ಅತ್ಯಂತ ಸಮೃದ್ಧ ಮತ್ತು ಫಲವತ್ತಾದ ಭೂಮಿಯನ್ನು ಹೊಂದಿದೆ. ನಾವು ಅಪರೂಪದ ಭೂ ಸಂಪನ್ಮೂಲಗಳಿಗೆ ಸಂಬಂಧಿಸಿದಂತೆ [ಉಕ್ರೇನ್ ಜೊತೆ] ಒಪ್ಪಂದಕ್ಕೆ ಸಹಿ ಮಾಡಿದ್ದೇವೆ. ಯಾವಾಗ ಬೇಕಾದರೂ ಅಲ್ಲಿಗೆ ಹೋಗಿ ನಮಗೆ ಬೇಕಾದುದನ್ನು ಪಡೆದುಕೊಳ್ಳಬಹುದು. ಅದೊಂದು ಅತ್ಯುತ್ತಮ ಒಪ್ಪಂದವಾಗಿತ್ತು ಎಂದು ಟ್ರಂಪ್ ಹೇಳಿದ್ದಾರೆ.

ಏಪ್ರಿಲ್ 2025 ರಲ್ಲಿ ವಾಷಿಂಗ್ಟನ್‌ನಲ್ಲಿ ಸಹಿ ಮಾಡಲಾದ ಈ ಒಪ್ಪಂದವು 'ಯುಎಸ್–ಉಕ್ರೇನ್ ಪುನರ್ನಿರ್ಮಾಣ ಹೂಡಿಕೆ ನಿಧಿ'ಯನ್ನು ಸ್ಥಾಪಿಸಿತು. ಇದು ಉಕ್ರೇನ್‌ನ ಹೊಸ ಖನಿಜ, ತೈಲ ಮತ್ತು ಅನಿಲ ಯೋಜನೆಗಳಿಗೆ ವಾಷಿಂಗ್ಟನ್‌ಗೆ ಆದ್ಯತೆ ಮೇರೆಗೆ ಪ್ರವೇಶ ನೀಡುತ್ತದೆ. ಒಪ್ಪಂದವು ಲಿಥಿಯಂ, ಟೈಟಾನಿಯಂ, ಗ್ರಾಫೈಟ್ ಮತ್ತು ಯುರೇನಿಯಂ ಸೇರಿ ವಿವಿಧ ಸಂಪನ್ಮೂಲಗಳನ್ನು ಒಳಗೊಂಡಿದೆ. ಅದೇ ಸಮಯದಲ್ಲಿ ಉಕ್ರೇನ್ ತನ್ನ ನೈಸರ್ಗಿಕ ಸಂಪನ್ಮೂಲಗಳ ಮಾಲೀಕತ್ವವನ್ನು ಕಾಯ್ದುಕೊಳ್ಳುತ್ತದೆ ಮತ್ತು ಹೊಸ ಉತ್ಪನನ ಯೋಜನೆಗಳಿಂದ ಶೇ.50ರಷ್ಟು ಲಾಭವನ್ನು ಪಡೆಯುತ್ತದೆ.

ಕೀವ್‌ಗೆ ನೀಡಲಾದ ಯುಎಸ್ ಮಿಲಿಟರಿ ನೆರವಿನ ವೆಚ್ಚವನ್ನು ಮರುಪಡೆಯುವ ಮಾರ್ಗವಾಗಿ ಟ್ರಂಪ್ ಈ ಒಪ್ಪಂದವನ್ನು ಪದೇಪದೇ ಬಣ್ಣಿಸಿದ್ದಾರೆ.

ಮತ್ತೊಂದೆಡೆ, ಯುಎಸ್ 300 ಬಿಲಿಯನ್ ಡಾಲರ್‌ಗಿಂತಲೂ ಹೆಚ್ಚು ನೆರವು ನೀಡಿದೆ ಎಂಬ ಅವರ ವಾದವನ್ನು ಹೇಳಿಕೆಯನ್ನು ಅಧಿಕಾರಿಗಳು ಆಕ್ಷೇಪಿಸಿದ್ದಾರೆ. ಆಪರೇಷನ್ ಅಟ್ಲಾಂಟಿಕ್ ರಿಸಾಲ್ವ್‌ನ ಯುಎಸ್ ವಿಶೇಷ ಇನ್‌ಸ್ಪೆಕ್ಟರ್ ಜನರಲ್ ಪ್ರಕಾರ, ಒಟ್ಟು ಮೊತ್ತವು ಸುಮಾರು 195 ಶತಕೋಟಿ ಡಾಲರ್ ಆಗಿರಬಹುದು ಎಂದು ಅಂದಾಜಿಸಲಾಗಿದೆ.

ಖನಿಜಗಳ ಒಪ್ಪಂದವು ಕಾನೂನುಬದ್ಧವಾಗಿ ಜಾರಿಯಲ್ಲಿದ್ದರೂ ಮತ್ತು ಹನ್ನೆರಡಕ್ಕೂ ಹೆಚ್ಚು ಯೋಜನೆಗಳು ಪರಿಶೀಲನೆಯಲ್ಲಿದ್ದರೂ, ಅದರ ಅನುಷ್ಠಾನವು ಗಮನಾರ್ಹ ಸವಾಲುಗಳನ್ನು ಎದುರಿಸುತ್ತಲೇ ಇದೆ. ಮುಂದುವರಿಯುತ್ತಿರುವ ಯುದ್ಧದಿಂದ ಉಂಟಾಗುವ ಭದ್ರತಾ ಅಪಾಯಗಳು, ಭ್ರಷ್ಟಾಚಾರದ ಕಳವಳಗಳು, ಸೀಮಿತ ಭೂವೈಜ್ಞಾನಿಕ ದತ್ತಾಂಶ, ವಿದ್ಯುತ್ ಅಭಾವ ಮತ್ತು ಅಸಮರ್ಪಕ ಮೂಲಸೌಕರ್ಯಗಳು ಇದರಲ್ಲಿ ಸೇರಿವೆ.

ಒಪ್ಪಂದಕ್ಕೆ ಸಹಿ ಹಾಕಿದ ನಂತರ, ರಷ್ಯಾದ ಮಾಜಿ ಅಧ್ಯಕ್ಷ ಡಿಮಿಟ್ರಿ ಮೆಡ್ವೆಡೇವ್ ಪ್ರತಿಕ್ರಿಯಿಸಿ, ಟ್ರಂಪ್ ಉಕ್ರೇನ್ ಆಡಳಿತವನ್ನು "ಯುಎಸ್ ನೆರವಿಗಾಗಿ ತಮ್ಮ ಖನಿಜ ಸಂಪನ್ಮೂಲಗಳ ಮೂಲಕ ಪಾವತಿಸಬೇಕಾದ ಹಂತಕ್ಕೆ ತಂದಿದ್ದಾರೆ. ಈಗ ಅವರು ಕಣ್ಮರೆಯಾಗುತ್ತಿರುವ ದೇಶದ ರಾಷ್ಟ್ರೀಯ ಸಂಪತ್ತಿನೊಂದಿಗೆ ಮಿಲಿಟರಿ ಪೂರೈಕೆಗಳಿಗೆ ಪಾವತಿಸಬೇಕಾಗುತ್ತದೆ ಎಂದು ಬಣ್ಣಿಸಿದ್ದಾರೆ.

# ಉಕ್ರೇನ್ ಮೇಲೆ ರಷ್ಯಾ ಕ್ಷಿಪಣಿ ದಾಳಿ: 9 ಸಾವು

**ಕೀವ್, ಆ.1:** ಉಕ್ರೇನ್ ರಾಜಧಾನಿ ಕೀವ್ ನಗರದ ಮೇಲೆ ರಷ್ಯಾ ಶನಿವಾರ ಅತ್ಯಂತ ಭೀಕರವಾದ ಕ್ಷಿಪಣಿ ದಾಳಿ ನಡೆಸಿದೆ. ಈ ಭೀಕರ ದಾಳಿಯಲ್ಲಿ ಕನಿಷ್ಠ 9 ಮಂದಿ ಮೃತಪಟ್ಟಿದ್ದು, ನಾಲ್ವರು ಮಕ್ಕಳು ಸೇರಿದಂತೆ 28ಕ್ಕೂ ಹೆಚ್ಚು ಜನರು ತೀವ್ರವಾಗಿ ಗಾಯಗೊಂಡಿದ್ದಾರೆ. ಕೀವ್ ನಗರದಾದ್ಯಂತ ಹನ್ನೆರಡಕ್ಕೂ ಹೆಚ್ಚು ಭಾರಿ ಸ್ಫೋಟಗಳ ಸದ್ದು ಕೇಳಿಬಂದಿದೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ದಾಳಿಯಿಂದಾಗಿ ನಗರದ ಒಟ್ಟು 7 ಜಿಲ್ಲೆಗಳಲ್ಲಿ ಅಪಾರ ಹಾನಿ ಸಂಭವಿಸಿದೆ. ಡ್ನಿಪ್ರೊ ನದಿಯ ಎಡದಂಡೆಯಲ್ಲಿರುವ ಡರ್ನಿಟ್ಸ್ಕಿ ಜಿಲ್ಲೆಯಲ್ಲಿ 7 ಜನರು ಮತ್ತು ಬಲದಂಡೆಯಲ್ಲಿರುವ ಸೊಲೊಮಿಯನ್ಸ್ಕಿ ಜಿಲ್ಲೆಯಲ್ಲಿ ಇಬ್ಬರು ಸಾವನ್ನಪ್ಪಿದ್ದಾರೆ. ದಾಳಿಯಿಂದಾಗಿ ವಸತಿ ಕಟ್ಟಡಗಳು, ಕಾರುಗಳು ಬೆಂಕಿಗಾಹುತಿಯಾಗಿದ್ದು, ಹಲವೆಡೆ ವಿದ್ಯುತ್ ಸಂಪರ್ಕ ಕಡಿತಗೊಂಡಿದೆ. ಗಾಯಗೊಂಡ 28 ಜನರಲ್ಲಿ ನಾಲ್ವರು ಮಕ್ಕಳಿಗೆ ತೀವ್ರ ಗಾಯಗಳಾಗಿವೆ ಎಂದು ಪ್ರಾಸಿಕ್ಯೂಟರ್ ಜನರಲ್ ಕಚೇರಿ ಮಾಹಿತಿ ನೀಡಿದೆ. ಘಟನಾ ಸ್ಥಳದಲ್ಲಿ ಅಗ್ನಿಶಾಮಕ ದಳ ಮತ್ತು ರಕ್ಷಣಾ ಸಿಬ್ಬಂದಿ ಕಾರ್ಯಾಚರಣೆ ನಡೆಸುತ್ತಿದ್ದು, ಸುಟ್ಟು ಕರಕಲಾದ ಕಾರುಗಳ ನಡುವೆ ರಕ್ಷಣಾ ಕಾರ್ಯಾಚರಣೆ ಭರದಿಂದ ಸಾಗಿದೆ. ಮೃತದೇಹಗಳನ್ನು ಕಪ್ಪು ಚೀಲದಲ್ಲಿ ತುಂಬಿ ಸಾಗಿಸುತ್ತಿರುವ ದೃಶ್ಯಗಳು ಮನಕಲುಕುವಂತಿದ್ದವು. ಮಧ್ಯರಾತ್ರಿ 1:30ರ ಸುಮಾರಿಗೆ ಸೈರನ್ ಮೊಳಗಿದ ತಕ್ಷಣವೇ ಎಚ್ಚರವಾಯಿತು. ಸತತ ಸ್ಫೋಟಗಳಿಂದ ಕಟ್ಟಡದ ಛಾವಣಿ ಕುಸಿದು ಬಿತ್ತು ಎಂದು 68 ವರ್ಷದ ವೃದ್ಧೆ ನಾದಿಯಾ ಕೊಮರೊವಾ ಆತಂಕ ಹಂಚಿಕೊಂಡಿದ್ದಾರೆ.ದಾಳಿಯ ಕುರಿತು ಕಳವಳ ವ್ಯಕ್ತಪಡಿಸಿರುವ ಉಕ್ರೇನ್ ವಿದೇಶಾಂಗ ಸಚಿವ ಆಂಡ್ರಿ ಸಿಬಿಹಾ, ಕೀವ್ ಪಾಲಿಗೆ ಇದೊಂದು ನರಕಸದೃಶ ರಾತ್ರಿ. ಯುದ್ಧಭೂಮಿಯಲ್ಲಿ ಗುರಿ ಸಾಧಿಸುವಲ್ಲಿ ವಿಫಲವಾಗಿರುವ ರಷ್ಯಾ, ಹತಾಶೆಯಿಂದ ನಾಗರಿಕರ ಮೇಲೆ ದಾಳಿ ತೀವ್ರಗೊಳಿಸಿದೆ. ನಮಗೆ ತುರ್ತಾಗಿ ಹೆಚ್ಚುವರಿ ವಾಯು ರಕ್ಷಣಾ ವ್ಯವಸ್ಥೆಗಳ ಅಗತ್ಯವಿದೆ ಎಂದಿದ್ದಾರೆ. ಆದರೆ 2022ರಲ್ಲಿ ಪ್ರಾರಂಭವಾದ ಈ ಯುದ್ಧದಲ್ಲಿ ನಾಗರಿಕರನ್ನು ಗುರಿಯಾಗಿಸಿ ದಾಳಿ ನಡೆಸುತ್ತಿಲ್ಲ ಎಂದು ರಷ್ಯಾ ಎಂದಿನಂತೆ ನಿರಾಕರಿಸಿದೆ.ರಷ್ಯಾ–ಉಕ್ರೇನ್ ಯುದ್ಧವು ಐದನೇ ವರ್ಷಕ್ಕೆ ಕಾಲಿಟ್ಟಿದ್ದು, ಸೇನಾ ಮುನ್ನಡೆ ನಿಧಾನಗೊಂಡಿರುವ ಹಿನ್ನೆಲೆಯಲ್ಲಿ ರಷ್ಯಾ ಕೀವ್ ಮೇಲೆ ದಾಳಿ ಹೆಚ್ಚಿಸಿದೆ. ಈ ವಾರ ಕೀವ್ ಮೇಲೆ ನಡೆದ ಎರಡನೇ ಅತಿ ದೊಡ್ಡ ದಾಳಿ ಇದಾಗಿದ್ದು, ಗುರುವಾರ ಕ್ರಿವಿ ರಿಹ್ ಬಳಿ ನಡೆದ ದಾಳಿಯಲ್ಲೂ 9 ಮಂದಿ ಮೃತಪಟ್ಟಿದ್ದರು.

# ಪಿಓಕೆ ನಾಗರಿಕರ ಮೇಲೆ ಪಾಕ್ ಭದ್ರತಾ ಪಡೆಗಳ ದೌರ್ಜನ್ಯಕ್ಕೆ ಖಂಡನೆ: ಸ್ವತಂತ್ರ ತನಿಖೆಗೆ ಮಾನವಹಕ್ಕು ಪ್ರತಿಷ್ಠಾನ ಒತ್ತಾಯ

ಇಸ್ಲಾಮಾಬಾದ್, ಆ.1: ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ (ಪಿಓಕೆ) ನಡೆಯುತ್ತಿರುವ ಸಂಘರ್ಷದಲ್ಲಿ ಕಳೆದ ನಾಲ್ಕು ದಿನಗಳಲ್ಲಿ 50ಕ್ಕೂ ಹೆಚ್ಚು ಜನರನ್ನು ಕೊಲ್ಲಲಾಗಿದೆ ಹಾಗೂ ನೂರಾರು ಮಂದಿ ಗಾಯಗೊಂಡಿದ್ದಾರೆ ಎಂದು ಅಮೇರಿಕ ಮೂಲದ ಮಾನವಹಕ್ಕುಗಳ ಸಂಘಟನೆ ಕಾರ್ಯಕರ್ತರು ತಿಳಿಸಿದ್ದಾರೆ. ಶಾಂತಿಯುತ ಪ್ರತಿಭಟನಾಕಾರರ ಮೇಲೆ ಪಾಕಿಸ್ತಾನಿ ಭದ್ರತಾ ಪಡೆಗಳು ನಡೆಸಿದ ಹಿಂಸಾತ್ಮಕ ದಾಳಿಯನ್ನು ಸಂಘಟನೆ ಖಂಡಿಸಿದ್ದು, ಸ್ವತಂತ್ರ ತನಿಖೆಗೆ ಸಂಘಟನೆ ಆಗ್ರಹಿಸಿದೆ.

ಜಂಟಿ ಅವಾಮಿ ಕ್ರಿಯಾಸಮಿತಿಯ (ಜೆಎಎಸಿ) ಸದಸ್ಯ ಸರ್ದಾರ್ ಉಮರ್ ನಜೀರ್ ಕಾಶ್ಮೀರಿ ತಮ್ಮ ಎಕ್ಸ್ ಖಾತೆಯಲ್ಲಿ ಈ ಬಗ್ಗೆ ಮಾಹಿತಿ ಹಂಚಿಕೊಂಡಿದ್ದು, ಕಳೆದ ನಾಲ್ಕು ದಿನಗಳಲ್ಲಿ, ಪಡೆಗಳು ಭೀಕರ ಭಯೋತ್ಪಾದನೆಯ ಮೂಲಕ ನಮ್ಮ 50ಕ್ಕೂ ಹೆಚ್ಚು ಜನರನ್ನು ಕೊಂದಿವೆ ಮತ್ತು ನೂರಾರು ಜನರು ಗಾಯಗೊಂಡಿದ್ದಾರೆ" ಎಂದಿದ್ದಾರೆ.



ಪ್ರತಿಭಟನೆಯ ಮುಂಚೂಣಿಯಲ್ಲಿರುವ ಜೆಎಎಸಿ, ಮುಜಫರಾಬಾದ್ ಪ್ರದೇಶದಾದ್ಯಂತ ತಡರಾತ್ರಿಯವರೆಗೂ ಪ್ರದರ್ಶನಗಳು ಮುಂದುವರೆದಿದ್ದು, ಪ್ರತಿಭಟನಾಕಾರರು ತಮ್ಮ ಮೂಲಭೂತ ಹಕ್ಕುಗಳ ರಕ್ಷಣೆ ಮತ್ತು ಸ್ಥಳೀಯ ಅಧಿಕಾರಿಗಳು ಹಿಂದೆ ನೀಡಿದ್ದ ಭರವಸೆಗಳನ್ನು ಈಡೇರಿಸುವಂತೆ ಆಗ್ರಹಿಸುತ್ತಿದ್ದಾರೆ ಎಂದು ತಿಳಿಸಿದೆ. ಅಮೆರಿಕ ಮೂಲದ 'ಹ್ಯೂಮನ್ ರೈಟ್ಸ್ ಫೌಂಡೇಶನ್ ಮಾನವ ಹಕ್ಕುಗಳ ಸಂಸ್ಥೆಯು, ನಿರಾಯುಧ ಪ್ರತಿಭಟನಾಕಾರರ ಮೇಲೆ ಪಾಕಿಸ್ತಾನಿ ಭದ್ರತಾ ಪಡೆಗಳು ಬಲಪ್ರಯೋಗ ಮಾಡಿರುವುದನ್ನು ಖಂಡಿಸಿದೆ. ಅಲ್ಲದೆ, ಬಲಪ್ರಯೋಗ ಮತ್ತು ದಾಳಿಯನ್ನು ಕೊನೆಗೊಳಿಸಲು, ಮೊಬೈಲ್ ಸಂಪರ್ಕಗಳನ್ನು ಮರುಸ್ಥಾಪಿಸಲು ಮತ್ತು ಯಾವುದೇ ಕಾನೂನುಬಾಹಿರ ಬಲಪ್ರಯೋಗಕ್ಕೆ ಹೊಣೆಗಾರಿಕೆಯನ್ನು ಖಚಿತಪಡಿಸಿಕೊಳ್ಳಲು ಇಸ್ಲಾಮಾಬಾದ್‌ಗೆ ಕರೆ ನೀಡಿದೆ.


ಸ್ಥಳೀಯ ನಾಗರಿಕ ಹಕ್ಕುಗಳ ಗುಂಪನ್ನು ಉಲ್ಲೇಖಿಸಿ ಹೇಳಿರುವ ಪ್ರತಿಷ್ಠಾನ, ಭದ್ರತಾ ಪಡೆಗಳು ಸಾವಿರಾರು ಶಾಂತಿಯುತ ಪ್ರತಿಭಟನಾಕಾರರ ಮೇಲೆ ಗುಂಡಿನ ದಾಳಿ ನಡೆಸಿವೆ ಎಂದು ತಿಳಿಸಿದೆ. ಅಲ್ಲದೆ, ಸಾಕ್ಷ್ಯಗಳನ್ನು ಮರೆಮಾಚುವ ಸ್ಪಷ್ಟ ಯತ್ನದಲ್ಲಿ ಅಧಿಕಾರಿಗಳು ಆಸ್ಪತ್ರೆಗಳಿಂದ ಮೃತದೇಹಗಳನ್ನು ತೆರವುಗೊಳಿಸಿದ್ದಾರೆ ಮತ್ತು ಕಾರ್ಯಕರ್ತರನ್ನು ಬಂಧಿಸಿದ್ದಾರೆ ಎಂದೂ ಆರೋಪಿಸಿದೆ. "ಈ ದಾಳಿಯ ಜೊತೆಗೆ ಇಂಟರ್ನೆಟ್ ಸಂಪರ್ಕವನ್ನು ಸ್ಥಗಿತಗೊಳಿಸಲಾಗಿದೆ ಮತ್ತು ಮಾಧ್ಯಮಗಳ ಪ್ರವೇಶದ ಮೇಲೆ ತೀವ್ರ ನಿರ್ಬಂಧಗಳನ್ನು ಹೇರಲಾಗಿದೆ, ಇದರಿಂದಾಗಿ ಸ್ವತಂತ್ರ ವರದಿಗಾರಿಕೆ ಮಾಡುವುದು ಬಹುತೇಕ ಅಸಾಧ್ಯವಾಗಿದೆ" ಎಂದು ಸಂಸ್ಥೆ ಹೇಳಿದೆ.

"ವರದಿಯಾದ ಹತ್ಯೆಗಳ ಬಗ್ಗೆ ತನಿಖೆ ನಡೆಸಲು, ಹೊಣೆಗಾರಿಕೆಯನ್ನು ಖಚಿತಪಡಿಸಿಕೊಳ್ಳಲು ಮತ್ತು ಬಂಧಿತರಿಗೆ ಕಾನೂನು ಪ್ರಕ್ರಿಯೆಯನ್ನು ಎತ್ತಿಹಿಡಿಯಲು" ಪಾಕಿಸ್ತಾನಿ ಅಧಿಕಾರಿಗಳನ್ನು ಎಚ್‌ಆರ್‌ಎಫ್ ಆಗ್ರಹಿಸಿದೆ. ಅದೇ ಸಮಯದಲ್ಲಿ ಶಾಂತಿಯುತವಾಗಿ ಸಭೆ ಸೇರುವ ಮತ್ತು ಮುಕ್ತ ಅಭಿವ್ಯಕ್ತಿ ಹಕ್ಕನ್ನು ಚಲಾಯಿಸುವ ಜನರಿಗೆ ತನ್ನ ಬೆಂಬಲವನ್ನು ವ್ಯಕ್ತಪಡಿಸಿದೆ.

ಮತ್ತೊಂದೆಡೆ, ಯುನೈಟೆಡ್ ಕಾಶ್ಮೀರ ಪೀಪಲ್ಸ್ ನ್ಯಾಷನಲ್ ಪಾರ್ಟಿಯ (ಯುಕೆಪಿಎನ್‌ಪಿ) ನಿಯೋಗವು ಅದರ ಅಧ್ಯಕ್ಷ ಸರ್ದಾರ್ ಶೌಕತ್ ಅಲಿ ಕಾಶ್ಮೀರಿ ಅವರ ನೇತೃತ್ವದಲ್ಲಿ ನ್ಯೂಯಾರ್ಕ್‌ನಲ್ಲಿ ವಿಶ್ವಸಂಸ್ಥೆಯ ಅಧಿಕಾರಿಗಳನ್ನು ಭೇಟಿಯಾಗಿ ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿನ ಮಾನವ ಹಕ್ಕುಗಳ ಪರಿಸ್ಥಿತಿಯ ಬಗ್ಗೆ ಕಳವಳ ವ್ಯಕ್ತಪಡಿಸಿದೆ. ಇನ್ಮುಂದೆ ಯಾವುದೇ ಜೀವಹಾನಿಯಾಗದಂತೆ ತಡೆಯಲು ಮತ್ತು ನಾಗರಿಕರನ್ನು ರಕ್ಷಿಸಲು ಮಧ್ಯಪ್ರವೇಶಿಸುವಂತೆ ನಿಯೋಗವು ವಿಶ್ವಸಂಸ್ಥೆ, ಸರ್ಕಾರಗಳು ಮತ್ತು ಅಂತರರಾಷ್ಟ್ರೀಯ ಮಾನವ ಹಕ್ಕುಗಳ ಸಂಘಟನೆಗಳಿಗೆ ಮನವಿ ಮಾಡಿದೆ. ಜೊತೆಗೆ, ಬಲಪ್ರಯೋಗದಿಂದ ದೂರವಿರಲು, ಕೊಲ್ಲಲ್ಪಟ್ಟವರ ಮೃತದೇಹಗಳನ್ನು ಅವರ ಕುಟುಂಬಗಳಿಗೆ ಹಸ್ತಾಂತರಿಸಲು, ಬಲವಂತವಾಗಿ ನಾಪತ್ತೆಯಾದ ಅಥವಾ ಅನಿರ್ದಿಷ್ಟ ಬಂಧನಕ್ಕೊಳಗಾದವರ ವಿವರಗಳನ್ನು ಬಹಿರಂಗಪಡಿಸಲು ಮತ್ತು ಕಾನೂನುಬಾಹಿರವಾಗಿ ಬಂಧಿಸಲಾದ ವ್ಯಕ್ತಿಗಳನ್ನು ಬಿಡುಗಡೆ ಮಾಡಲು ಪಾಕಿಸ್ತಾನಿ ಅಧಿಕಾರಿಗಳಿಗೆ ಕರೆ ನೀಡಿದೆ.

# ಕಾಮನ್‌ವೆಲ್ತ್ ಜಾವಲಿನ್: ನೀರಜ್ ಬೆಳ್ಳಿ, ಯಶ್ವೀರ್ ಅಮೋಘ ಪ್ರದರ್ಶನದಿಂದ ಭಾರತಕ್ಕೆ ಜೋಡಿ ಪದಕ

ಗ್ಲಾಸ್ಗೋ, ಆ.1: ಕಾಮನ್ವೆಲ್ತ್ ಕ್ರೀಡಾಕೂಟದಲ್ಲಿ ಶನಿವಾರ ನಡೆದ ಪುರುಷರ ಜಾವೆಲಿನ್ ಎಸೆತದಲ್ಲಿ ಭಾರತವು ಸ್ಮರಣೀಯ ಡಬಲ್ ಪೋಡಿಯಂ ಮುಕ್ತಾಯವನ್ನು ಆಚರಿಸಿತು, ಒಲಿಂಪಿಕ್ ಚಾಂಪಿಯನ್ ನೀರಜ್ ಚೋಪ್ರಾ ಬೆಳ್ಳಿ ಪದಕ ಗೆದ್ದರು ಮತ್ತು ಯಶ್ವೀರ್ ಸಿಂಗ್ ಕೊನೆಯ ಸುತ್ತಿನಲ್ಲಿ ಕಂಚಿನ ಪದಕ ಗೆದ್ದರು. 80.97 ಮೀಟರ್ ದೂರದಲ್ಲಿ ಆರಂಭಿಕರಾಗಿ ಆಡಿದ್ದ ನೀರಜ್, ಉಳಿದ ಸುತ್ತುಗಳಲ್ಲಿ ದೃಢನಿಶ್ಚಯದ ಪ್ರಯತ್ನಗಳ ಹೊರತಾಗಿಯೂ ತಮ್ಮ ಋತುವಿನ ಅತ್ಯುತ್ತಮ ಪ್ರದರ್ಶನವನ್ನು ಸುಧಾರಿಸಲು ಸಾಧ್ಯವಾಗಲಿಲ್ಲ. 81.29 ಮೀಟರ್ ಮತ್ತು 80.73 ಮೀಟರ್ ದೂರ ಎಸೆದಿದ್ದರಿಂದ ಪತಿರಾಜ್ ಅವರ ಅಸಾಧಾರಣ ದಾಖಲೆಯನ್ನು ಸರಿಗಟ್ಟಲು ಸಾಧ್ಯವಾಗಲಿಲ್ಲ.




ಶ್ರೀಲಂಕಾದ ರುಮೇಶ್ ಪತಿರಾಜ್ ಅದ್ಭುತ ಚಾಂಪಿಯನ್‌ಶಿಪ್ ವಿಜೇತ ಎಸೆತದೊಂದಿಗೆ ಚಿನ್ನದ ಪದಕ ಗೆದ್ದರು. ಅತ್ಯುತ್ತಮ ಡೈಮಂಡ್ ಲೀಗ್ ಋತುವಿನ ನಂತರ ಕ್ರೀಡಾಕೂಟಕ್ಕೆ ಪ್ರವೇಶಿಸಿದ 23 ವರ್ಷದ ಶ್ರೀಲಂಕಾದ ಪತಿರಾಜ್, 89.75 ಮೀಟರ್ ಬೃಹತ್ ಪ್ರಯತ್ನದಿಂದ ತಕ್ಷಣವೇ ಪ್ರತಿಕ್ರಿಯಿಸಿದರು. ಈ ಎಸೆತವು ನೀರಜ್ ಅವರನ್ನು ಎರಡನೇ ಸ್ಥಾನಕ್ಕೆ ತಳ್ಳಿದ್ದಲ್ಲದೆ, ಸ್ಪರ್ಧೆಯ ಉಳಿದ ಭಾಗಕ್ಕೂ ಅಜೇಯರಾಗಿ ಸಾಬೀತಾಯಿತು, ಶ್ರೀಲಂಕಾಕ್ಕೆ ಸ್ಮರಣೀಯ ಚಿನ್ನದ ಪದಕವನ್ನು ತಂದುಕೊಟ್ಟಿತು.

# ಜೂಡೋದಲ್ಲಿ ಭಾರತಕ್ಕೆ ಎರಡು ಚಿನ್ನ: ಅಸ್ಮಿತಾ ಹರ್ಷ್ ಸಿಂಗ್ ಅಮೋಘ ಸಾಧನೆ–ಯಾಮಿನಿಗೆ ಬೆಳ್ಳಿ

ಗ್ಲಾಸ್ಗೋ, ಆ.1: ಕಾಮನ್‌ವೆಲ್ತ್ ಗೇಮ್ಸ್‌ನಲ್ಲಿ ಜೂಡೋ ಪಂದ್ಯದಲ್ಲಿ ಭಾರತ ಐತಿಹಾಸಿಕ ದಿನವನ್ನು ಆಚರಿಸಿತು, ಅಸ್ಮಿತಾ ಡೇ ಕ್ರೀಡೆಯಲ್ಲಿ ದೇಶದ ಮೊದಲ ಕಾಮನ್‌ವೆಲ್ತ್ ಕೂಟದ ಚಾಂಪಿಯನ್ ಆದರು, ನಂತರ ಹರ್ಷ್ ಸಿಂಗ್ ಶುಕ್ರವಾರ ಗ್ಲಾಸ್ಗೋದಲ್ಲಿ ಎರಡನೇ ಚಿನ್ನ ಗೆದ್ದರು, ಸ್ಮರಣೀಯ ಡಬಲ್ ಜಯ ಸಾಧಿಸಿದರು. ಮಹಿಳೆಯರ –48 ಕೆಜಿ ಫೈನಲ್‌ನಲ್ಲಿ ಕೆನಡಾದ ಹೈಡಿ ಕ್ವಾಚ್ ಅವರನ್ನು 2–1 ಅಂತರದಿಂದ ಸೋಲಿಸುವ ಮೂಲಕ ಅಸ್ಮಿತಾ ಡೇ ಚಿನ್ನದ ಓಟವನ್ನು ಪ್ರಾರಂಭಿಸಿದರು.

ತ್ರಿಪುರದ 22 ವರ್ಷದ ವಿಶ್ವದ ನಂ. 48, ಖೇಲೋ ಇಂಡಿಯಾ ಅಥ್ಲೀಟ್, ಒಂದು ಪಾಯಿಂಟ್ ಹಿನ್ನಡೆಯಿಂದ ಚೇತರಿಸಿಕೊಂಡು ಕ್ರೀಡೆಯಲ್ಲಿ ಭಾರತದ ಮೊದಲ ಕಾಮನ್ವೆಲ್ತ್ ಗೇಮ್ಸ್ ಪ್ರಶಸ್ತಿಯನ್ನು ಗೆಲ್ಲಲು ಅದ್ಭುತವಾದ ಸಂಯಮವನ್ನು ಪ್ರದರ್ಶಿಸಿದರು.



### ಯಾಮಿನಿ ಬೆಳ್ಳಿಗೆ ತೃಪ್ತಿಪಟ್ಟರು

ಮಹಿಳೆಯರ –57 ಕೆಜಿ ವಿಭಾಗದ ಫೈನಲ್‌ನಲ್ಲಿ, ಗೋಲ್ಡನ್ ಸ್ಕೋರ್‌ನಲ್ಲಿ ನಿರ್ಧರಿಸಲಾದ ಆಕರ್ಷಕ ಸ್ಪರ್ಧೆಯಲ್ಲಿ ಇಂಗ್ಲೆಂಡ್‌ನ ವಿಶ್ವದ 13ನೇ ಶ್ರೇಯಾಂಕದ ಅಸೆಲ್ಯಾ ಟೋಪ್ರಾಕ್ ವಿರುದ್ಧ ಅಲ್ಪ ಅಂತರದಿಂದ ಸೋತ ನಂತರ ಭಾರತದ ಯಾಮಿನಿ ಮೌರ್ಯ ಬೆಳ್ಳಿಗೆ ತೃಪ್ತಿಪಟ್ಟರು.



**ಭಾರತಕ್ಕೆ ಹರ್ಷ್ ನೀಡಿದ ಸಂತೋಷ ಇಮ್ಮಡಿ:**

ಪುರುಷರ –60 ಕೆಜಿ ವಿಭಾಗದ ಫೈನಲ್ನಲ್ಲಿ ಆಸ್ಟ್ರೇಲಿಯಾದ ಎರಡು ಬಾರಿಯ ಒಲಿಂಪಿಯನ್ ಜೋಶುವಾ ಕಾಟ್ಜ್ ವಿರುದ್ಧ ಅಸ್ಮಿತಾ ಜೊತೆ ಹರ್ಷ್ ಸಿಂಗ್ ಜಯಗಳಿಸಿ ಭಾರತದ ಎರಡನೇ ಚಿನ್ನದ ಪದಕ ವಿಜೇತೆಯಾದರು.

ಈ ಹಿಂದೆ ಸೆಮಿಫೈನಲ್ನಲ್ಲಿ ಆಸ್ಟ್ರೇಲಿಯಾದ ಪೆಡ್ರೊ ಕಾರ್ಲೋಸ್ ಅಂಟುನ್ ನೆಟೊ ಅವರನ್ನು ವಾಜಾ–ಆರಿ ಸೋಲಿಸಿದ್ದ ಹರ್ಷ್, ಚಿನ್ನದ ಪದಕದ ಹೋರಾಟದಲ್ಲೂ ಅದೇ ಆತ್ಮವಿಶ್ವಾಸವನ್ನು ಪ್ರದರ್ಶಿಸಿದರು.

23 ವರ್ಷದ ಭಾರತೀಯ ಆಟಗಾರ್ತಿ ಕ್ವಾರ್ಟರ್ ಫೈನಲ್‌ನಲ್ಲಿ ವನವಾಟುವಿನ ಮೊಂಥೌಯೆಲ್ ಅವರನ್ನು ಸೋಲಿಸುವ ಮೊದಲು ಮಲಾವಿಯ ಚಿಕೊಂಡಿ ಕಥೇವಾರಾ ವಿರುದ್ಧ ಜಯಗಳಿಸುವ ಮೂಲಕ ತಮ್ಮ ಅಭಿಯಾನವನ್ನು ಆರಂಭಿಸಿದ್ದರು.

# ಕಾಮನ್‌ವೆಲ್ತ್ ಬಾಕ್ಸಿಂಗ್: ಸಾಕ್ಷಿ, ಪ್ರಿಯಾ ಚಿನ್ನದ ಪದಕ

**ಗ್ಲಾಸ್ಗೋ, ಆ.1:** ಶನಿವಾರ ನಡೆದ ಕಾಮನ್ವೆಲ್ತ್ ಕ್ರೀಡಾಕೂಟದಲ್ಲಿ ಭಾರತದ ಬಾಕ್ಸರ್‌ಗಳಾದ ಸಾಕ್ಷಿ ಚೌಧರಿ ಮತ್ತು ಪ್ರಿಯಾ ಘಾಂಗ್ಹಾಸ್ ಸತತ ಪಂದ್ಯಗಳಲ್ಲಿ ಚಿನ್ನ ಗೆದ್ದರು. ಈ ಮೂಲಕ ರಿಂಗ್ನಲ್ಲಿ ದೇಶದ ರೋಮಾಂಚಕ ಓಟವನ್ನು ವಿಸ್ತರಿಸಿದರು ಮತ್ತು ಭಾರತದ ಬಾಕ್ಸಿಂಗ್ ಚಿನ್ನದ ಸಂಖ್ಯೆಯನ್ನು ನಾಲ್ಕಕ್ಕೆ ಏರಿಸಿದರು. ಮಹಿಳೆಯರ 51 ಕೆಜಿ ಫೈನ್ಲ್‌ನಲ್ಲಿ ಸಾಕ್ಷಿ ಇಂಗ್ಲೆಂಡ್‌ನ ರೂಬಿ ವೈಟ್ ಅವರನ್ನು ಸರ್ವಾನುಮತದ ನಿರ್ಣಯದಿಂದ 5–0 ಅಂತರದಿಂದ ಸೋಲಿಸಿದರು. ಎತ್ತರದ ಭಾರತೀಯ ಬಾಕ್ಸರ್ ಆರಂಭಿಕ ಗಂಟೆಯಿಂದ ಸ್ಪರ್ಧೆಯನ್ನು ನಿಯಂತ್ರಿಸಿದರು, ಕ್ಲೀನರ್ ಪಂಚ್‌ಗಳನ್ನು ಹೊಡೆದರು ಮತ್ತು ಅಂತಿಮ ಸುತ್ತಿನಲ್ಲಿ ಮತ್ತೊಂದು ಅದ್ಭುತ ಪ್ರದರ್ಶನದೊಂದಿಗೆ ಪಂದ್ಯವನ್ನು ಮುದ್ರೆ ಮಾಡಿದರು. ಪ್ರೀತಿ ಪವಾರ್ ಮತ್ತು ಜಾಸ್ಮಿನ್ ಲಂಬೋರಿಯಾ ಅವರ ಹಿಂದಿನ ವಿಜಯಗಳ ನಂತರ ಈ ಗೆಲುವು ಭಾರತಕ್ಕೆ ದಿನದ ಮೂರನೇ ಬಾಕ್ಸಿಂಗ್ ಚಿನ್ನವನ್ನು ತಂದುಕೊಟ್ಟಿತು. ನಿಮಿಷಗಳ ನಂತರ,



ಪ್ರಿಯಾ ಘಾಂಗ್ಹಾಸ್ ಕೆನಡಾದ ಮೇರಿ–ಬಥೌಲ್ ಅಲ್–ಅಹ್ಮದಿಹ್ ಅವರನ್ನು ಸೋಲಿಸಿ ಮಹಿಳೆಯರ 60 ಕೆಜಿ ಪ್ರಶಸ್ತಿಯನ್ನು ಗೆದ್ದುಕೊಂಡರು. ಆರಂಭಿಕ ಸುತ್ತಿನ ನಂತರ ಹೆಚ್ಚಿನ ನ್ಯಾಯಾಧೀಶರ ಸ್ಕೋರ್ಕಾರ್ಡ್ಗಳಲ್ಲಿ ಹಿಂದುಳಿದ ನಂತರ, ವಿಶ್ವದ 4 ನೇ ಶ್ರೇಯಾಂಕದ ಭಾರತೀಯ ಆಟಗಾರ್ತಿ ಎರಡನೇ ಸುತ್ತಿನಲ್ಲಿ ಉತ್ಸಾಹಭರಿತ ಪುನರಾಗಮನವನ್ನು ಪ್ರದರ್ಶಿಸಿದರು, ಐದು ನ್ಯಾಯಾಧೀಶರಲ್ಲಿ ನಾಲ್ವರು ತಮ್ಮ ಪರವಾಗಿ ಆವೇಗವನ್ನು ಬದಲಾಯಿಸಲು ಒಪ್ಪಿಗೆ ನೀಡಿದರು. ನಿರ್ಣಾಯಕ ಸುತ್ತಿನಲ್ಲಿ ಶಾಂತತೆಯನ್ನು ಪ್ರದರ್ಶಿಸಿದ ಪ್ರಿಯಾ, ತನ್ನ ಅಂತರವನ್ನು ಕಾಯ್ದುಕೊಂಡರು, ಯುದ್ಧತಂತ್ರದ ಬಾಕ್ಸಿಂಗ್ ಅನ್ನು ಪ್ರದರ್ಶಿಸಿದರು ಮತ್ತು ವಿಭಜಿತ ತೀರ್ಪು ಪಡೆಯಲು ಸಾಕಷ್ಟು ಮಾಡಿದರು, ನಾಲ್ವರು ನ್ಯಾಯಾಧೀಶರು ಅವರಿಗೆ ಸ್ಪರ್ಧೆಯನ್ನು ನೀಡಿದರು ಮತ್ತು ಒಬ್ಬರು ಕೆನಡಾದ ಆಟಗಾರ್ತಿಯ ಪರವಾಗಿ ತೀರ್ಪು ನೀಡಿದರು. ಪ್ರಿಯಾ ಅವರ ವಿಜಯವು ಭಾರತದ ಬಾಕ್ಸಿಂಗ್ ಚಿನ್ನದ ಸಂಖ್ಯೆಯನ್ನು ನಾಲ್ಕಕ್ಕೆ ಕೊಂಡೊಯ್ದಿತು, ಇದು ಗ್ಲಾ ಸ್ಗೋ ಕ್ರೀಡಾಕೂಟದಲ್ಲಿ ಕ್ರೀಡೆಯಲ್ಲಿ ದೇಶದ ಪ್ರಾಬಲ್ಯವನ್ನು ಒತ್ತಿಹೇಳಿತು. ಒಲಿಂಪಿಕ್ ಪದಕ ವಿಜೇತೆ ಲೊವ್ಲಿನಾ ಬೊರ್ಗೊಹೈನ್, ಅರುಂಧತಿ ಚೌಧರಿ, ಸಚಿನ್ ಸಿವಾಚ್, ಅಂಕುಶ್ ಪಂಗಲ್ ಮತ್ತು ನರೇಂದರ್ ಬೆರ್ವಾಲ್ ಸೇರಿದಂತೆ ಹಲವಾರು ಭಾರತೀಯ ಬಾಕ್ಸರ್‌ಗಳು ದಿನದ ನಂತರ ತಮ್ಮ ಫೈನಲ್ಗಳಲ್ಲಿ



## ಮಹಿಳೆಯರ 70 ಕೆಜಿ ಬಾಕ್ಸಿಂಗ್ ಅರುಂಧತಿಗೆ ಚಿನ್ನ

ಶನಿವಾರ ಕಾಮನ್ವೆಲ್ತ್ ಕ್ರೀಡಾಕೂಟದಲ್ಲಿ ಭಾರತ ತನ್ನ ಚಿನ್ನದ ಓಟವನ್ನು ಮುಂದುವರೆಸಿತು, ಅರುಂಧತಿ ಚೌಧರಿ ಇಂಗ್ಲೆಂಡ್‌ನ ಚಾಂಟೆಲ್ಲೆ ರೀಡ್ ಅವರನ್ನು ಸೋಲಿಸಿ ಮಹಿಳೆಯರ 70 ಕೆಜಿ ಪ್ರಶಸ್ತಿಯನ್ನು ಪಡೆದರು, ಇದರಿಂದಾಗಿ ದೇಶದ ಬಾಕ್ಸಿಂಗ್ ಚಿನ್ನದ ಸಂಖ್ಯೆಯನ್ನು ಐದಕ್ಕೆ ಏರಿಸಿತು. ಅರುಂಧತಿ ಸಮತೋಲಿತ ಯುದ್ಧತಂತ್ರದ ಪ್ರದರ್ಶನವನ್ನು ನೀಡಿದರು, ಪಂದ್ಯದ ವೇಗವನ್ನು ನಿಯಂತ್ರಿಸಿದರು ಮತ್ತು ತೀರ್ಪುಗಾರರಿಂದ ಸರ್ವಾನುಮತದ ತೀರ್ಪು ಪಡೆಯುವ ಮೊದಲು ತೀಕ್ಷ್ಣವಾದ ಚಲನೆ ಮತ್ತು ಪ್ರತಿದಾಳಿಗಳೊಂದಿಗೆ ರೀಡ್ ಅವರನ್ನು ನಿರಾಶೆಗೊಳಿಸಿದರು. ಭಾರತದ ಗಮನಾರ್ಹ ಬಾಕ್ಸಿಂಗ್ ಅಭಿಯಾನಕ್ಕೆ ಈ ಚಿನ್ನವು ಸೇರಿಸಿತು, ಸೆಮಿಫೈನಲ್‌ನಲ್ಲಿ ಕ್ಲೀನ್ ಸ್ವೀಪ್ ಮಾಡಿದ ನಂತರ ಭಾರತ ಫೈನಲ್‌ನಲ್ಲಿ 10 ಬಾಕ್ಸರ್‌ಗಳನ್ನು ಕಣಕ್ಕಿಳಿಸಿತ್ತು, ಕಾಮನ್ವೆಲ್ತ್ ಕ್ರೀಡಾಕೂಟದಲ್ಲಿ ತನ್ನ ಅತ್ಯುತ್ತಮ ಬಾಕ್ಸಿಂಗ್ ಪ್ರದರ್ಶನವನ್ನು ಖಚಿತಪಡಿಸಿತು.

